ಸಂಪುಟ: 21, ಸಂಚಿಕೆ: 153, ಪುಟಗಳು: 8, ಮಂಗಳವಾರ, 12 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com



ನೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

### ಪಂಚಾಂಗ

(ಮಂಗಳವಾರ 12, ಮಾರ್ಚ್ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು
- ಪಾಲ್ಗುಣ ಮಾಸ, ಶುಕ್ಲ ಪಕ್ಷ
- ವಾರ : ಸೋಮವಾರ, ತಿಥಿ : ಷಷ್ಟಿ
- ನಕ್ಷತ್ರ : ಉತ್ತರಭಾದ್ರ, ಯೋಗ : ಶುಭ
- ಕರಣ : ಬವ
- ರಾಹುಕಾಲ: 03 : 30 PM -04 : 59 PM
- ಗುಳಿಕಕಾಲ: 12 : 32 PM - 02 : 01 PM
- ಯಮಗಂಡಕಾಲ: 09 : 34 AM - 11 : 03 AM

# ಶಸ್ತ್ರಾಸ್ತ್ರಗಳ ಆಮದು, ವಿಶ್ವದಲ್ಲೇ ಭಾರತ ನಂಬರ್ ಒನ್

**ನವದೆಹಲಿ:** ಶಸ್ತ್ರಾಸ್ತ್ರಗಳ ಆಮದಿನಲ್ಲಿ ಭಾರತವೇ ಉಳಿದೆಲ್ಲಾ ರಾಷ್ಟ್ರಗಳಿಗಿಂತ ಮುಂಚೂಣಿಯಲ್ಲಿದೆ. ಭಾರತ ಮತ್ತು ರಷ್ಯಾ ನಡುವಿನ ರಕ್ಷಣಾ ಸಂಬಂಧಗಳ ಮೇಲೆ ಉಕ್ರೇನ್ ಯುದ್ಧದ ಪರಿಣಾಮ ಈಗ ಸ್ಪಷ್ಟವಾಗಿ ಗೋಚರಿಸುತ್ತಿದೆ. 2019 ಮತ್ತು 2023 ರ ನಡುವೆ, ರಷ್ಯಾದಿಂದ ಭಾರತಕ್ಕೆ ಶಸ್ತ್ರಾಸ್ತ್ರ ರಫ್ತು ಶೇಕಡಾ 50 ರಷ್ಟು ಕಡಿಮೆಯಾಗಿದೆ. ಮೊದಲು, 1960 ಮತ್ತು 1964 ರ ನಡುವೆ, ಭಾರತದ ಒಟ್ಟು ಶಸ್ತ್ರಾಸ್ತ್ರ ಆಮದುಗಳಲ್ಲಿ ರಷ್ಯಾದ (ಮಾಜಿ ಸೋವಿಯತ್ ಒಕ್ಕೂಟ) ಪಾಲು ಶೇಕಡಾ 50 ಕ್ಕಿಂತ ಕಡಿಮೆ ಇತ್ತು. 2019 ಮತ್ತು 2023 ರ ನಡುವೆ ಭಾರತವು ಅತಿದೊಡ್ಡ ಶಸ್ತ್ರಾಸ್ತ್ರ ಆಮದು ಮಾಡಿಕೊಳ್ಳುವ ದೇಶವಾಗಿದೆ ಎಂದು ಖಳಕಖ ಹೇಳಿದೆ.

ಒಂದೆಡೆ ರಷ್ಯಾ ಹಿಂದುಳಿದಿದ್ದರೆ, ಮತ್ತೊಂದೆಡೆ ಅಮೆರಿಕ, ಫ್ರಾನ್ಸ್ ಉತ್ತಮವಾಗಿವೆ. ಈ ಎರಡೂ ದೇಶಗಳು ಶಸ್ತ್ರಾಸ್ತ್ರ ಮಾರುಕಟ್ಟೆಯಲ್ಲಿ ಪೈಪೋಟಿ ನಡೆಸುತ್ತಿವೆ. 2014-18 ಮತ್ತು 2019-23 ರ ನಡುವೆ ಭಾರತದ ಶಸ್ತ್ರಾಸ್ತ್ರ ಆಮದು ಶೇಕಡಾ 4.7 ರಷ್ಟು ಹೆಚ್ಚಾಗಿದೆ ಎಂದು ಸ್ಟಾಕ್‌ಹೋಮ್ ಮೂಲದ ಸಂಸ್ಥೆ ಖಳಕಖ ಹೇಳಿದೆ. ಇದರಲ್ಲಿ ರಷ್ಯಾ ಕೇವಲ ಶೇ.36 ಪಾಲನ್ನು ಹೊಂದಿತ್ತು. ಭಾರತಕ್ಕೆ ಅತಿ ಹೆಚ್ಚು ಶಸ್ತ್ರಾಸ್ತ್ರಗಳನ್ನು ರಫ್ತು ಮಾಡಿದ ದೇಶ ರಷ್ಯಾ.



ಶಸ್ತ್ರಾಸ್ತ್ರ ರಫ್ತಿನ ವಿಷಯದಲ್ಲಿ ರಷ್ಯಾ ಈಗ ವಿಶ್ವದ ಮೂರನೇ ಸ್ಥಾನವನ್ನು ತಲುಪಿದೆ. ಇಲ್ಲಿಯವರೆಗೆ, ರಷ್ಯಾ ಅಮೆರಿಕದ ನಂತರ ಬರುತ್ತಿತ್ತು, ಆದರೆ 2019 ಮತ್ತು 2023 ರ ನಡುವೆ ರಷ್ಯಾ ಮೂರನೇ ಸ್ಥಾನವನ್ನು ತಲುಪಿತು. ರಷ್ಯಾವನ್ನು ಭಾರತದ ಮತ್ತೊಂದು ಸ್ನೇಹ ದೇಶವಾದ ಫ್ರಾನ್ಸ್‌ನಿಂದ ಬದಲಾಯಿಸಲಾಗಿದೆ.

ರಷ್ಯಾದ ಶಸ್ತ್ರಾಸ್ತ್ರ ರಫ್ತು ಶೇ.53ರಷ್ಟು ಕುಸಿದಿದೆ. ಅದೇ ಸಮಯದಲ್ಲಿ, ಫ್ರಾನ್ಸ್‌ನ ಶಸ್ತ್ರಾಸ್ತ್ರ ರಫ್ತು ಶೇಕಡಾ 47 ರಷ್ಟು ಹೆಚ್ಚಾಗಿದೆ. 2019 ರಲ್ಲಿ, 31 ದೇಶಗಳು ರಷ್ಯಾದಿಂದ ಶಸ್ತ್ರಾಸ್ತ್ರಗಳನ್ನು ಖರೀದಿಸುತ್ತಿದ್ದವು, ಆದರೆ 2023 ರಲ್ಲಿ ಈ ಅಂಕಿ ಅಂಶವು 12 ದೇಶಗಳಿಗೆ ಕುಸಿದಿದೆ. ಪುಟ 8

## ಬ್ಯಾಡಗಿ ಮೆಣಸಿನಕಾಯಿ ದರ ಕುಸಿತ: ಕಚೇರಿಗೆ ಕಲ್ಲು ತೂರಾಟ

# 25 ರೈತರು ಪೊಲೀಸರ ವಶಕ್ಕೆ

**ಹಾವೇರಿ:** ರಾಜ್ಯದಲ್ಲಿ ಭೀಕರ ಬರಗಾಲ ಆವರಿಸಿದೆ. ಬರಕ್ಕೆ ಸೆಡ್ಡುಹೊಡೆದ ರೈತರು ಬಂಪರ್ ಮೆಣಸಿಕಾಯಿ ಬೆಳೆ ಬೆಳೆದಿದ್ದಾರೆ. ಆದರೆ ವಿಶ್ವಪ್ರಸಿದ್ಧ ಬ್ಯಾಡಗಿ ಮೆಣಸಿನಕಾಯಿ ಮಾರುಕಟ್ಟೆಯಲ್ಲಿ ದಿಢೀರ್ ಬೆಲೆ ಕುಸಿತವಾಗಿದೆ. ಇದರಿಂದ ರೊಚ್ಚಿಗೆದ್ದ ಮೆಣಸಿನಕಾಯಿ ಬೆಳೆಗಾರರು ಅಗ್ನಿಶಾಮಕ ವಾಹನ ಸೇರಿ 12 ವಾಹನಗಳಿಗೆ ಬೆಂಕಿ ಹಚ್ಚಿದರು. ಅಲ್ಲದೇ ಎಪಿಎಂಸಿ ಕಚೇರಿಗೆ ಕಲ್ಲು ತೂರಿದರು. ಹೀಗಾಗಿ ಪೊಲೀಸರು 25ಕ್ಕೂ ಹೆಚ್ಚು ರೈತರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

**ಆಗಿದ್ದೇನು:** ವಿಶ್ವಪ್ರಸಿದ್ಧ ಬ್ಯಾಡಗಿ ಮೆಣಸಿಕಾಯಿ ಮಾರುಕಟ್ಟೆ ಮೆಣಸಿನಕಾಯಿ ದರ ಧಿಡೀರನೆ ಕುಸಿತವಾಗಿದ್ದು, ಇದರಿಂದ ಬೇಸರ, ಆಕ್ರೋಶಗೊಂಡ ರೈತರು ಅಧಿಕಾರಿಗಳಿಗೆ ಖಾರ ಅರೆದಿದ್ದಾರೆ. ಕಳೆದ ವಾರ ಒಂದು ಕ್ವಿಂಟಾಲ್ ಮೆಣಸಿನಕಾಯಿ 20 ಸಾವಿರಕ್ಕೆ ಮಾರಾಟವಾಗಿತ್ತು. ಅದೇ ರೇಟ್ ಸಿಗುತ್ತೆ ಅಂತ ರೈತರು ಸೋಮವಾರ (ಮಾ.11) ರಂದು ಮೆಣಸಿನಕಾಯಿ



ತಂದಿದ್ದರು. ಇತಿಹಾಸದಲ್ಲೇ ಮೊದಲ ಬಾರಿಗೆ ಬರೋಬ್ಬರಿ 5 ಲಕ್ಷ ಕ್ವಿಂಟಾಲ್ ಮೆಣಸಿನಕಾಯಿ ಮಾರುಕಟ್ಟೆಯೊಳಗೆ ಬಂದಿತ್ತು. ಸೋಮವಾರ ವಹಿವಾಟು ಆರಂಭ ಆಗುತ್ತಿದ್ದಂತೆ ರೈತರೆಲ್ಲ ಶಾಕ್ ಆಗಿದ್ದರು. ಯಾಕಂದರೆ ಕಳೆದ ವಾರ 20 ಸಾವಿರ ರೂ. ಇದ್ದ ದರ, ಸೋಮವಾರ ದಿಢೀರನೆ 12 ಸಾವಿರಕ್ಕೆ ಕುಸಿದಿತ್ತು.

ಯಾವಾಗ ಕ್ವಿಂಟಾಲ್ ಗೆ 12 ಸಾವಿರ ರೂ. ಅಂತ ತಿಳಿಯಿತು, ರೈತರು ಕೆರಳಿ ನಿಂತಿದ್ದರು. ಬ್ಯಾಡಗಿ ಎಪಿಎಂಸಿ ಕಚೇರಿ ಮೇಲೂ ಕಲ್ಲು ತೂರಿ ಗ್ಲಾಸ್‌ಗಳನ್ನು ಪೀಸ್ ಪೀಸ್ ಮಾಡಿದರು. ಪುಟ 8

## ಸಂಕ್ಷಿಪ್ತ ಸುದ್ದಿ

### ಮಗಳಿಂದ ದೂರ ಇರು ಎಂದಿದ್ದಕ್ಕೆ ಹತ್ಯೆ ಮಾಡಿದ ಪ್ರಿಯಕರ



**ಬಾಗಲಕೋಟೆ:** ತಮ್ಮ ಪ್ರೀತಿಯನ್ನು ನಿರಾಕರಿಸಿ, ನನ್ನ ಮಗಳಿಂದ ದೂರ ಇರು ಎಂದಿದ್ದಕ್ಕೆ ಯುವಕ ತಾನು ಪ್ರೀತಿಸಿದ್ದ ಯುವತಿಯ ತಂದೆಯನ್ನೇ ಕೊಲೆ ಮಾಡಿದ್ದಾನೆ. ಬಾಗಲಕೋಟೆ ತಾಲೂಕಿನ ಭಗವತಿ ಗ್ರಾಮದಲ್ಲಿ ಪ್ರವೀಣ್ ಕಾಂಬಳೆ ಎಂಬ ಯುವಕ ಮಚ್ಚಿನಿಂದ ಕೊಚ್ಚಿ ಸಂಗನಗೌಡ ಪಾಟೀಲ್(52) ಎಂಬುವವರ ಕೊಲೆ ಮಾಡಿದ್ದಾನೆ. ಪುಟ 2

### ತಡರಾತ್ರಿ ಮಹಿಳೆಗೆ ಬಸ್‌ನಲ್ಲಿ ಕಂಡಕ್ಟರ್ ನಿಂದ ಲೈಂಗಿಕ ಕಿರುಕುಳ



**ರಾಯಚೂರು:** ಸರ್ಕಾರಿ ಬಸ್ ನಲ್ಲಿ ತಡ ರಾತ್ರಿ ಪ್ರಯಾಣಿಸುತ್ತಿದ್ದ ಮಹಿಳೆಗೆ ಕಂಡಕ್ಟರ್ ಲೈಂಗಿಕ ಕಿರುಕುಳ ನೀಡಿದ್ದಾನೆ ಎಂಬ ಆರೋಪ ಕೇಳಿ ಬಂದಿದೆ. ರಾಯಚೂರಿನಿಂದ ಬೆಂಗಳೂರಿಗೆ ಪ್ರಯಾಣಿಸುವಾಗ ಕಂಡಕ್ಟರ್ ತನ್ನ ಸೊಂಟ ಮುಟ್ಟಿದ್ದಾನೆ ಎಂದು ಮಹಿಳೆ ಆರೋಪಿಸಿದ್ದಾರೆ. ಪುಟ 2

### ಬಾಲ್ಯವಿವಾಹ ಬೇಡ ಅಂದಿದ್ದಕ್ಕೆ ಪತ್ನಿ ಕಾಲು ಮುರಿದ ಪತಿ

**ಬೆಳಗಾವಿ:** ಮಗಳಿಗೆ ಬಾಲ್ಯವಿವಾಹ ಮಾಡಿಸುವುದು ಬೇಡ ಅಂದಿದ್ದಕ್ಕೆ ಗಂಡ-ಹೆಂಡತಿ ನಡುವೆ ಜಗಳವಾಗಿದ್ದು ಪತಿ ತನ್ನ ಪತ್ನಿ ಕಾಲು ಮುರಿದು ವಿಕೃತಿ ಮೆರೆದಿರುವ ಘಟನೆ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಹಾರುಗೊಪ್ಪ ಗ್ರಾಮದಲ್ಲಿ ನಡೆದಿದೆ. ಪುಟ 2

## 10 ಹೊಸ ವಂದೇ ಭಾರತ್ ರೈಲುಗಳಿಗೆ ಚಾಲನೆ ನೀಡಿದ ಪ್ರಧಾನಿ

# ಹೊಸ ಮಾರ್ಗಗಳ ವಿಸ್ತರಣೆ

**ಅಹಮದಾಬಾದ್:** ಪ್ರಧಾನಿ ನರೇಂದ್ರ ಮೋದಿ ಅವರು ಇಂದು (ಮಾ.12) ಗುಜರಾತ್‌ನ ಅಹಮದಾಬಾದ್‌ನಲ್ಲಿ 10 ಹೊಸ ವಂದೇ ಭಾರತ್ ರೈಲುಗಳು ಮತ್ತು ಇತರ ರೈಲು ಸೇವೆಗಳಿಗೆ ಹಸಿರು ನಿಶಾನೆ ತೋರಿಸಿದ್ದಾರೆ. ಇನ್ನು ಪ್ರಧಾನಿ ಮೋದಿ ಅವರು ಈ ಭೇಟಿಯು ರಾಜ್ಯದಲ್ಲಿ ರೈಲ್ವೆ ಮೂಲಸೌಕರ್ಯ, ಸಂಪರ್ಕ ಮತ್ತು ಪೆಟ್ರೋಕೆಮಿಕಲ್ ವಲಯವನ್ನು ಉತ್ತೇಜಿಸುವ ಸಲುವಾಗಿದೆ. , ಪ್ರಧಾನಿ ಮೋದಿ ಅವರು ರೈಲ್ವೆ ವರ್ಕ್‌ಶಾಪ್‌ಗಳು, ಲೋಕೋ ಶೆಡ್‌ಗಳು ಮತ್ತು ಪಿಟ್‌ಲೈನ್‌ಗಳು/ಕೋಚಿಂಗ್ ಡಿಪೋಗಳು ಸೇರಿದಂತೆ ವಿವಿಧ ರೈಲ್ವೆ ಯೋಜನೆಗಳಿಗೆ ಶಂಕುಸ್ಥಾಪನೆ ಮಾಡಿದ್ದಾರೆ.

ಮೋದಿ ಅವರು ಫಾಲ್ಟನ್-ಬಾರಾಮತಿ ಹೊಸ ಮಾರ್ಗ, ಎಲೆಕ್ಟ್ರಿಕ್ ಟ್ರಾಕ್ಷನ್ ಸಿಸ್ಟಮ್ ಮೇಲ್ದರ್ಜೆಗೇರಿಸುವ ಕೆಲಸ ಮತ್ತು ಮೀಸಲಾದ ಸರಕು ಸಾಗಣೆ ಕಾರಿಡಾರ್ (ಡಿಎಫ್‌ಸಿ) ನ ಹೊಸ ವಿಭಾಗಗಳನ್ನು ಕೂಡ ಉದ್ಘಾಟಿಸಿದರು.

**ವಂದೇ ಭಾರತ್ ರೈಲುಗಳು:** ಅಹಮದಾಬಾದ್-ಮುಂಬೈ ಸೆಂಟ್ರಲ್, ಸಿಕಂದರಾಬಾದ್-ವಿಶಾಖಪಟ್ಟಣಂ ಮತ್ತು ಮೈಸೂರು ಸೇರಿದಂತೆ ವಿವಿಧ ಮಾರ್ಗಗಳಲ್ಲಿ 10 ಹೊಸ ವಂದೇ ಭಾರತ್ ರೈಲುಗಳಿಗೆ ಪ್ರಧಾನಿ ಮೋದಿ ಚಾಲನೆ ನೀಡಿದರು. ಎಂಜಿಆರ್ ಸೆಂಟ್ರಲ್ (ಚೆನ್ನೈ). ಸಂಪರ್ಕವನ್ನು ಹೆಚ್ಚಿಸಲು ನಾಲ್ಕು ವಂದೇ ಭಾರತ್ ರೈಲುಗಳ ಮಾರ್ಗಗಳನ್ನು ವಿಸ್ತರಿಸಲಾಗಿದೆ.

**ಹೊಸ ಮಾರ್ಗಗಳು ಮತ್ತು ವಿಸ್ತರಣೆಗಳು:** ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಲಕ್ನೋ-ಡೆಹ್ರಾಡೂನ್, ಅಹಮದಾಬಾದ್-ಮುಂಬೈ ಸೆಂಟ್ರಲ್ ಮತ್ತು ನ್ಯೂ ಜಲ್ಪೈಗುರಿ-ಪಾಟ್ನಾ ಮುಂತಾದ ಮಾರ್ಗಗಳಲ್ಲಿ ಕಾರ್ಯನಿರ್ವಹಿಸುತ್ತವೆ. ಇನ್ನು ಹೆಚ್ಚುವರಿಯಾಗಿ ಈಗಾಗಲೇ ಅಸ್ತಿತ್ವದಲ್ಲಿರುವ ನಾಲ್ಕು ರೈಲುಗಳನ್ನು ಹೊಸ ಸ್ಥಳಗಳಿಗೆ ವಿಸ್ತರಿಸಲಾಗಿದೆ. ಪುಟ 2



## ಸಿಎಎ ಸ್ವೀಕಾರಾರ್ಹವಲ್ಲ ತಮಿಳುನಾಡಿನಲ್ಲಿ ಜಾರಿಯಾಗದಂತೆ ನೋಡಿಕೊಳ್ಳಬೇಕು

# ದಳಪತಿ ವಿಜಯ್

**ಚೆನ್ನೈ:** ಪೌರತ್ವ ತಿದ್ದುಪಡಿ ಕಾಯ್ದೆ ಸ್ವೀಕಾರಾರ್ಹವಲ್ಲ, ತಮಿಳುನಾಡಿನಲ್ಲಿ ಅದನ್ನು ಜಾರಿಯಾಗದಂತೆ ನೋಡಿಕೊಳ್ಳಬೇಕು ಎಂದು ತಮಿಳು ನಟ ದಳಪತಿ ವಿಜಯ್ ಹೇಳಿದ್ದಾರೆ. ಕೇಂದ್ರ ಸರ್ಕಾರವು ಸಿಎಎ ಜಾರಿ ಮಾಡಿದ ಬಳಿಕ, ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ವಿಜಯ್ ಸಿಎಎ ಜಾರಿಯನ್ನು ಒಪ್ಪಲು ಸಾಧ್ಯವಿಲ್ಲ. ಪೌರತ್ವ ತಿದ್ದುಪಡಿ 2019ರಂತಹ ಯಾವುದೇ ಕಾನೂನನ್ನು ದೇಶದಲ್ಲಿ ಸಹಿಸಲು ಸಾಧ್ಯವಿಲ್ಲ. ದೇಶದಲ್ಲಿ ಎಲ್ಲರೂ ಸಹಬಾಳ್ವೆಯಿಂದ ಬಾಳುತ್ತಿರುವಾಗ ಇಂತಹ ಕಾನೂನಿನ ಅಗತ್ಯ ಏನಿದೆ ಎಂದಿದ್ದಾರೆ. ಪುಟ 2



## ಡಿಕೆ ಸಹೋದರರನ್ನು ಕಿರಾತಕ ಎಂದಿದ್ದಕ್ಕೆ ಇಕ್ಬಾಲ್ ಹುಸೇನ್ ಕಿಡಿ

# ಜೆಡಿಎಸ್ ವಿರುದ್ಧ ವಾಗ್ದಾಳಿ

**ರಾಮನಗರ:** ಡಿಸಿಎಂ ಡಿಕೆ ಶಿವಕುಮಾರ್ ಹಾಗೂ ಸಂಸದ ಡಿಕೆ ಸುರೇಶ್ ಸಹೋದರರ ವಿರುದ್ಧ 'ಕಿರಾತಕ' ಪದ ಬಳಕೆ ಮಾಡಿದ್ದಕ್ಕೆ ರಾಮನಗರ ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ತೀಕ್ಷ್ಣವಾಗಿ ಪ್ರತಿಕ್ರಿಯೆ ನೀಡಿದ್ದಾರೆ. ರಾಮನಗರದಲ್ಲಿ ಮಾತನಾಡಿದ ಅವರು, ನಮ್ಮ ನಾಯಕರು ಕಿರಾತಕರಲ್ಲ, ನೀವು ಕಿರಾತಕರು. ಆ ಪದ ನಿಮಗೆ ಅನ್ವಯಿಸುತ್ತದೆಯೇ ವಿನಃ ನಮ್ಮ ನಾಯಕರಿಗಲ್ಲ. ನಾನೊಬ್ಬ ಅಲ್ಪಸಂಖ್ಯಾತ, ಜನ ನನಗೆ ಪ್ರೀತಿ ಮತ್ತು ನೀತಿ ಮೇಲೆ ಗೆಲ್ಲಿಸಿದ್ದಾರೆಯೇ ಹೊರತು ಜಾತಿ ನೋಡಿಯಲ್ಲ ಎಂದು ಜೆಡಿಎಸ್ ನಾಯಕರಿಗೆ ತಿರುಗೇಟು ನೀಡಿದ್ದಾರೆ.

ಹಳ್ಳಿಗಳಲ್ಲಿ ನಡೆಯುತ್ತದೆ ಅಂತ ನೀವು ನಿಮ್ಮ ಚೇಲಾಗಳಿಗೆ ಹೇಳಿ ಕಿತಾಪತಿ ಮಾಡಬಹುದು. ಜನ ನನ್ನ ಕ್ಷೇತ್ರದಲ್ಲಿ ನೆಮ್ಮದಿಯಿಂದ ಇದ್ದಾರೆ. ಚುನಾವಣೆಯ ಬಳಿಕ ಪಕ್ಷ, ಜಾತಿ ಭೇದ ಮರೆತು ಕೆಲಸಮಾಡುತ್ತಾ ಇದ್ದೇವೆ. ಬಹಳಷ್ಟು ನಾಯಕರು



ಜೆಡಿಎಸ್ ಬಿಟ್ಟು ಕಾಂಗ್ರೆಸ್ ಸೇರುತ್ತಾ ಇದ್ದಾರೆ. ನಮ್ಮ ಕೆಲಸ, ನಮ್ಮ ಪ್ರೀತಿ, ವಿಶ್ವಾಸ ನೋಡಿ ಬರುತ್ತಾ ಇದ್ದಾರೆ ಎಂದು ಇಕ್ಬಾಲ್ ಹೇಳಿದರು.

ರಾಮನಗರದಲ್ಲಿ ಕಮಿಷನ್ ಆರೋಪಕ್ಕೆ ಸಂಬಂಧಿಸಿ ಪ್ರತಿಕ್ರಿಯಿಸಿ ಹೆಚ್.ಡಿ ಕುಮಾರಸ್ವಾಮಿಗೆ ತಿರುಗೇಟು ನೀಡಿದ ಹುಸೇನ್, ನಿಮ್ಮ ಸರಕಾರ ಇದ್ದಾಗ ಏನೇನು ಮಾಡಿದ್ದೀರಿ ನೋಡಿದ್ದೇವೆ. ಪಿಡಿಓ ಮಟ್ಟದಲ್ಲಿ ಹಣದ ವ್ಯವಹಾರ ಮಾಡಿದ್ದೀರಿ.

# 90 ಅಭ್ಯರ್ಥಿಗಳ 2ನೇ ಪಟ್ಟಿ ಸಿದ್ಧಪಡಿಸಿದ ಬಿಜೆಪಿ



**ನವದೆಹಲಿ:** ಭಾರತೀಯ ಜನತಾ ಪಕ್ಷ(ಬಿಜೆಪಿ)ದ ಕೇಂದ್ರ ಚುನಾವಣಾ ಸಮಿತಿಯು ಲೋಕಸಭಾ ಚುನಾವಣೆಗೆ 90 ಅಭ್ಯರ್ಥಿಗಳ ಎರಡನೇ ಪಟ್ಟಿಯನ್ನು ಸಿದ್ಧಪಡಿಸಿದ್ದು ಇಂದೇ ಬಿಡುಗಡೆ ಮಾಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಪಕ್ಷದ ಮೂಲಗಳ ಪ್ರಕಾರ ಶೀಘ್ರದಲ್ಲೇ ಅಧಿಕೃತ ಘೋಷಣೆ ನಿರೀಕ್ಷಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರ ಸಮ್ಮುಖದಲ್ಲಿ ಈ ಅಭ್ಯರ್ಥಿಗಳನ್ನು ಅಂತಿಮಗೊಳಿಸಲಾಯಿತು. ಕೇಂದ್ರ ಸಚಿವರಾದ ಅನುರಾಗ್ ಠಾಕೂರ್, ಪ್ರಹ್ಲಾದ್ ಜೋಶಿ, ನಿತ್ಯಾನಂದ್ ರೈ ಹಾಗೂ ಪಕ್ಷದ ಸಂಸದರು ಮತ್ತು ವಿವಿಧ ರಾಜ್ಯಗಳ ಮುಖಂಡರು ಸೇರಿದಂತೆ ಪ್ರಮುಖರು ಪಾಲ್ಗೊಂಡಿದ್ದರು. ಪುಟ 2

# ಆಂಧ್ರದಲ್ಲಿ ಎನ್‌ಡಿಎ ಸೀಟು ಹಂಚಿಕೆ ಸೂತ್ರ ಅಂತಿಮ

**ಆಂಧ್ರ:**ದೇಶದಲ್ಲಿ ಮುಂಬರುವ ಸಾರ್ವತ್ರಿಕ ಚುನಾವಣೆಗೆ ಇನ್ನು ಸ್ವಲ್ಪ ದಿನಗಳಷ್ಟೇ ಬಾಕಿ ಉಳಿದಿದೆ. ರಾಜಕೀಯ ಪಕ್ಷಗಳು ಚುನಾವಣೆಗೆ ಭಾರಿ ಸಿದ್ಧತೆ ನಡೆಸಿವೆ. ಮತ್ತೊಂದೆಡೆ ದಕ್ಷಿಣದಲ್ಲಿ ಬಿಜೆಪಿ ತನ್ನ ಕೋಟೆಯನ್ನು ಬಲಪಡಿಸಲು ಪ್ರಾದೇಶಿಕ ಪಕ್ಷಗಳೊಂದಿಗೆ ಮೈತ್ರಿ ಮಾಡಿಕೊಳ್ಳುವಲ್ಲಿ ನಿರತವಾಗಿವೆ. ಇದೀಗ ಬಿಜೆಪಿಯು ಚಂದ್ರಬಾಬು ನಾಯ್ಡು ಅವರ ತೆಲುಗು ದೇಶಂ ಪಕ್ಷ(ಟಿಡಿಪಿ)ಮತ್ತು ಪವನ್ ಕಲ್ಯಾಣ್ ಅವರ ಪಕ್ಷ ಜನಸೇನೆ ಜತೆಗೆ ಮೈತ್ರಿ ಮಾಡಿಕೊಂಡಿದ್ದು, ಮುಂಬರುವ ಲೋಕಸಭೆ ಹಾಗೂ ವಿಧಾನಸಭಾ ಚುನಾವಣೆಗಳನ್ನು ಒಟ್ಟಿಗೆ ಎದುರಿಸಲು ನಿರ್ಧರಿಸಿವೆ ಎನ್ನುವ ಮಾಹಿತಿ ಕೇಳಿಬಂದಿದೆ.



ಮೂರು ಪಕ್ಷಗಳ ನಡುವೆ ಸೀಟು ಹಂಚಿಕೆ ಸೂತ್ರಕ್ಕೆ ಒಪ್ಪಿಗೆ ದೊರೆತಿದ್ದು, ಆಂಧ್ರಪ್ರದೇಶದಲ್ಲಿ ಟಿಡಿಪಿ 17 ಕ್ಷೇತ್ರಗಳಲ್ಲಿ,ಮ ಬಿಜೆಪಿ 6ಸ್ಥಾನಗಳಲ್ಲಿ, ಪವನ್ ಕಲ್ಯಾಣ್ ಅವರ ಜನಸೇನೆ 2 ಸ್ಥಾನಗಳಲ್ಲಿ ಸ್ಪರ್ಧಿಸಲಿವೆ. ಪುಟ 2

## ಬೆಂಗಳೂರು ಸಂಚಾರ ದಟ್ಟಣೆ ನಿಯಂತ್ರಣಕ್ಕೆ

# ಸ್ಯಾಟ್‌ಲೈಟ್ ಟೌನ್‌ರಿಂಗ್ ರೋಡ್ ಅಸ್ತ್ರ

**ಬೆಂಗಳೂರು:** ಬೆಂಗಳೂರು ನಗರ ಸಂಚಾರ ದಟ್ಟಣೆಗೆ ದೇಶದಲ್ಲಿ ಹೆಸರುವಾಸಿಯಾಗಿದೆ. ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಸಾಕಷ್ಟು ಹರಸಾಹಸ ಮಾಡಲಾಗುತ್ತಿದೆ. ನಗರದ ಒಳಗೆ ಪ್ರವೇಶಿಸುವ ವಾಹನಗಳ ಸಂಖ್ಯೆ ಹೆಚ್ಚುತ್ತಲಿದೆ. ಇದರಿಂದ ಉದ್ಯಾನವನ ನಗರದಲ್ಲಿ ಸಂಚಾರ ದಟ್ಟಣೆ ಹೆಚ್ಚಾಗುತ್ತಿದೆ. ಇದನ್ನು ತಡೆಯುವ ನಿಟ್ಟಿನಲ್ಲಿ ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರೋಡ್ ನ ಎರಡು ಮಾರ್ಗಗಳನ್ನು ನಿರ್ಮಿಸಲಾಗಿದೆ. ದಾಬಸ್ ಪೇಟೆ-ದೊಡ್ಡಬಳ್ಳಾಪುರ ಬೈಪಾಸ್ ವಿಭಾಗ NH-648 (42 ಕಿಮೀ) (1,438 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ) ಮತ್ತು ದೊಡ್ಡಬಳ್ಳಾಪುರ ಬೈಪಾಸ್ -ಹೊಸಕೋಟೆ NH-648 (37.6 ಕಿಮೀ) (1,317 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ) ಈ ಎರಡು ರಸ್ತೆಗಳು ಬೆಂಗಳೂರು ಸಂಚಾರ ದಟ್ಟಣೆಯನ್ನು ನಿಯಂತ್ರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ.

ಭಾರತ್ ಮಾಲಾ ಪರಿಯೋಜನಾ ಅಡಿಯಲ್ಲಿ




ಸ್ಯಾಟ್ ಲೈಟ್ ಟೌನ್ ರಿಂಗ್ ರೋಡ್ ನಿರ್ಮಾಣವಾಗುತ್ತಿದೆ. 288 ಕಿಮೀ ಉದ್ದದ ರಸ್ತೆ ಇದಾಗಿದ್ದು, ಕರ್ನಾಟಕದಲ್ಲಿ 243 ಕಿಮೀ ಮತ್ತು ತಮಿಳುನಾಡಿನಲ್ಲಿ 45 ಕಿಮೀ ಹಾದು ಹೋಗುತ್ತದೆ. ಈ ಸ್ಯಾಆಟ್ ಲೈಟ್ ಟೌನ್ ರಿಂಗ್ ರೋಡ್‌ಗೆ 2022ರಲ್ಲಿ ಪ್ರಧಾನಿ ನರೇಂದ್ರ ಪುಟ 2

## ಬೆಂಗಳೂರಿನ ಸ್ಮಶಾನಗಳಲ್ಲೂ ನೀರಿಲ್ಲ

# ಅಂತ್ಯ ಸಂಸ್ಕಾರ ಮಾಡಲಾಗದೆ ಪರದಾಟ

**ಬೆಂಗಳೂರು:** ಬೆಂಗಳೂರಿನಲ್ಲಿ ಹನಿ ನೀರಿಗೂ ಪರದಾಡುವಂತಾಗಿದೆ. ಜೀವಜಲಕ್ಕಾಗಿ ಜನ ಪ್ರತಿ ದಿನ ಹೋರಾಡ್ತಿದ್ದಾರೆ. ಸಿಲಿಕಾನ್ ಸಿಟಿಗೆ ಎದುರಾಗಿರುವ ಭೀಕರ ಬರದ ಎಫೆಕ್ಟ್ ಐಪಿಎಲ್ ಟೂರ್ನಿಗೂ ತಟ್ಟುವ ಆತಂಕ ಮೂಡಿದೆ. ಮಾರ್ಚ್ 29ರಂದು ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆಯುವ ಮ್ಯಾಚ್ ಬೇರೆ ಕಡೆಗೆ ಶಿಫ್ಟ್ ಮಾಡಿ ಎಂಬ ಆಗ್ರಹ ಕೇಳಿಬಂದಿದೆ. ತಮ್ಮ ಊರುಗಳಿಗೆ ತೆರಳಲು ಟೆಕ್ಕಿಗಳು ವರ್ಕ್ ಫ್ರಂ ಹೋಂಗೆ ಬೇಡಿಕೆ ಇಟ್ಟಿದ್ದಾರೆ. ಇದೆಲ್ಲ ಒಂದು ಕಡೆಯಾದ್ರೆ ನೀರಿನ ಅಭಾವ ಎಷ್ಟರ ಮಟ್ಟಿಗೆ ಇದೆಯಂದ್ರೆ ಅಂತ್ಯಸಂಸ್ಕಾರಕ್ಕೂ ಸ್ಮಶಾನಗಳಲ್ಲಿ ನೀರು ಇಲ್ಲ.

ಬೆಂಗಳೂರಿನ ಕ್ರಿಮಿಟೋರಿಯಂಗಳಲ್ಲಿ ಜಲಕಂಟಕ ಎದುರಾಗಿದೆ. ಸತ್ತವರ ಅಂತಿಮ ಪೂಜಾ ವಿಧಿವಿಧಾನಗಳನ್ನ ನೆರವೇರಿಸಲು ಸಂಬಂಧಿಕರು ಪರದಾಡುತ್ತಿದ್ದಾರೆ. ಮೃತಪಟ್ಟವರನ್ನು ಸ್ಮಶಾನದಲ್ಲಿ ತಂದು ಅಂತಿಮ ಪೂಜಾ ವಿಧಾನಗಳನ್ನು ಮಾಡುವ ವೇಳೆ ಮಣ್ಣಿನ ಮಡಿಕೆಯಲ್ಲಿ ನೀರನ್ನು



ತುಂಬಿ ಕುಡಿಕೆ ಹೊಡೆಯಲು ನೀರಿಲ್ಲ. ಅಲ್ಲದೆ ಕೆಲವೊಂದು ಸಂಪ್ರದಾಯಗಳಲ್ಲಿ ಶವವನ್ನು ಮನೆಯಿಂದ ಸ್ಮಶಾನಕ್ಕೆ ತಂದು ಅಲ್ಲಿ ಸ್ನಾನ ಮಾಡಿಸಿ ಪೂಜೆ ಮಾಡಲಾಗುತ್ತದೆ ನಂತರ ಅಂತಿಮ ದರ್ಶನಕ್ಕೆ ಬಂದವರು ಕೈ ಕಾಲು ತೊಳೆದುಕೊಂಡು ಹೋಗುವುದು ಪದ್ಧತಿ. ಆದರೆ ಸ್ಮಶಾನಗಳಲ್ಲಿ ನೀರು ಸಿಗದ ಕಾರಣ ಶವಕ್ಕೆ ಸ್ನಾನ ಮಾಡಿಸಲು ಆಗುತ್ತಿಲ್ಲ. ಯಾವುದೇ ಪೂಜಾ ವಿಧಿವಿಧಾನಗಳನ್ನು ಮಾಡಲು ಆಗ್ತಿಲ್ಲ. ಇದರಿಂದ ಮೃತರ ಕುಟುಂಬದವರಿಗೆ ಸಾಕಷ್ಟು ತೊಂದರೆ ಉಂಟಾಗುತ್ತಿದೆ. ಪುಟ 2

## 28ಕ್ಕೆ 25 ಗೆದ್ದೇ ಗೆಲ್ತೀವಿ: ಬಿಎಸ್‌ವೈ



**ಬೆಂಗಳೂರು:** ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ 28ಕ್ಕೆ 28 ಗೆಲ್ಲುವ ಗುರಿ ಇದೆ. ಆದರೆ 28ಕ್ಕೆ 25 ಗೆದ್ದೇ ಗೆಲ್ತೀವಿ ಎಮದು ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ತಮ್ಮ ಡಾಲರ್ಸ್ ಕಾಲೋನಿ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿಯಲ್ಲಿ ಇವತ್ತು ಪಟ್ಟಿ ಕರ್ನಾಟಕದ ಪಟ್ಟಿ ಬಹುತೇಕ ಅಂತಿಮಗೊಳ್ಳಲಿದೆ. ವಿಜಯೇಂದ್ರ ದೆಹಲಿಯಲ್ಲೇ ಇದ್ದಾರೆ. ಇವತ್ತು ಚರ್ಚೆ ಮಾಡಿ, ಪಟ್ಟಿ ಅಂತಿಮ ಆಗಲಿದೆ. 28ಕ್ಕೆ 28ಗೆಲ್ಲುವ ಗುರಿ ಇದೆ, 28ಕ್ಕೆ 25 ಗೆದ್ದೇ ಗೆಲ್ತೀವಿ ಎಂದರು. ಇದೇ ವೇಳೆ ಮೈಸೂರು ಲೋಕಸಭಾ ವಿಚಾರದಲ್ಲಿ ಯದುವೀರ್ ಸಂಪರ್ಕ ವಿಚಾರಕ್ಕೆ ಪ್ರತಿಕ್ರಿಯಿಸಿ, ಆ ರೀತಿಯೆಲ್ಲ ಇದ್ದರೆ ನಾನು ಇಲ್ಲಿ ಚರ್ಚೆ ಮಾಡಲ್ಲ ಎಂದರು. ಮೋದಿ ಅವರ ರಾಜ್ಯ ಪ್ರವಾಸವೂ ಫಿಕ್ಸ್ ಆಗಿದೆ. ಶಿವಮೊಗ್ಗಕ್ಕೂ ಬರುತ್ತಾರೆ, ಎಲ್ಲ ಕಡೆ ಹೆಚ್ಚು ಜನ ಸೇರಿಸಬೇಕು, ಸೇರಿಸ್ತೀವಿ ಎಂದ ಅವರು, ಹಾಲಿ ಎಂಪಿಗಳಿಗೆ ಟಿಕೆಟ್ ಕೈ ತಪ್ಪುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಆ ಬಗ್ಗೆ ನಾನು ಮಾತಾಡಲ್ಲ, ಹೈಕಮಾಂಡ್ ತೀರ್ಮಾನ ಮಾಡುತ್ತೆ ಎಂದು ತಿಳಿಸಿದರು.

## ಲೋಕಸಭೆ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸಿ

**ಚಿಕ್ಕಬಳ್ಳಾಪುರ:** ಬಿಜೆಪಿಯಿಂದ ಲೋಕಸಭಾ ಚುನಾವಣೆಗೆ ಕಣಕ್ಕಿಳಿಯುವ ಅಭ್ಯರ್ಥಿಗಳ ಎರಡನೇ ಪಟ್ಟಿ ಬಿಡುಗಡೆಗೆ ಹೈಕಮಾಂಡ್ ಸಿದ್ಧತೆಗಳನ್ನು ನಡೆಸುತ್ತಿದೆ. ಈ ನಡುವೆ ಚಿಕ್ಕಬಳ್ಳಾಪುರ ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿರುವ ಮಾಜಿ ಸಚಿವ ಕೆ ಸುಧಾಕರ್, ಚುನಾವಣೆಯಲ್ಲಿ ತನ್ನನ್ನು ಗೆಲ್ಲಿಸಿ ವೇದನೆ ಕಡಿಮೆ ಮಾಡುವಂತೆ ಟಿಕೆಟ್ ಘೋಷಣೆಗೂ ಮುನ್ನ ಕ್ಷೇತ್ರದ ಜನರಿಗೆ ಮನವಿ ಮಾಡಿದ್ದಾರೆ. ಅಲ್ಲದೆ, ಮೇ 15 ರಂದು ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯದಲ್ಲಿ ಚುನಾವಣಾ ಪ್ರಚಾರಕ್ಕೆ ಚಾಲನೆ ನೀಡಲಿದ್ದಾರೆ ಎಂದರು. ಚಿಕ್ಕಬಳ್ಳಾಪುರದಲ್ಲಿ ಕಾರ್ಯಕರ್ತರ ಸಭೆ ನಡೆಸಿದ ನಂತರ ಮಾತನಾಡಿದ ಸುಧಾಕರ್, ಲೋಕಸಭಾ ಚುನಾವಣೆಯಲ್ಲಿ ಗೆಲ್ಲಿಸುವುದರ ಮೂಲಕ ನನ್ನ ವೇದನೆ ಕಡಿಮೆ ಮಾಡಿ. ಇನ್ನೇನು ಎರಡು ಮೂರು ದಿನಗಳಲ್ಲಿ ಬಿಜೆಪಿ ಅಭ್ಯರ್ಥಿಗಳ ಎರಡನೇ ಪಟ್ಟಿ ಘೋಷಣೆ ಆಗುತ್ತದೆ. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ನೀಡುವಂತೆ ಮನವಿ ಮಾಡಿದ್ದೇನೆ. ಈ ಸಲ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸಿಕೊಡಿ ಎಂಬ ಬೆಂಬಲಿಗರಿಗೆ ಮನವಿ ಮಾಡಿದರು. ಒಂದು ಅಗಳು ಅನ್ನದಾನ ಮಾಡದ ವ್ಯಕ್ತಿಯನ್ನು ಚಿಕ್ಕಬಳ್ಳಾಪುರದ ಜನ ಶಾಸಕರನ್ನಾಗಿ ಮಾಡಿದ್ದಾರೆ ಎಂದು ಹೇಳುವ ಮೂಲಕ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಪರೋಕ್ಷವಾಗಿ ಟೀಕಿಸಿದರು.

# ಟಿಕೆಟ್ ಕೈತಪ್ಪುವ ವದಂತಿ ಬೆನ್ನಲ್ಲೇ ಪ್ರತಾಪ್ ಸಿಂಹ ಅಚ್ಚರಿಯ ಹೇಳಿಕೆ

**ಮೈಸೂರು:** ಪಕ್ಷ ನನ್ನನ್ನು ಕೈಬಿಡುವುದಿಲ್ಲ ಎಂಬ ಅಚಲ ನಂಬಿಕೆ ಇದೆ ಎಂದು ಮೈಸೂರು ಕೊಡಗು ಸಂಸದ ಪ್ರತಾಪ್ ಸಿಂಹ ಹೇಳಿದರು. ಲೋಕಸಭೆ ಚುನಾವಣೆಗೆ ಪ್ರತಾಪ್ ಸಿಂಹ ಅವರಿಗೆ ಬಿಜೆಪಿ ಟಿಕೆಟ್ ಕೈತಪ್ಪುವ ಸಾಧ್ಯತೆ ಇದೆ ಎಂಬ ವರದಿಗಳ ಬೆನ್ನಲ್ಲೇ ಅವರು ಪ್ರತಿಕ್ರಿಯೆ ನೀಡಿದರು. ಮೈಸೂರು ರಾಮೇಶ್ವರಂ ರೈಲಿಗೆ ಮೈಸೂರಿನಲ್ಲಿ ಚಾಲನೆ ನೀಡಿ ಮಾತನಾಡಿದ ಅವರು, ನನ್ನ ಮೇಲೆ ಪ್ರೀತಿ ಇಟ್ಟು ಇಲ್ಲಿಯ ಜನ ಗೆಲ್ಲಿಸಿದ್ದಕ್ಕೆ ಇಷ್ಟೆಲ್ಲ ಮಾಡಿದ್ದೇನೆ. ಕ್ಷೇತ್ರದಲ್ಲಿ ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಿ ತೋರಿಸಿದ್ದೇನೆ ಎಂದರು. ಚುನಾವಣೆಯಲ್ಲಿ ಸ್ಪರ್ಧಿಸಲು ಟಿಕೆಟ್ ಸಿಗುವ ಬಗ್ಗೆ ಭರವಸೆ ಇದೆ. ಆದರೆ ಅಂತಿಮವಾಗಿ ಪಕ್ಷದ ಹೈಕಮಾಂಡ್, ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಹಾಗೂ ವರಿಷ್ಠರು ತೀರ್ಮಾನ ಕೈಗೊಳ್ಳುತ್ತಾರೆ ಇಂದು ಪ್ರತಾಪ್ ಸಿಂಹ ಹೇಳಿದರು. ನಾನು ಮೊದಲನೇ ಬಾರಿ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿದಾಗಲೂ ಪ್ರಧಾನಿ ನರೇಂದ್ರ ಮೋದಿ ಅವರ ಹೆಸರಿನಲ್ಲಿ ಮತಯಾಚನೆ ಮಾಡಿದ್ದೆ. ಎರಡನೇ ಬಾರಿ ಸ್ಪರ್ಧಿಸುವಾಗಲು ಮೋದಿ ಹೆಸರಿನಲ್ಲಿಯೇ ಸ್ಪರ್ಧಿಸಿದ್ದೆ. ಮೂರನೇ ಬಾರಿಯೂ ಮೋದಿ ಹೆಸರಿನಲ್ಲೇ ಚುನಾವಣೆ ಎದುರಿಸಿ ಜಯಗಳಿಸುತ್ತೇನೆ. ಪಕ್ಷದ ವಿಶ್ವಾಸ ನನ್ನ ಮೇಲಿದೆ. ನನಗೆ ಮತ್ತೆ ಅವಕಾಶ ಸಿಗಲಿದೆ ಎಂದು ಅವರು ಭರವಸೆ ವ್ಯಕ್ತಪಡಿಸಿದರು. ನಾನು ಏನೆಂಬುದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಗೊತ್ತಿದೆ. ಸೋಲುವ ಕಾಂಗ್ರೆಸ್ ಪಕ್ಷದಲ್ಲಿ ಟಿಕೆಟ್ ವಿಚಾರದಲ್ಲಿ ಹೊಡೆದಾಟ ನಡೆಯುತ್ತಿದೆ. ಬಿಜೆಪಿಯಲ್ಲಿ ಗೆಲುವಿನ ಪೈಪೋಟಿ ಇರಬಾರದು ಎಂದರೆ ಹೇಗೆ? ಗೆಲ್ಲುವ ಕುದುರೆ ಎಲ್ಲರೂ ಪ್ರಯತ್ನ ಮಾಡುತ್ತಿರುತ್ತಾರೆ. ಮೈಸೂರಿನಲ್ಲಿ ಬಿಜೆಪಿ ಗೆಲ್ಲುವಂತ ಪರಿಸ್ಥಿತಿಯನ್ನು ನಾನು ಸೃಷ್ಟಿ ಮಾಡಿದ್ದೇನೆ. ನನಗೆ ತಾಯಿ ಚಾಮುಂಡಿ, ಪ್ರಧಾನಿ ಮೋದಿ ಆಶೀರ್ವಾದವಿದೆ ಎಂದು ಪ್ರತಾಪ್ ಸಿಂಹ ಹೇಳಿದ್ದಾರೆ.

**ನಾನೇನೆಂಬುದು ಮೋದಿಗೆ ಗೊತ್ತಿದೆ: ಪ್ರತಾಪ್ ಸಿಂಹ:** ಈ ಬಾರಿ ಪ್ರತಾಪ್ ಸಿಂಹ ಅವರಿಗೆ ಟಿಕೆಟ್ ದೊರೆಯುವುದಿಲ್ಲ. ಅವರ ಬದಲಿಗೆ ಮೈಸೂರು ರಾಜವಂಶದ ಯದುವೀರ್ ಕೃಷ್ಣದತ್ತ ಒಡೆಯರ್ ಅವರಿಗೆ ಟಿಕೆಟ್ ದೊರೆಯುವ ಸಾಧ್ಯತೆ ಇದೆ ಎಂಬ ವರದಿಗಳ ಬೆನ್ನಲ್ಲೇ ಮೈಸೂರು ಸಂಸದರು ಈ ಮೇಲಿನ ಪ್ರತಿಕ್ರಿಯೆ ನೀಡಿದ್ದಾರೆ. ಮತ್ತೊಂದೆಡೆ, ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಮಾಜಿ ಸಚಿವ ವಿ ಸೋಮಣ್ಣ ಪರ ನಿಂತಿದ್ದಕ್ಕೆ ಪ್ರತಾಪ್ ಸಿಂಹಗೆ ಟಿಕೆಟ್ ಕೈತಪ್ಪುವ ಸಾಧ್ಯತೆ ಇದೆ ಎಂಬ ಊಹಾಪೋಹ ಕೇಳಿ ಬರುತ್ತಿದೆ. ಈ ಎಲ್ಲ ಬೆಳವಣಿಗೆಗಳ ಮಧ್ಯೆ ಬಿಜೆಪಿ ಅಭ್ಯರ್ಥಿಗಳ ಎರಡನೇ ಪಟ್ಟಿ ಬಿಡುಗಡೆಗಾಗಿ ಪಕ್ಷದ ನಾಯಕರು ದೆಹಲಿಗೆ ತೆರಳಿದ್ದಾರೆ. ಇಂದು ಸಂಜೆ ನಡೆಯಲಿರುವ ಚುನಾವಣಾ ಸಮಿತಿ ಸಭೆಯಲ್ಲಿ ಎರಡನೇ ಪಟ್ಟಿ ಅಂತಿಮ ಗೊಳ್ಳುವ ನಿರೀಕ್ಷೆ ಇದೆ. ಜೊತೆಗೆ ಕರ್ನಾಟಕದ ಅಭ್ಯರ್ಥಿಗಳ ಬಗ್ಗೆಯೂ ಅಂತಿಮ ನಿರ್ಧಾರವನ್ನು ಪಕ್ಷದ ಹೈಕಮಾಂಡ್ ತೆಗೆದುಕೊಳ್ಳುವ ಸಾಧ್ಯತೆ ಇದೆ.

# ರಾಮೇಶ್ವರಂ ಕೆಫೆ ಬಾಂಬರ್ ಯಾರು ಅಂತ ಒಂದು ಹಂತಕ್ಕೆ ಐಡೆಂಟಿಫೈ ಆಗಿದೆ



**ಬೆಂಗಳೂರು:** ರಾಮೇಶ್ವರಂ ಕೆಫೆ ಬಾಂಬರ್ ಯಾರು ಅಂತ ಒಂದು ಹಂತಕ್ಕೆ ಐಡೆಂಟಿಫೈ ಆಗಿದೆ ಎಂದು ಗೃಹಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಕೆಫೆ ಬಾಂಬ್ ಬ್ಲ್ಯಾಸ್ಟ್ ಪ್ರಕರನದ ವಿಚಾರವಾಗಿ ಪ್ರತಿಕ್ರಿಯಿಸಿದರು. ಬಹಳ ಹತ್ತಿರ ಹತ್ತಿರ ಬರುತ್ತಿದ್ದೇವೆ. ಆ ಮನುಷ್ಯ ಯಾರು ಅಂತ ಒಂದು ಹಂತಕ್ಕೆ ಐಡೆಂಟಿಫೈ ಆಗಿದೆ. ಅದನ್ನ ಕನ್ಫರ್ಮ್ ಮಾಡ್ಕೋಬೇಕು. ಅದನ್ನ ಸಿಸಿಸಿ, ಎನ್ ಐಎ ಅವರು ಮಾಡುತ್ತಿದ್ದಾರೆ. ಒಳ್ಳೆಯ ಲೀಡ್ ಸಿಕ್ಕಿದೆ ಎಂದು ತಿಳಿಸಿದರು.

ಹೆಗಡೆ ವಿರುದ್ಧ ಪಕ್ಷ ಕ್ರಮಕ್ಕೆಗೊಳ್ಳಬೇಕು: ಪ್ರಧಾನಿಗಳು ಬಾಬಾ ಸಾಹೇಬ್ ಸಂವಿಧಾನ ಕೊಟ್ಟಿದ್ದನ್ನ ಶ್ಲಾಘನೆ ಮಾಡಿದ್ದಾರೆ. ಸಂವಿಧಾನ ಕೊಡದೇ ಹೋಗಿದ್ರೆ ನಾನು ಪ್ರಧಾನಿನೇ ಆಗ್ತಿರಲಿಲ್ಲ ಅಂದಿದ್ದಾರೆ. ಆದರೆ ಅವರ ಸಂಸದ ಅನಂತ್ ಕುಮಾರ್ ಹೆಗಡೆ ಸಂವಿಧಾನ ಬದಲು ಮಾಡ್ತೀವಿ ಅಂತಿದ್ದಾರೆ. ಇದೇ ಮೊದಲಲ್ಲ. ಹಲವು ಬಾರಿ ಹೀಗೆ ಹೇಳಿದ್ದಾರೆ. ಅವರ ಪಕ್ಷವರು ಕ್ರಮ ತಗೋಬೇಕು. ಇಂತಹ ಘಟನೆ ಬಂದಾಗ ಅವರ ಹೇಳಿಕೆಯಿಂದ ದೂರ ಇದ್ದೇವೆ ಅಂದ್ರೆ ಸಾಲಲ್ಲ. ಮತ್ತೆ ಮತ್ತೇ ಹೇಳುತ್ತಾರೆ. ಹೀಗಾಗಿ ಅವರ ವಿರುದ್ಧ ಕ್ರಮ ಆಗಬೇಕು. ಭಾರತದ ಸಂವಿಧಾನ ಬದಲಿಸುತ್ತೇವೆ ಅನ್ನೋದು ಒಳ್ಳೆಯ ಬೆಳವಣಿಗೆ ಅಲ್ಲ ಎಂದರು.

28 ಕ್ಷೇತ್ರಕ್ಕೂ ಅಭ್ಯರ್ಥಿ ಹಾಕ್ತೀವಿ: ಸಚಿವರು ಸ್ಪರ್ಧಿಸೋ ವಿಚಾರದ ಕುರಿತು ಮಾತನಾಡಿ, ಏಳೆಂಟು ಜನ ಸಚಿವರು ಸ್ಪರ್ಧಿಸಬೇಕು ಅಂತ ಮಾತುಕಥೆ ಇದೆ. ಪಕ್ಷದ ಹಿತದೃಷ್ಟಿಯಿಂದ ಯಾರು ಒಪ್ಕೊಂತಾರೆ ನೋಡಬೇಕು. ಸಂಜೆ ಅಷ್ಟೊತ್ತಿಗೆ ಗೊತ್ತಾಗುತ್ತೆ. 28 ಕ್ಷೇತ್ರಕ್ಕೂ ಅಭ್ಯರ್ಥಿಯನ್ನು ಹಾಕುತ್ತೇವೆ. ಎಚ್ ಸಿ ಮಹದೇವಪ್ಪ ಅವರು ನನಗೆ ಬೇಡ ಮಗನಿಗೆ ಕೊಡಿ ಅಂದಿದ್ದಾರೆ. ಬೇಡ ಅಂತ ಮೇಲೆ ಒತ್ತಾಯ ಮಾಡಿಕೊಡಲು ಆಗೋದಿಲ್ಲ. ಹೈಕಮಾಂಡ್ ಅಂತಿಮವಾಗಿ ತೀರ್ಮಾನ ತೆಗೆದುಕೊಳ್ಳುತ್ತದೆ ಎಂದು ಹೇಳಿದರು.

# ಉತ್ತರ ಕನ್ನಡದಲ್ಲಿ ತೇಲಿ ಬಂತು ಮತ್ತೊಂದು ಹೆಸರು, ಚಕ್ರವರ್ತಿ ಸೂಲಿಬೆಲೆಗೆ ಟಿಕೆಟ್ ಸಾಧ್ಯತೆ

**ಉತ್ತರ ಕನ್ನಡ:** ಚುನಾವಣೆ ಹತ್ತಿರವಾಗುತ್ತಿದ್ದಂತೆ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್‌ಗಾಗಿ ಲಾಬಿ ಜೋರಾಗಿದೆ. ಟಿಕೆಟ್‌ಗಾಗಿ ಸಂಸದ ಅನಂತಕುಮಾರ್ ಹೆಗಡೆ ಮತ್ತು ಮಾಜಿ ಸಭಾಪತಿ ವಿಶ್ವೇಶ್ವರ ಹೆಗಡೆ ಕಾಗೇರಿ ಮಧ್ಯೆ ಮುಸುಕಿನ ಗುದ್ದಾಟ ನಡೆಯುತ್ತಿದೆ. ಅನಂತಕುಮಾರ್ ಹೆಗಡೆ ಅವರು ಸಂಸದರಾಗಿ ಆಯ್ಕೆಯಾದ ಬಳಿಕ ಸಾರ್ವಜನಿಕ ಕಾರ್ಯಕ್ರಮಗಳಿಂದ ದೂರ ಉಳಿದಿದ್ದರು. ಯಾವುದೇ ಸರ್ಕಾರಿ, ಖಾಸಗಿ ಕಾರ್ಯಕ್ರಮಗಳಲ್ಲಿ ಕಾಣಿಸಿಕೊಂಡಿಲ್ಲ. ಮುಖ್ಯವಾಗಿ ವಿಧಾನಸಭೆ ಚುನಾವಣೆ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಜಿಲ್ಲೆಗೆ ಬಂದಿದ್ದರೂ ಸಹ ಅನಂತಕುಮಾರ್ ಹೆಗಡೆ ಮಾತ್ರ ಸುಳಿದಿರಲಿಲ್ಲ. ಇದೀಗ ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದಂತೆಯೇ ಮತ್ತೊಮ್ಮೆ ಟಿಕೆಟ್‌ಗಾಗಿ ಮುನ್ನಲೆಗೆ ಬಂದಿದ್ದಾರೆ.

ಇನ್ನು ಅತ್ತ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಸೋತು ನಿರಾಶೆಯಲ್ಲಿರುವ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಲೋಕಸಭೆ ಟಿಕೆಟ್ ಸಿಗುತ್ತದೆ ಎಂಬ ನಿರೀಕ್ಷೆಯಲ್ಲಿದ್ದಾರೆ. ಇವರಿಬ್ಬರ ಹಗ್ಗ-ಜಗ್ಗಟಾದ ಮಧ್ಯೆ ಮತ್ತೊಂದು ಹೆಸರು ಮುನ್ನಲೆಗೆ ಬಂದಿದೆ. ಅದು ಯುವಾ ಬ್ರಿಗೇಡ್ ಸ್ಥಾಪಕ, ಚಿಂತಕ, ವಾಗ್ಮಿ ಚಕ್ರವರ್ತಿ ಸೂಲಿಬೆಲೆ. ಚಕ್ರವರ್ತಿ ಸೂಲಿಬೆಲೆ ಮೂಲತಃ ಉತ್ತರ ಕನ್ನಡ ಜಿಲ್ಲೆಯವರೇ ಆಗಿದ್ದು, ಬಲಪಂಥೀಯ ಚಿಂತಕರಾಗಿದ್ದಾರೆ. ಇಷ್ಟೇ ಅಲ್ಲದೆ ಬಿಜೆಪಿ ಹೈಕಮಾಂಡ್ ನಾಯಕರ ಜೊತೆ ಆತ್ಮೀಯವಾಗಿ ಗುರುತಿಸಿಕೊಂಡಿದ್ದಾರೆ. ಉತ್ತರ ಕನ್ನಡ ಕ್ಷೇತ್ರದಲ್ಲಿ ಕ್ಷೇತ್ರದಲ್ಲಿ ಅಭ್ಯರ್ಥಿಗಳ ರೇಸ್‌ನಲ್ಲಿ ವಾಗ್ಮಿ ಚಕ್ರವರ್ತಿ ಸೂಲಿಬೆಲೆ ಅವರ ಹೆಸರೂ ಕೇಳಿಬಂದಿದೆ. ಅನಂತ ಕುಮಾರ್ ಹೆಗಡೆಗೆ ಟಿಕೆಟ್ ನೀಡದಿದ್ದಲ್ಲಿ ಹಿಂದುತ್ವದ ಆಧಾರದಲ್ಲೇ ಸೂಲಿಬೆಲೆಗೆ ಟಿಕೆಟ್ ನೀಡವ ಸಾಧ್ಯಾ ಸಾಧ್ಯತೆಗಳ ಬಗ್ಗೆ ಚರ್ಚೆ ಆಗಿದೆ ಎಂದು ಮೂಲಗಳಿಂದ ಮಾಹಿತಿ ದೊರೆತಿದೆ.

ಅನಂತ ಕುಮಾರ್ ಹೆಗಡೆಗೆ ಪರ್ಯಾಯವಾಗಿ ಸೂಲಿಬೆಲೆ ಎಷ್ಟು ಸೂಕ್ತ ಎಂದು ಬಿಜೆಪಿ ರಾಜ್ಯ ನಾಯಕರು ಅಭಿಪ್ರಾಯ ಹೇಳಿದ್ದಾರಂತೆ. ಚಕ್ರವರ್ತಿ ಸೂಲಿಬೆಲೆ ಕೆಲವು ದಿನಗಳ ಹಿಂದೆ ಆರ್‌ಎಸ್‌ಎಸ್ ಕಚೇರಿಗೆ ಭೇಟಿ ನೀಡಿದ್ದರಂತೆ. ಸೂಲಿಬೆಲೆಗೆ ಸಾಂಭವ್ಯ ಟಿಕೆಟ್ ಬಗ್ಗೆ ರಾಜ್ಯ ನಾಯಕರ ಮಧ್ಯೆ ಚರ್ಚೆ ನಡೆದಿದೆ. ಅನಂತಕುಮಾರ್ ಹೆಗಡೆಗೆ ಟಿಕೆಟ್ ನಿರಾಕರಿಸಲ್ಪಟ್ಟರೆ ಹಿಂದುತ್ವದ ಆಧಾರದಲ್ಲೇ ಬೇರೆಯವರಿಗೆ ಟಿಕೆಟ್ ನೀಡಬೇಕಾಗುತ್ತದೆ. ಹೀಗಾಗಿ ಮಾಜಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಜೊತೆಗೆ ಸೂಲಿಬೆಲೆ ಹೆಸರು ಚಾಲ್ತಿಗೆ ಬಂದಿದೆ. ಸೂಲಿಬೆಲೆಗೆ ಟಿಕೆಟ್ ನೀಡಿದರೆ ಹಿಂದೂ ಮತಗಳು ಚದುರುವುದಿಲ್ಲ ಎಂಬ ಭಾವನೆ ಹಿನ್ನೆಲೆಯಲ್ಲಿ ಟಿಕೆಟ್ ನೀಡುವ ಚಿಂತನೆ ನಡೆದಿದೆ. ಈ ಹಿನ್ನೆಲೆಯಲ್ಲಿ ಬಿಜೆಪಿ ಹೈಕಮಾಂಡ್ ಉತ್ತರ ಕನ್ನಡ ಲೋಕಸಭಾ ಕ್ಷೇತ್ರಕ್ಕೆ ಚಕ್ರವರ್ತಿ ಸೂಲಿಬೇಲೆ ಹೆಸರು ಘೋಷಿಸುತ್ತಾ ಕಾದು ನೋಡಬೇಕಿದೆ.

# ಜೆ.ಎಂ.ಸಿದ್ದೇಶ್ವರ್‌ಗೆ ಟಿಕೆಟ್ ಕೊಡಬೇಡಿ ದೆಹಲಿಯಲ್ಲಿ ಬಂಡಾಯದ ಬಾವುಟ



**ನವದೆಹಲಿ:** ಲೋಕಸಭಾ ಚುನಾವಣೆಗೆ ರಾಜ್ಯ ಬಿಜೆಪಿ ಅಭ್ಯರ್ಥಿಗಳ ಆಯ್ಕೆ ಕಸರತ್ತು ಮುಂದುವರಿದಿದ್ದು, ಉಡುಪಿ ಚಿಕ್ಕಮಗಳೂರು, ತುಮಕೂರು ಬೆನ್ನಲ್ಲೇ ದಾವಣಗೆರೆಯಲ್ಲೂ ಹಾಲಿ ಸಂಸದರಿಗೆ ಟಿಕೆಟ್ ನೀಡಲು ಆಕ್ಷೇಪ ಕೇಳಿ ಬಂದಿದೆ. ಜಿ.ಎಂ ಜಿದ್ದೇಶ್ವರ್‌ಗೆ ಟಿಕೆಟ್ ನೀಡದಂತೆ ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ನೇತೃತ್ವದ ನಿಯೋಗವೊಂದು ದೆಹಲಿಯಲ್ಲಿ ವರಿಷ್ಠರಿಗೆ ಮನವಿ ಮಾಡುತ್ತಿದೆ. ಕಳೆದೊಂದು ವಾರದಿಂದ ದೆಹಲಿಯಲ್ಲಿ ಠಿಕಾಣಿ ಹೂಡಿರುವ ಎಂ.ಪಿ ರೇಣುಕಾಚಾರ್ಯ ನೇತೃತ್ವದ ದಾವಣಗೆರೆಯ ವಿವಿಧ ವಿಧಾನಸಭೆಗಳ ಪರಾರ್ಜಿತ ಅಭ್ಯರ್ಥಿಗಳು ರಾಜ್ಯ ಸೇರಿದಂತೆ ರಾಷ್ಟ್ರೀಯ ನಾಯಕರನ್ನು ಭೇಟಿಯಾಗಿ ತೀವ್ರ ಒತ್ತಡ ಹೇರುವ ಪ್ರಯತ್ನ ಮಾಡುತ್ತಿದ್ದಾರೆ. ಈ ಬಗ್ಗೆ ದೆಹಲಿಯಲ್ಲಿ ಮಾಧ್ಯಮಗಳಿಗೆ ಮಾತನಾಡಿದ ಎಂ.ಪಿ ರೇಣುಕಾಚಾರ್ಯ, ದಾವಣಗೆರೆ ಲೋಕಸಭಾ ಕ್ಷೇತ್ರದಿಂದ ಯಾವುದೇ ಕಾರಣಕ್ಕೂ ಸಿದ್ದೇಶ್ವರ್ ಗೆ ಟಿಕೆಟ್ ನೀಡಬಾರದು. ಅವರು ಜನರು ಮತ್ತು ಕಾರ್ಯಕರ್ತರ ವಿಶ್ವಾಸ ಕಳೆದುಕೊಂಡಿದ್ದಾರೆ. ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿಲ್ಲ, ವಯಸ್ಸಿನ ಕಾರಣದಿಂದಲೂ ಅವರಿಗೆ ಟಿಕೆಟ್ ನೀಡಬಾರದು ಎಂದು ಹೇಳಿದರು.

ಜಿ.ಎಂ ಸಿದ್ದೇಶ್ವರ್ ಪ್ರಧಾನಿ ನರೇಂದ್ರ ಮೋದಿ ನಾಮಬಲದಲ್ಲಿ ಗೆಲವು ಸಾಧಿಸುತ್ತಿದ್ದಾರೆ. ಮೋದಿ ಪ್ರಧಾನಿಯಾಗಬೇಕು ಎನ್ನುವ ಆಶಯಕ್ಕೆ ಜನರು ಮತ ಹಾಕುತ್ತಿದ್ದಾರೆ. ಆದರೆ ಜನಪ್ರತಿನಿಧಿಯಾಗಿ ಕ್ಷೇತ್ರದಲ್ಲಿ ಯಾವ ಅಭಿವೃದ್ಧಿ ಕೆಲಸ ಮಾಡಿದರು ಎನ್ನುವುದು ಮುಖ್ಯ ಅವರು ಕ್ಷೇತ್ರದಲ್ಲಿ ಯಾವುದೇ ಕೆಲಸ ಮಾಡಿಲ್ಲ. ಅವರಿಗೆ ಬದ್ಧತೆ ಎನ್ನುವುದು ಇಲ್ಲ ಎಂದು ವಾಗ್ದಾಳಿ ನಡೆಸಿದರು. ನಾವು ಪಕ್ಷದ ವಿರುದ್ಧ ಬಂಡಾಯ ಸಾರುತ್ತಿಲ್ಲ ಬದಲಿಗೆ ಬೇರೆ ಅಭ್ಯರ್ಥಿಗೆ ಟಿಕೆಟ್ ಕೇಳುತ್ತಿದ್ದೇನೆ ನಮ್ಮ ಪಕ್ಷ ನಿಷ್ಠೆಯನ್ನು ಪ್ರಶ್ನಿಸುವಂತಿಲ್ಲ ಎಂದು ಸ್ಪಷ್ಟಪಡಿಸಿದರು.

## ಭಾರತ ನಂಬರ್ ಒನ್

ಶಸ್ತ್ರಾಸ್ತ್ರ ಆಮದು ಕಡಿತದ ಹೊರತಾಗಿಯೂ, ಭಾರತವು ಇನ್ನೂ ದೊಡ್ಡ ಪ್ರಮಾಣದಲ್ಲಿ ರಷ್ಯಾದಿಂದ ತೈಲ ಮತ್ತು ಅನಿಲವನ್ನು ಖರೀದಿಸುತ್ತಿದೆ. ರಷ್ಯಾದ ಶಸ್ತ್ರಾಸ್ತ್ರಗಳಿಂದ ದೂರವಿರಲು ಅಮೆರಿಕ ಮತ್ತು ನ್ಯಾಟೋ ದೇಶಗಳಿಂದ ಭಾರತದ ಮೇಲೆ ಸಾಕಷ್ಟು ಒತ್ತಡವಿತ್ತು.

ಭಾರತದ ಒಟ್ಟು ಶಸ್ತ್ರಾಸ್ತ್ರಗಳಲ್ಲಿ ಶೇಕಡ 65ರಷ್ಟು ರಷ್ಯಾ ಮೂಲದವು. ಅದೇ ಸಮಯದಲ್ಲಿ, ಭಾರತವು ಯಾವುದೇ ಒಂದು ದೇಶದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಅಮೆರಿಕ ಮತ್ತು ಫ್ರಾನ್ಸ್‌ನಿಂದ ದೊಡ್ಡ ಪ್ರಮಾಣದಲ್ಲಿ ಶಸ್ತ್ರಾಸ್ತ್ರಗಳನ್ನು ಖರೀದಿಸುತ್ತಿದೆ. ಪಾಶ್ಚಿಮಾತ್ಯ ದೇಶಗಳ ಒತ್ತಡದ ಪರಿಣಾಮ ಈಜಿಪ್ಟ್ ರಷ್ಯಾದೊಂದಿಗೆ ಯುದ್ಧ ವಿಮಾನ ಒಪ್ಪಂದ ಮಾಡಿಕೊಳ್ಳಲಿಲ್ಲ. ಈಜಿಪ್ಟ್ ಮೇಲೆ ಅಮೆರಿಕದ ಒತ್ತಡದ ನಂತರ ಈಗ ಫ್ರಾನ್ಸ್ ಜೊತೆ ಯುದ್ಧ ವಿಮಾನ ಒಪ್ಪಂದ ಮಾಡಿಕೊಳ್ಳುತ್ತಿದೆ.

## ಪೊಲೀಸರ ವಶಕ್ಕೆ

ನಂತರ ಕಚೇರಿಯೊಳಗೆ ನುಗ್ಗಿ ದಾಖಲೆಗಳನ್ನು ನಾಶ ಮಾಡಿದರು. ಪೊಲೀಸ್ ಹಾಗೂ ಅಗ್ನಿಶಾಮಕ ವಾಹನಕ್ಕೆ ಬೆಂಕಿ ಹಚ್ಚಿದರು. ಅನ್ನದಾತರ ಕೋಪಾಗ್ನಿಯಲ್ಲಿ 12 ವಾಹನಗಳು ಜಖಂ ಆದವು. ಮೂರು ನಾಲ್ಕು ವಾಹನಗಳು ಸುಟ್ಟು ಭಸ್ಮವಾದವು. ಗಲಾಟೆ ದೊಡ್ಡದಾಗುತ್ತಿದ್ದಂತೆ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸರು ಆಗಮಿಸಿದರು. ಆದರೆ, ಕೈಯಲ್ಲಿ ಬಡಿಗೆ ಹಿಡಿದ ರೈತರು ಪೊಲೀಸರನ್ನೇ ಓಡಿಸಿದರು.

**ಮೆಣಸಿನಕಾಯಿ ಘಾಟು.. ಮಾರ್ಕೆಟ್ ಬಂದ್!:** ಇನ್ನು ಮೆಣಸಿನಕಾಯಿ ಗೋಡೌನ್‌ಗೂ ಬೆಂಕಿ ಹೊತ್ತಿ ಕೊಂಡಿತ್ತು. ಮೆಣಸಿನಕಾಯಿ ಘಾಟು ಹೆಚ್ಚಾಗುತ್ತಿದ್ದಂತೆ ಅಲ್ಲಿದ್ದ ಜನ ಉಸಿರಾಡೋದಕ್ಕೂ ಪರದಾಡಿದರು. ಪರಿಣಾಮ ಮಾರುಕಟ್ಟೆ ವಹಿವಾಟು ಬಂದ್ ಮಾಡಲಾಯಿತು. ಪರಿಸ್ಥಿತಿ ವಿಕೋಪಕ್ಕೆ ಹೋಗುತ್ತಿದ್ದಂತೆ ಸ್ಥಳಕ್ಕೆ ಐಜಿಪಿ ತ್ಯಾಗರಾಜ ಭೇಟಿ ನೀಡಿ, ರೈತರ ಮನವೊಲಿಸಲು ಯತ್ನಿಸಿದರು. ಇದೇ ವೇಳೆ ಜಿಲ್ಲಾಧಿಕಾರಿ ರಘುನಂಧನ್ ಮೂರ್ತಿ ಕೂಡ ಸ್ಥಳಕ್ಕೆ ಭೇಟಿ ನೀಡಿ ರೈತರ ಮನ ಒಲಿಸುವಲ್ಲಿ ಯಶಸ್ವಿಯಾದರು. ಸೂಕ್ತ ದರ ನಿಗದಿ ಮಾಡುವ ಭರವಸೆ ನೀಡಿದ ನಂತರ ರೈತರು ಪ್ರತಿಭಟನೆ ಕೈ ಬಿಟ್ಟರು. ಸದ್ಯ ಮಾರುಕಟ್ಟೆ ಬೂದಿ ಮುಚ್ಚಿದ ಕೆಂಡದಂತಾಗಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ಭದ್ರತೆ ಹೆಚ್ಚಿಸಲಾಗಿದೆ.

## ಹೊಸ ಮಾರ್ಗಗಳ ವಿಸ್ತರಣೆ

1. ಗೋರಖ್‌ಪುರ-ಲಕ್ನೋ ವಂದೇ ಭಾರತ್ ಈಗ ಪ್ರಯಾಗರಾಜ್‌ಗೆ ಸಂಪರ್ಕ ಸಾಧಿಸಲಿದೆ.
2. ತಿರುವನಂತಪುರ-ಕಾಸರಗೋಡು ವಂದೇ ಭಾರತ್ ಮಂಗಳೂರಿಗೆ ವಿಸ್ತರಿಸಲಾಗುವುದು.
3. ಅಹಮದಾಬಾದ್-ಜಾಮ್‌ನಗರ ವಂದೇ ಭಾರತ್ ದ್ವಾರಕಾಕ್ಕೆ.
5. ಅಜ್ಮೀರ್-ದೆಹಲಿ ಸರೈ ರೋಹಿಲ್ಲಾ ವಂದೇ ಭಾರತ್ ಚಂಡೀಗಢಕ್ಕೆ ವಿಸ್ತರಿಸಲಾಗುವುದು.

**ವಂದೇ ಭಾರತ್ ಎಕ್ಸ್‌ಪ್ರೆಸ್‌ನ ವೈಶಿಷ್ಟ್ಯಗಳು:** ಈ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಆಧುನಿಕ ವೈಶಿಷ್ಟ್ಯಗಳಿಗೆ ಹೆಸರುವಾಸಿಯಾಗಿದೆ, ಇದರಲ್ಲಿ ವೇಗವರ್ಧನೆ ಮತ್ತು ವಿಮಾನ ಶೈಲಿಯ ಶೌಚಾಲಯಗಳು, ಸುತ್ತುವರಿದ ಬೆಳಕು, ಸಿಟಿಗಳಿಗೆ ಅನುಕೂಲ ಅನುಗುಣವಾಗಿ ಲೈಟ್ ಗಳು, ಸ್ವಯಂಚಾಲಿತ ಅಂತರ್ಸಂಪರ್ಕಿಸುವ ಬಾಗಿಲುಗಳು ಮತ್ತು ಯುರೋಪಿಯನ್ ಶೈಲಿಯ ಸೀಟುಗಳು ಸೇರಿವೆ. ಈ ರೈಲುಗಳು ಪ್ರಯಾಣಿಕರಿಗೆ ಆರಾಮದಾಯಕ ಪ್ರಯಾಣದ ಅನುಭವವನ್ನು ಒದಗಿಸುತ್ತದೆ.

ಭಾರತೀಯ ರೈಲ್ವೇಯು ರಾತ್ರಿಯ ಪ್ರಯಾಣದ ಅಗತ್ಯಗಳನ್ನು ಪೂರೈಸಲು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಸ್ಲೀಪರ್ ವ್ಯವಸ್ಥೆಗಳನ್ನು ಮಾಡುತ್ತಿದೆ. ಸ್ಲೀಪರ್ ವ್ಯವಸ್ಥೆಯ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಮೂಲಮಾದರಿಯನ್ನು ಬೆಂಗಳೂರಿನಲ್ಲಿ ಃಇಬಿಖ ತಯಾರಿಸುತ್ತಿದೆ , ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ಇತ್ತೀಚೆಗೆ ಅದರ ಬಿಡಿ ಭಾಗಗಳ ವಿಭಾಗವನ್ನು ಉದ್ಘಾಟಿಸಿದರು. ಇದರ ಜತೆಗೆ ಪ್ರಧಾನಿ ಮೋದಿ ಅವರು ಗುಜರಾತ್‌ನ ದಹೇಜ್‌ನಲ್ಲಿ ಪೆಟ್ರೋನೆಟ್ ಎಲ್‌ಎನ್‌ಜಿಯ ಪೆಟ್ರೋಕೆಮಿಕಲ್ಸ್ ಸಂಕೀರ್ಣಕ್ಕೆ ಅಡಿಪಾಯ ಹಾಕಲಿದ್ದಾರೆ. ಈ ಸಂಕೀರ್ಣವು ಸುಮಾರು ರೂ. 20,600 ಕೋಟಿ ರೂ, ವೆಚ್ಚದಲ್ಲಿ ನಿರ್ಮಾಣವಾಗಲಿದೆ. ಈಥೇನ್ ಮತ್ತು ಪ್ರೊಪೇನ್ ನಿರ್ವಹಣಾ ಸೌಲಭ್ಯಗಳನ್ನು ಒಳಗೊಂಡಿರುತ್ತದೆ, ಈ ಪ್ರದೇಶದಲ್ಲಿ ಪೆಟ್ರೋಕೆಮಿಕಲ್ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಕೊಡುಗೆ ನೀಡುತ್ತದೆ.

**ಆರ್ಥಿಕ ಅಭಿವೃದ್ಧಿ ಮತ್ತು ಉದ್ಯೋಗ:** ಈ ಯೋಜನೆಗಳು ಪ್ರತ್ಯಕ್ಷ ಮತ್ತು ಪರೋಕ್ಷ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ, ಸುಮಾರು 50,000 ಜನರು ಕಾರ್ಯನಿರ್ವಹಿಸುವ ಮತ್ತು 20,000 ಕ್ಕೂ ಹೆಚ್ಚು ಜನರು ಕಾರ್ಯಾಚರಣೆ ನಡೆಸುವಂತ ಉದ್ಯೋಗಗಳನ್ನು ನೀಡುವ ಸಾಧ್ಯತೆ ಇದೆ. ಆಧುನಿಕ ಮತ್ತು ಉತ್ತಮ ರೈಲ್ವೆ ಜಾಲವನ್ನು ನಿರ್ಮಿಸಲು, ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸಲು ಮತ್ತು ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಸರ್ಕಾರದ ಬದ್ಧತೆವಾಗಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

**ಗಾಂಧಿ ಆಶ್ರಮ ಸ್ಮಾರಕ:** ಪ್ರಧಾನಿ ನರೇಂದ್ರ ಮೋದಿ ಅವರು ಗುಜರಾತ್‌ನಲ್ಲಿ ಗಾಂಧಿ ಆಶ್ರಮ ಸ್ಮಾರಕದ ಮಾಸ್ಟರ್ ಪ್ಲಾನ್‌ಗೆ ಚಾಲನೆ ನೀಡಿದ್ದು, ಮಹಾತ್ಮ ಗಾಂಧಿಯವರ ಆದರ್ಶಗಳನ್ನು ಎತ್ತಿಹಿಡಿಯುವ ಮತ್ತು ಅವುಗಳನ್ನು ಜನರಿಗೆ ತಿಳಿಸುವುದು ಪ್ರಮುಖ ಕಾರ್ಯವಾಗಿದೆ. ಈ ಯೋಜನೆಯು ಪ್ರಸ್ತುತ ಮತ್ತು ಭವಿಷ್ಯದ ಪೀಳಿಗೆಗೆ ಗಾಂಧಿಯವರ ಬೋಧನೆಗಳು ಮತ್ತು ತತ್ವಶಾಸ್ತ್ರವನ್ನು ತಿಳಿಸಲು ಸಹಾಯವಾಗಲಿದೆ ಎಂದು ಮೋದಿ ಹೇಳಿದ್ದಾರೆ.

## ದಳಪತಿ ವಿಜಯ್

ಈ ಕಾನೂನನ್ನು ರಾಜ್ಯದಲ್ಲಿ ಜಾರಿಗೊಳಿಸದಂತೆ ತಮಿಳುನಾಡು ಸರ್ಕಾರಕ್ಕೆ ವಿಜಯ್ ಮನವಿ ಮಾಡಿದರು. ಈ ಸಮಯದಲ್ಲಿ ವಿಜಯ್ ಮಾತ್ರವಲ್ಲ ವಿರೋಧ ಪಕ್ಷದ ನಾಯಕರು ಸಿಎಎ ಅನುಷ್ಠಾನದ ಬಗ್ಗೆ ಪ್ರಶ್ನೆ ಎತ್ತುತ್ತಿದ್ದಾರೆ.

ಚುನಾವಣಾ ಲಾಭ ಪಡೆಯಲು ಮೋದಿ ಸರ್ಕಾರ ಚುನಾವಣೆಗೂ ಮುನ್ನ ಈ ಸಾಹಸ ಮಾಡುತ್ತಿದೆ ಎಂದು ಎಐಎಂಐಎಂ ಪಕ್ಷದ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ. ಇದು ವಿಭಜನೆಯ ರಾಜಕೀಯ, ಸಾರ್ವಜನಿಕರು ಬಿಜೆಪಿಗೆ ತಕ್ಕ ಪಾಠ ಕಲಿಸುತ್ತಾರೆ ಎಂದಿದ್ದಾರೆ.ಮಮತಾ ಬ್ಯಾನರ್ಜಿ, ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಕೂಡ ತಮ್ಮ ರಾಜ್ಯದಲ್ಲಿ ಸಿಎಎ ಜಾರಿಯಾಗಲು ಬಿಡುವುದಿಲ್ಲ, ಇದು ಧರ್ಮದ ಆಧಾರದಲ್ಲಿ ಒಡಕು ಮೂಡಿಸುವ ಕಾನೂನು ಎಂದಿದ್ದಾರೆ. ಸಿಎಎ ಎಂದರೇನು ಪೌರತ್ವ ತಿದ್ದುಪಡಿ ಮಸೂದೆ ಭಾರತದ ನೆರೆಯ ದೇಶಗಳಾದ ಬಾಂಗ್ಲಾದೇಶ, ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದಿಂದ 2014ರ ಡಿಸೆಂಬರ್ 31ಕ್ಕೆ ಮುಂಚೆ ಭಾರತಕ್ಕೆ ಬಂದ ಆರು ಅಲ್ಪಸಂಖ್ಯಾತ ಸಮುದಾಯಗಳ ಜನರಿಗೆ ಭಾರತೀಯ ಪೌರತ್ವ ಹೊಂದುವ ಅವಕಾಶ ಕೊಡುತ್ತದೆ. ಆ ಮೂರು ಮುಸ್ಲಿಮ್ ದೇಶಗಳಲ್ಲಿನ ಹಿಂದೂ, ಕ್ರೈಸ್ತ, ಸಿಖ್, ಜೈನ, ಬೌದ್ಧ ಮತ್ತು ಪಾರ್ಸಿ ಸಮುದಾಯಗಳ ಜನರಿಗೆ ಈ ಮನ್ನಣೆ ಕೊಡಲಾಗಿದೆ.

ಮಾಮೂಲಿಯ ಕಾನೂನು ಪ್ರಕಾರ ಯಾವುದೇ ವ್ಯಕ್ತಿ ಭಾರತೀಯ ಪೌರತ್ವ ಹೊಂದಬೇಕಾದರೆ 11 ವರ್ಷ ಇಲ್ಲಿ ವಾಸ ಮಾಡಿರಬೇಕು. ಸಿಎಎಯಲ್ಲಿ ನೆರೆಯ ದೇಶಗಳ ಅಲ್ಪಸಂಖ್ಯಾತ ಸಮುದಾಯಗಳಿಗೆ ಒಂದಷ್ಟು ವಿನಾಯಿತಿ ಕೊಡಲಾಗಿದೆ.

ಸಿಎಎಗೆ ಮುಸ್ಲಿಮರ ವಿರೋಧ ಯಾಕೆ ಸಿಎಎಯಲ್ಲಿ ಧಾರ್ಮಿಕವಾಗಿ ತಾರತಮ್ಯ ಮಾಡಲಾಗಿದೆ. ಅಲ್ಪಸಂಖ್ಯಾತರ ಪಟ್ಟಿಯಲ್ಲಿ ಮುಸ್ಲಿಮರಿಲ್ಲ. ಶ್ರೀಲಂಕಾ ಮೊದಲಾದ ನೆರೆಯ ದೇಶಗಳಲ್ಲಿ ಮುಸ್ಲಿಮರು ಅಲ್ಪಸಂಖ್ಯಾತರಿದ್ದಾರೆ. ಅವರಿಗೆ ಯಾಕೆ ಪೌರತ್ವ ಕೊಡುತ್ತಿಲ್ಲ. ಮುಸ್ಲಿಮರನ್ನು ಉದ್ದೇಶಪೂರ್ವಕವಾಗಿ ಕಡೆಗಣಿಸಲಾಗುತ್ತಿದೆ ಎಂಬುದು ಕೆಲ ವರ್ಗದ ಮುಸ್ಲಿಮರಿಂದ ಬರುತ್ತಿರುವ ಆಕ್ಷೇಪವಾಗಿದೆ.

## ಪಟ್ಟಿ ಸಿದ್ಧಪಡಿಸಿದ ಬಿಜೆಪಿ

ಚರ್ಚೆಗಳು ಪ್ರಾಥಮಿಕವಾಗಿ ಮಧ್ಯಪ್ರದೇಶ, ಮಹಾರಾಷ್ಟ್ರ, ಗುಜರಾತ್ , ಕರ್ನಾಟಕ, ಬಿಹಾರ, ಹಿಮಾಚಲ ಪ್ರದೇಶ ಮತ್ತು ತೆಲಂಗಾಣದ ಲೋಕಸಭಾ ಸ್ಥಾನಗಳ ಮೇಲೆ ಕೇಂದ್ರೀಕೃತವಾಗಿವೆ. ಬಿಹಾರ, ತಮಿಳುನಾಡು ಮತ್ತು ಒಡಿಶಾದಲ್ಲಿ ನಡೆಯುತ್ತಿರುವ ಮಾತುಕತೆಗಳಿಂದಾಗಿ ಈ ರಾಜ್ಯಗಳಿಗೆ ಅಭ್ಯರ್ಥಿಗಳ ಪಟ್ಟಿಯನ್ನು ಅಂತಿಮಗೊಳಿಸುವಲ್ಲಿ ವಿಳಂಬವಾಗಬಹುದು.

ಗುಜರಾತ್‌ನ 11 ಸ್ಥಾನಗಳಲ್ಲಿ ಈಗಾಗಲೇ ಏಳು ಸ್ಥಾನಗಳಿಗೆ ಹೆಸರುಗಳನ್ನು ನಿರ್ಧರಿಸಲಾಗಿದೆ. ಮಧ್ಯಪ್ರದೇಶದಲ್ಲಿ ಉಳಿದ ಐದು ಸ್ಥಾನಗಳ ಪೈಕಿ ನಾಲ್ಕರಲ್ಲಿ ಒಮ್ಮತ ಮೂಡಿದೆ. ಮಹಾರಾಷ್ಟ್ರದಲ್ಲಿ 25, ತೆಲಂಗಾಣದಲ್ಲಿ ಎಂಟು ಮತ್ತು ಕರ್ನಾಟಕದ ಎಲ್ಲಾ 28 ಸ್ಥಾನಗಳಿಗೆ ಚರ್ಚೆಗಳು ನಡೆದಿವೆ. ಮೂಲಗಳ ಪ್ರಕಾರ ಕರ್ನಾಟಕದಲ್ಲಿ ಜೆಡಿಎಸ್ ಮೂರು ಸ್ಥಾನಗಳನ್ನು ಗಳಿಸುವ ಸಾಧ್ಯತೆ ಇದೆ. ಹೆಚ್ಚುವರಿಯಾಗಿ, ಹಿಮಾಚಲ ಪ್ರದೇಶದ ಎಲ್ಲಾ ನಾಲ್ಕು ಸ್ಥಾನಗಳಿಗೆ ಮಾತುಕತೆ ನಡೆಸಲಾಯಿತು.

ವಿವಿಧ ರಾಜ್ಯಗಳಲ್ಲಿ ಜೆಡಿಯು, ಲೋಕ ಜನಶಕ್ತಿ ಪಕ್ಷ, ಎಐಎಡಿಎಂಕೆ, ಜೆಜೆಪಿ, ಮತ್ತು ಬಿಜೆಡಿಯಂತಹ ಪಕ್ಷಗಳೊಂದಿಗೆ ಸೀಟು ಹಂಚಿಕೆ ಸಂಬಂಧ ಇನ್ನೂ ಅಂತಿಮಗೊಂಡಿಲ್ಲ.

ಲೋಕಸಭೆ ಚುನಾವಣೆಗೆ ಮಾರ್ಚ್ 2 ರಂದು ಬಿಜೆಪಿ ತನ್ನ 195 ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿತ್ತು, ಪ್ರಧಾನಿ ನರೇಂದ್ರ ಮೋದಿ ವಾರಾಣಸಿಯಿಂದ ಮರು ಆಯ್ಕೆ ಬಯಸಿದ್ದಾರೆ. 2019 ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) 303 ಸ್ಥಾನಗಳನ್ನು ಗೆದ್ದು, ವಿರೋಧ ಪಕ್ಷಕ್ಕಿಂತ ಗಮನಾರ್ಹ ಮುನ್ನಡೆ ಸಾಧಿಸಿದೆ. ಮುಂಬರುವ ಲೋಕಸಭೆ ಚುನಾವಣೆಯು ಈ ವರ್ಷದ ಏಪ್ರಿಲ್ ಮತ್ತು ಮೇ ನಡುವೆ ನಡೆಯುವ ನಿರೀಕ್ಷೆಯಿದೆ.

ಮೊದಲನೇ ಪುಟದಿಂದ...

## ಹಂಚಿಕೆ ಸೂತ್ರ ಅಂತಿಮ

ಲೋಕಸಭೆ ಚುನಾವಣೆಯ ಜತೆಗೆ ವಿಧಾನಸಭೆ ಚುನಾವಣೆಗೆ ವಿಧಾನಸಭಾ ಚುನಾವಣೆಗೂ ಮೂರು ಪಕ್ಷಗಳ ನಡುವೆ ಮೈತ್ರಿ ಏರ್ಪಟ್ಟಿದೆ. ವಿಧಾನಸಭೆ ಚುನಾವಣೆಯಲ್ಲಿ ಟಿಡಿಪಿ 144, ಬಿಜೆಪಿ 10 ಹಾಗೂ ಜೆಎಸ್ ಪಿ 21 ಸ್ಥಾನಗಳಲ್ಲಿ ಸ್ಪರ್ಧಿಸಲಿವೆ.

ಚಂದ್ರಬಾನು ನಾಯ್ಡು ಮಾತನಾಡಿ ಬಿಜೆಪಿ, ಟಿಡಿಪಿ ಹಾಗೂ ಜೆಎಸ್ ಪಿ ನಡುವೆ ಅಮರಾವತಿಯಲ್ಲಿ ಸೀಟು ಹಂಚಿಕೆಗೆ ಪ್ರಚಂಡ ಸೂತ್ರವನ್ನು ರೂಪಿಸಲಾಗಿದೆ. ಮಾರ್ಚ್ 17ರಂದು ಗುಂಟೂರು ಜಿಲ್ಲೆಯಲ್ಲಿ ಟಿಡಿಪಿ ಚಂದ್ರಬಾಬು ನಾಯ್ಡು ಅವರೊಂದಿಗೆ ಪ್ರಧಾನಿ ಮೋದಿ ಜಂಟಿ ರ್ಯಾಲಿ ನಡೆಸಬಹುದು ಎಂದು ಮೂಲಗಳು ತಿಳಿಸಿವೆ.ಟಿಡಿಪಿ ಹಾಗೂ ಬಿಜೆಪಿ ನಡುವಿನ ಸಂಬಂಧ ಹಳೆಯದು ಬಿಜೆಪಿ ಹಾಗೂ ಟಿಡಿಪಿ ನಡುವಿನ ಸಂಬಂಧ ಬಹಳ ಹಳೆಯದು, ಎರಡೂ ಪಕ್ಷಗಳ ಮೊದಲ ಮೈತ್ರಿ 1996ರಲ್ಲಿ ಆಗಿತ್ತು. ಆಗ ಟಿಡಿಪಿ ಎನ್ ಡಿಎ ಸೇರಿತ್ತು. ಇವರಿಬ್ಬರೂ 2014ರಲ್ಲಿ ಲೋಕಸಭೆ ಹಾಗೂ ವಿಧಾನಸಭೆ ಚುನಾವಣೆಯಲ್ಲಿ ಒಟ್ಟಿಗೆ ಸ್ಪರ್ಧಿಸಿದ್ದರೆ, 2014ರ ಚುನಾವಣೆಯಲ್ಲಿ ಜೆಎಸ್ ಪಿ ಬಿಜೆಪಿಗೆ ಬೆಂಬಲ ನೀಡಿತ್ತು. ಆದರೆ 2014ರ ನಂತರ ಟಿಡಿಪಿ ಎರಡು ಪಕ್ಷಗಳ ನಡುವಿನ ಭಿನ್ನಾಭಿಪ್ರಾಯದಿಂದ ಎನ್ ಡಿಎಯಿಂದ ಬೇರ್ಪಟ್ಟಿತ್ತು. 2019ರ ಲೋಕಸಭೆ ಹಾಗೂ ವಿಧಾನಸಭೆ ಚುನಾವಣೆಗಳಲ್ಲಿ ಇಬ್ಬರೂ ಪ್ರತ್ಯೇಕವಾಗಿ ಸ್ಪರ್ಧಿಸಿದ್ದರು, ಅಲ್ಲಿ ವೈಎಸ್ ಆರ್ ಕಾಂಗ್ರೆಸ್ ಟಿಡಿಪಿಗೆ ಸೋಲು ನೀಡಿತ್ತು.

## ಸಂಸ್ಕಾರ ಮಾಡಲಾಗದೆ ಪರದಾಟ

ಸರಿಯಾಗಿ ಶವ ಸಂಸ್ಕಾರ ಮಾಡಲಾಗದೆ ಕಂಗಾಲಾಗಿದ್ದಾರೆ. ರಾಜಾಜಿನಗರದ ಹರಿಶ್ಚಂದ್ರ ಘಾಟ್, ಸುಮ್ಮನಹಳ್ಳಿ ಸ್ಮಶಾನ, ವಿಲ್ಸನ್ ಗಾರ್ಡನ್ ಹಾಗೂ ಚಾಮರಾಜಪೇಟೆಯ ಟಿ.ಆರ್ ಮಿಲ್ ಸ್ಮಶಾನದಲ್ಲಿ ನೀರಿಗೆ ಅಭಾವ ಎದುರಾಗಿದೆ.

**ಮತ್ತೆ ವರ್ಕ್ ಫ್ರಂ ಹೋಂಗೆ ಟೆಕ್ಕಿಗಳ ಬೇಡಿಕೆ:** ಅಪಾರ್ಟ್ಮೆಂಟ್ ನಲ್ಲಿರುವ ಟೆಕ್ಕಿಗಳಿಗೂ ನೀರಿನ ಎಫೆಕ್ಟ್ ತಟ್ಟಿದೆ. ವರ್ಕ್ ಫ್ರಂ ಹೋಂಗೆ ಬೇಡಿಕೆ ಆರಂಭವಾಗಿದೆ. ಬೇಸಿಗೆ ಮುಗಿಯೋವರೆಗೂ ಊರಿಗೆ ತೆರಳಲು ಪ್ಲಾನ್ ಮಾಡಿಕೊಂಡಿದ್ದಾರೆ. ಸದ್ಯ ಮಕ್ಕಳಿಗೆ ಪರೀಕ್ಷೆ ನಡೆಯುತ್ತಿದೆ. ಎಕ್ಸಾಂ ಮುಗಿದ ನಂತರ ಏಪ್ರಿಲ್‌ನಿಂದ ಬಹುತೇಕ ಐಟಿ ಉದ್ಯೋಗಿಗಳು ಊರಿನಿಂದಲೇ ಕೆಲಸ ನಿರ್ವಹಿಸಲು ನಿರ್ಧರಿಸಿದ್ದಾರಂತೆ. ಕೆಲ ಕಂಪನಿಗಳು ವರ್ಕ್ ಫ್ರಂ ಹೋಮ್ ಸೌಲಭ್ಯ ನೀಡುವ ಬಗ್ಗೆ ಬೋರ್ಡ್ ಮೀಟಿಂಗ್‌ನಲ್ಲಿ ಚರ್ಚೆ ಮಾಡಿ ತಿಳಿಸೋದಾಗಿ ಟೆಕ್ಕಿಗಳಿಗೆ ಹೇಳಿವೆ.

## ಟೌನ್‌ರಿಂಗ್ ರೋಡ್ ಅಸ್ತ್ರ

ಮೋದಿಯವರು ಶಂಕುಸ್ಥಾಪನೆ ನೆರವೇರಿಸಿದರು. 17 ಸಾವಿರ ಕೋಟಿ ರೂ. ವೆಚ್ಚದಲ್ಲಿ ರಸ್ತೆ ನಿರ್ಮಾಣವಾಗುತ್ತಿದ್ದು, 2025ರ ಡಿಸೆಂಬರ್ ನಲ್ಲಿ ಕಾಮಗಾರಿ ಪೂರ್ಣಗೊಳ್ಳಲಿದೆ.

ಇನ್ನು ಈ ಸ್ಯಾಟ್ ಲೈಟ್ ಟೌನ್ ರಿಂಗ್ ರೋಡ್ ದಾಬಾಸ್ ಪೇಟೆ ದೊಡ್ಡಬಳ್ಳಾಪುರ, ದೇವನಹಳ್ಳಿ, ಸೂಲಿಬೆಲೆ, ಹೊಸಕೋಟೆ, ಸರ್ಜಾಪುರ, ಅತ್ತಿಬೆಲೆ, ಆನೇಕಲ್ , ತಟ್ಟೆಕೆರೆ, ಕನಕಪುರ, ಮಾಗಡಿ, ರಾಮನಗರ ಪಟ್ಟಣಗಳು ಈ ಯೋಜನೆ ಅಡಿಯಲ್ಲಿ ಬರುತ್ತವೆ. ಈ ರಸ್ತೆಯು ಬೆಂಗಳೂರಿನ ಉತ್ತರ ಭಾಗವನ್ನು ಪೂರ್ವ ಭಾಗದೊಂದಿಗೆ ಸಂಪರ್ಕಿಸುತ್ತದೆ.

ಬೆಂಗಳೂರು ಸಂಚಾರ ದಟ್ಟಣೆಗೆ ರಾಮಬಾಣ

ಸ್ಯಾಟ್ ಲೈಟ್ ಟೌನ್ ರಿಂಗ್ ರೋಡ್ ಪೂರ್ಣಗೊಂಡರೆ ತುಮಕೂರು ರಸ್ತೆ ಮಾರ್ಗವಾಗಿ ನೇರವಾಗಿ ಬೆಂಗಳೂರು ನಗರವನ್ನು ಪ್ರವೇಶಿಸದೆ ತಮಿಳುನಾಡು ಗಡಿಯನ್ನು ಪ್ರವೇಶಿಸಬಹುದಾಗಿದೆ. ದೊಬ್ಬಾಸ್ ಪೇಟೆ-ದೊಡ್ಡಬಳ್ಳಾಪುರ ಮತ್ತು ದೊಡ್ಡಬಳ್ಳಾಪುರ ಬೈಪಾಸ್ -ಹೊಸಕೋಟೆ ಒಟ್ಟು 80 ಕಿಮೀ ಉದ್ದದ ರಸ್ತೆ ನಿರ್ಮಾಣ ಕಾಮಗಾರಿ ಪೂರ್ಣಗೊಂಡರೆ, ತುಮಕೂರು ರಸ್ತೆ ಮೂಲಕ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಕಡೆಗೆ ಹೋಗುವ, ಆಂಧ್ರಪ್ರದೇಶ, ತಮಿಳುನಾಡು ಅಥವಾ ಕೆಐಎ ಕಾರ್ಗೋ ಟರ್ಮಿನಲ್ ಗಳ ಕಡೆಗೆ ಚಲಿಸುವ ಭಾರಿ ವಾಹನಗಳು ನಗರವನ್ನು ಪ್ರವೇಶಿಸುವುದಿಲ್ಲ. ಬದಲಿಗೆ ಈ ಮಾರ್ಗದ ಮೂಲಕ ನೇರವಾಗಿ ದೇವನಹಳ್ಳಿ ಮತ್ತು ಹೊಸಕೋಟೆ ಕಡೆಗೆ ಹೋಗುತ್ತವೆ. ಇದರಿಂದ ಬೆಂಗಳೂರು ನಗರದಲ್ಲಿನ ಸಂಚಾರ ದಟ್ಟಣೆ ಬಹುತೇಕ ಕಡಿಮೆಯಾಗಲಿದೆ.

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ (ಎನ್‌ಎಚ್‌ಎಐ) ಯೋಜನಾ ನಿರ್ದೇಶಕ ಕೆ.ಬಿ.ಜಯಕುಮಾರ ಮಾತನಾಡಿ, ಸ್ಯಾಟ್ ಲೈಟ್ ಟೌನ್ ರಿಂಗ್ ರೋಡ್ ನಿಂದ ಸಾಕಷ್ಟು ಅನುಕೂಲವಾಗಲಿದೆ. ನಾವು ನಿರ್ಮಾಣದ ಗುಣಮಟ್ಟದ ಬಗ್ಗೆ ವಾಹನ ಚಾಲಕರಿಂದ ಸಕಾರಾತ್ಮಕ ಪ್ರತಿಕ್ರಿಯೆಯನ್ನು ಸ್ವೀಕರಿಸಿದ್ದೇವೆ ಎಂದು ಹೇಳಿದರು.

ದೊಡ್ಡಬಳ್ಳಾಪುರ ಬೈಪಾಸ್-ಹೊಸಕೋಟೆ ಟೋಲ್ ಸಂಗ್ರಹವು 2023ರ ನವೆಂಬರ್ ನಲ್ಲಿ ಪ್ರಾರಂಭವಾಗಿದೆ. ಮತ್ತು ಡೊಬ್ರಸ್‌ಪೇಟೆ-ದೊಡ್ಡಬಳ್ಳಾಪುರ ಟೋಲ್ ಸಂಗ್ರಹವು ಶೀಘ್ರದಲ್ಲೇ ಪ್ರಾರಂಭವಾಗಲಿದೆ ಎಂದು ತಿಳಿಸಿದರು.

**ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ:** ಕೋಲಾರ, ಹೊಸಕೋಟೆ, ಹೊಸೂರು ಮತ್ತು ಚಿತ್ತೂರು ಕಡೆಯಿಂದ ಬರುವ ಪ್ರಯಾಣಿಕರು ಈ ರಿಂಗ್ ರೋಡ್ ಮೂಲಕ ನೇರವಾಗಿ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೋಗಬಹುದು ಎಂದು ತಿಳಿಸಿದರು. ಸ್ಯಾಟ್ ಲೈಟ್ ಟೌನ್ ರಿಂಗ್ ರೋಡ್ ನಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗಿದೆ. ಮತ್ತು ಎಲ್ ಇಡಿ ಸಂಚಾರ ಮಾಹಿತಿ ಪರದೆ, ಲೋಹದ ತಡೆಗೋಡಗಳ ನಿರ್ಮಾಣ ಮಾಡಲಾಗಿದೆ. ವೇಗದ ಮಿತಿ 100 ಕಿಮೀ.

## ಜೆಡಿಎಸ್ ವಿರುದ್ಧ ವಾಗ್ದಾಳಿ

ಅಧಿಕಾರಿಗಳ ಜೊತೆ ಹೇಗೆ ನಡೆದುಕೊಂಡ್ದಿದ್ದೀರಿ ಎಂಬುದನ್ನು ಅಧಿಕಾರಿಗಳೇ ಹೇಳಿದ್ದಾರೆ. ಜಮೀನ್ದಾರರ ಮಕ್ಕಳು ನಾವು, ನಮಗೆ ಬೇಕಾದಷ್ಟು ದೇವರು ಕೊಟ್ಟಿದ್ದಾನೆ. ಒಂದು ಟೀ ನೂ ಕುಡಿದವರಲ್ಲ, ಮದ್ಯಪಾನ ಮಾಡಿದವರೂ ಅಲ್ಲ, ಕಮಿಷನ್ ಆರೋಪ ಒಂದೇ ಒಂದು ಸಾಬೀತಾದರೆ ರಾಜಕಾರಣ ಬಿಟ್ಟು, ನಿಮ್ಮ ಮುಖನೂ ನೋಡಲ್ಲ ಎಂದು ಸವಾಲು ಹಾಕಿದರು.

ಜನ ಅವರ (ಜೆಡಿಎಸ್ ) ಸ್ಥಾನಮಾನ ಎಲ್ಲಿದೆ ಅಂತ ತೋರಿಸಿದ್ದಾರೆ. ಒಂದು ಕಾಲದಲ್ಲಿ ಜನರು ಅವರಿಗೆ ಒಂದ್ ಸ್ಥಾನ ಕೊಟ್ಟಿದ್ದರು. ಜಾತಿಯೋ ಮತ್ತೊಂದೋ ಏನೋ, ದೇಶದಲ್ಲಿಯೂ ಒಂದು ಸ್ಥಾನ ಕೊಟ್ಟಿದ್ದರು. ನಿಮ್ಮ ಹತಾಶೆಯಿಂದ ಹೀಗೆ ಮಾತನಾಡುತ್ತಾ ಇದ್ದೀರಿ. ಜನಗಳ ಬಗ್ಗೆ ಆಲೋಚನೆ ನಿಮಗಿಲ್ಲ, ನಿಮ್ಮ ಹತಾಶೆ ಬಗ್ಗೆ ಆಲೋಚನೆ ಇದೆ. ಕಿರಾತಕರು, ಲೂಟಿಕೋರರು ಅಂತ ಪದ ಬಳಸುತ್ತೀರಲ್ಲವೇ ಅದೆಲ್ಲ ನಿಮ್ಮಲ್ಲಿ ಅಡಗಿರುವ ವಿಷ. ನಮ್ಮಲ್ಲಿ ಅದೆಲ್ಲಾ ಇಲ್ಲ, ನಾವು ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು ಅಷ್ಟೆ ಎಂದು ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು.

ನಿಮಗೆ ರಾಜಕಾರಣದ ಬದುಕನ್ನು ತೋರಿಸಿದವರೇ ರಾಮನಗರದ ಜನ. ಈ ದೇಶಕ್ಕೆ, ಈ ರಾಜ್ಯಕ್ಕೆ ರಾಜಕೀಯಕ್ಕೆ ಪರಿಚಯ ಮಾಡಿದವರೇ ರಾಮನಗರದ ಜನ. ಆದರೆ, ನೀವು ಸರಿಯಾದ ರೀತಿ ಮಾಡಲೇ ಇಲ್ಲ, ನೀವು ಅಧಿಕಾರ ಸಿಕ್ಕಿದಾಗ ತೋರಿಸಿರುವ ಅಹಂ ನಿಮ್ಮನ್ನು ತಿಂದು ಹಾಕಿದೆ, ಬೇರೇನಿಲ್ಲ. ನಿಮ್ಮನ್ನು ಮುಖ್ಯಮಂತ್ರಿ ಮಾಡಿ ಅರ್ಕಾವತಿಯ ಕೊಳಕು ನೀರು ಕುಡಿಯಬೇಕಾ ಬೆಂಗಳೂರು ಸ್ಯಾನಟರಿ ನೀರು ಫಿಲ್ಟರ್ ಮಾಡಿ ಕುಡಿಯಬೇಕು ಎನ್ನಲು ನಿಮಗೆ ಹುದ್ದೆ ಕೊಡಬೇಕಾ ಮುಖ್ಯಮಂತ್ರಿ ಆಗಿ ಒಂದು ಸೈಟ್ ಕೊಡೋದಕ್ಕೆ ಆಗಿರಲಿಲ್ಲ, ನಿಮ್ಮ ಪೆನ್ನು ಪೇಪರ್ ಬಳಸಿ ರಾಮನಗರವನ್ನು ಮಾದರಿ ಮಾಡಬಹುದಾಗಿತ್ತು. ಒಂದೇ ಒಂದು ರಸ್ತೆಯನ್ನೂ ಮಾಡಿಲ್ಲ ಎಂದು ಕಿಡಿ ಕಾರಿದರು.

ಅನಿತಾ ಕುಮಾರಸ್ವಾಮಿ ತಂದ ಕೆಲಸಗಳನ್ನು ಮುಂದುವರೆಸಿಕೊಂಡು ಹೋಗಲಿ ಎಂಬ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿ, ಇಲ್ಲಿಗೆ ಬಂದು ಒಂದೇ ಒಂದು ಕೆಲಸ ತೋರಿಸಲಿ. ರಾಜಕಾರಣಕ್ಕೋಸ್ಕರ ಏನೇನೋ ಮಾತಾಡೋದಲ್ಲ, ರಾಜಕಾರಣಕ್ಕಾಗಿ ಯಾರನ್ನೋ ತಬ್ಕೊಂಡು, ಯಾರದ್ದೋ ಶಾಲು ಹಾಕಿಕೊಂಡಿದ್ದಾರೆ. ಬಿಜೆಪಿ ವಕ್ತಾರರಂತೆ ಮಾತನಾಡುತ್ತೀರಲ್ಲ, ನಿಮ್ಮ ಪಕ್ಷ, ನಿಮ್ಮ ಸಿದ್ಧಾಂತವನ್ನೇ ಮರೆತು ಬಿಟ್ಟದ್ದೀರಿ ಎಂದು ಕುಹಕವಾಡಿದರು.

## ಪ್ರಿಯಕರ

ಘಟನಾ ಸ್ಥಳಕ್ಕೆ ಬಾಗಲಕೋಟೆ ಗ್ರಾಮೀಣ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ದಲಿತ ಯುವಕ ಪ್ರವೀಣ್ ಕಾಂಬಳೆ ಕೊಲೆಯಾದ ಸಂಗನಗೌಡ ಪಾಟೀಲ್ ಅವರ ಮಗಳನ್ನು ಪ್ರೀತಿಸಿದ್ದ. ಇಬ್ಬರ ನಡುವೆಯೂ ಪ್ರೀತಿ ಅರಳಿತ್ತು. ಆದರೆ ಅಂತರ್ಜಾತಿ ಹಿನ್ನೆಲೆ ಮಗಳಿಂದ ದೂರ ಇರಲು ಸಂಗನಗೌಡ ಪಾಟೀಲ್ ಎಚ್ಚರಿಕೆ ನೀಡಿದ್ದರು. ಅಲ್ಲದೆ ಕೆಲ ದಿನಗಳ ಹಿಂದೆ ಮಗಳಿಂದ ದೂರ ಇರುವಂತೆ ಥಳಿಸಿದ್ದರು. ಇದೇ ಕೋಪದಲ್ಲಿದ್ದ ಪ್ರವೀಣ್ ಕಾಂಬಳೆ ಮಚ್ಚಿನಿಂದ ಹಲ್ಲೆ ನಡೆಸಿ ತನ್ನ ಪ್ರಿಯತಮೆಯ ತಂದೆಯ ಕೊಲೆ ಮಾಡಿದ್ದಾನೆ. ಸ್ಥಳಕ್ಕೆ ಬಾಗಲಕೋಟೆ ಗ್ರಾಮೀಣ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಶಿವಾಜಿ ಜಯಂತಿ ಮೆರವಣಿಗೆ ವೇಳೆ ಹೊಡೆದಾಟ:** ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ ವೇಳೆ ಯುವಕರ ಹೊಡೆದಾಟ ನಡೆದಿದೆ. ಯಾದಗಿರಿಯಲ್ಲಿ ವೀರ ಸಾವರ್ಕರ್ ಸೇನಾ ನೇತೃತ್ವದಲ್ಲಿ ನಗರದ ಹಿರೇಅಗಸಿ ಬಳಿ ಬೃಹತ್ ಶೋಭಾಯಾತ್ರೆ ಆಯೋಜಿಸಲಾಗಿತ್ತು. ಈ ವೇಳೆ ಯುವಕರು ಪರಸ್ಪರ ಹೊಡೆದಾಡಿಕೊಂಡಿದ್ದಾರೆ. ಡಿಜೆ ಸದ್ದಿಗೆ ಹೆಜ್ಜೆ ಹಾಕುವಾಗ ಕಾಲ್ತುಳಿತ ಉಂಟಾಗಿದೆ. ಇದ್ರಿಂದ ಮಾತಿಗೆ ಮಾತು ಬೆಳೆದು ಯುವಕರ ನಡುವೆ ಹೊಡೆದಾಟ ನಡೆದಿದೆ.

**ವೃದ್ಧ ಮಾವನ ಮೇಲೆ ಸೊಸೆಯಿಂದ ಹಲ್ಲೆ:** ವೃದ್ಧ ಮಾವನ ಮೇಲೆ ಸೊಸೆ ಅಮಾನವೀಯವಾಗಿ ಹಲ್ಲೆ ನಡೆಸಿದ್ದಾಳೆ. ಮಂಗಳೂರಿನ ಕುಲಶೇಖರ ಬಳಿ ಘಟನೆ ನಡೆದಿದ್ದು, ಮಾವ ಪದ್ಮನಾಭ ಸುವರ್ಣ ಮೇಲೆ 'ಹೋಗಿ ಸಾಯಿ' ಅಂತಾ ಸೊಸೆ ಉಮಾಶಂಕರಿ ಹಲ್ಲೆ ನಡೆಸಿದ್ದಾಳೆ. ಹಲ್ಲೆ ನಡೆಸಿರುವ ದೃಶ್ಯ ಸೆರೆಯಾಗಿದ್ದು, ಶರ್ಟ್‌ನ್ನು ಸೋಫಾ ಮೇಲೆ ಇಟ್ಟ ವಿಚಾರಕ್ಕೆ ಮಾರಣಾಂತಿಕ ಹಲ್ಲೆ ನಡೆಸಲಾಗಿದೆ. ಈ ಬಗ್ಗೆ ವೃದ್ಧರ ಮಗಳು ಪ್ರಿಯಾ ದೂರು ಸಲ್ಲಿಸಿದ್ದಾರೆ.

**ದೇಗುಲದ ಉದ್ಘಾಟನೆಗೆ ಕರೆದಿಲ್ಲವೆಂದು ಹಲ್ಲೆ:** ಬೆಂಗಳೂರು ಉತ್ತರ ತಾಲೂಕಿನ ರಾವುತನಹಳ್ಳಿಯಲ್ಲಿ ದೇವಸ್ಥಾನದ ಉದ್ಘಾಟನೆಗೆ ಕರೆದಿಲ್ಲವೆಂದು ಖಜಾಂಚಿ ದಿನೇಶ್ ಮೇಲೆ ಹಲ್ಲೆ ನಡೆಸಲಾಗಿದೆ. ರಾಡ್ ಹಾಗೂ ಹಾಕಿ ಸ್ಟಿಕ್‌ಗಳಿಂದ ಹಲ್ಲೆ ನಡೆಸಲಾಗಿದ್ದು, ಗಾಯಗೊಂಡ ಅವರನ್ನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದೆ. ಹಲ್ಲೆಯ ವಿಡಿಯೋ ಮೊಬೈಲ್ ಹಾಗೂ ಸಿಸಿಕ್ಯಾಮಾರದಲ್ಲಿ ಸರೆಯಾಗಿದ್ದು, ಮಾದನಾಯಕನಹಳ್ಳಿ ಠಾಣೆಯಲ್ಲಿ 7 ನರ ವಿರುದ್ ಕೇಸ್ ದಾಖಲಾಗಿದೆ.

## ಕಿರುಕುಳ

ಕಂಡಕ್ಟರ್ ವಿರುದ್ಧ ರಾಯಚೂರು ವಿಭಾಗದ ಅಧಿಕಾರಿಗಳಿಗೆ ದೂರು ನೀಡಲಾಗಿದೆ. ಆದರೆ ಕಂಡಕ್ಟರ್ ಆರೋಪವನ್ನು ತಳ್ಳಿ ಹಾಕಿದ್ದಾನೆ.

ಫೆಬ್ರವರಿ 18ರ ಬಸ್ ನಲ್ಲಿ ಮಹಿಳೆಯೋರ್ವರು ರಾಯಚೂರು ಟು ಬೆಂಗಳೂರಿಗೆ ಪ್ರಯಾಣಿಸುತ್ತಿದ್ದರು. ಈ ವೇಳೆ ತಡ ರಾತ್ರಿ ಬಸ್ ಒಳಗಿನ ಲೈಟ್ ಆಫ್ ಆದಾಗ ರಾಯಚೂರು ನಗರ ಘಟಕದ ಕಂಡಕ್ಟರ್ ಲಕ್ಷ್ಮಿಕಾಂತ್ ರೆಡ್ಡಿ ಮಹಿಳೆಯ ಖಾಸಗಿ ಅಂಗಾಂಗಗಳನ್ನ ಮುಟ್ಟಿ ಕಿರುಕುಳ ನೀಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಸಂತ್ರಸ್ತ ಮಹಿಳೆ ಡ್ರೈವರ್ ಸೀಟ್ ಹಿಂಬದಿಯಲ್ಲಿ ಕುಳಿತು ಪ್ರಯಾಣ ಮಾಡ್ತಿದ್ದರು. ಡ್ರೈವರ್ ಮಲಗೋಕೆ ಇರುವ ಸೀಟ್ ನಲ್ಲಿ ಕಂಡಕ್ಟರ್ ಮಲಗಿದ್ದ. ಪಕ್ಕದಲ್ಲಿದ್ದ ಮಹಿಳೆಯ ಖಾಸಗಿ ಅಂಗಾಂಗ ಮುಟ್ಟಿ ಕಿರುಕುಳ ನೀಡಿದ್ದ. ಫ್ರೀ ಟಿಕೆಟ್ ಹರಿದು ತನ್ನ ಜೇಬ್ ನಲ್ಲಿ ಇಟ್ಟುಕೊಂಡು ಟಿಕೆಟ್ ಬೇಕಾದ್ರೆ ಲೈಂಗಿಕವಾಗಿ ಸಹಕರಿಸು, ಇಲ್ಲ ಫೈನ್ ಬೀಳುತ್ತೆ ಎಂದು ಹೇಳಿ ಪಟ್ಟು ಹಿಡಿದಿದ್ದ ಎಂದು ಸಂತ್ರಸ್ತೆ ತಿಳಿಸಿದ್ದಾರೆ. ನನ್ನ ಕಡೆ ತಿರುಗಿ ಮಲಕೊಂಡು ನನ್ನ ಸೊಂಟಕ್ಕೆ ಕೈಹಾಕಿದ್ದ. ನಾನು ಹಾರ್ಟ್ ಪೇಶೆಂಟ್, ಹುಷಾರ್ ಇಲ್ಲ ಕಿರುಕುಳ ಕೊಡಬೇಡಿ ಅಂದ್ರು, ಬಿಡಲಿಲ್ಲ, ರಾತ್ರಿ 8 ಗಂಟೆಯಿಂದ ಮಧ್ಯರಾತ್ರಿ 2 ಗಂಟೆ ವರೆಗೂ ಕಿರುಕುಳ ಕೊಟ್ಟ. ಕೂಡಲೇ ಕಂಡಕ್ಟರ್ ವಿರುದ್ಧ ಕ್ರಮಕ್ಕೆಗೊಳ್ಳಬೇಕು ಎಂದು ಟಿವಿ9 ಎದುರು ಸಂತ್ರಸ್ತ ಮಹಿಳೆ ಅಳಲು ತೋಡಿಕೊಂಡಿದ್ದಾರೆ.

ಇನ್ನು ಈ ಆರೋಪದ ಬಗ್ಗೆ ಟಿವಿ9ಗೆ ಕಂಡಕ್ಟರ್ ಲಕ್ಷ್ಮೀಕಾಂತ ರೆಡ್ಡಿ ಸ್ಪಷ್ಟನೆ ನೀಡಿದ್ದು ಆ ದಿನ ಬಸ್ ರಷ್ ಇತ್ತು. ನಾನು ಯಾರ ಜೊತೆಯೂ ಈ ರೀತಿ ವರ್ತಿಸಿಲ್ಲ. ಇಲಾಖೆಯಲ್ಲಿ ನನಗೆ ಆಗದೇ ಇರೋರು, ಈ ರೀತಿ ಷಡ್ಯಂತ್ರ ರೂಪಿಸಿದ್ದಾರೆ ಎಂದು ಹೇಳಿದರು.

## ಪತಿ

ಮಗಳಿಗೆ ಕೇವಲ 13 ತುಂಬಿದೆ. ವಯಸ್ಸು ಚಿಕ್ಕದು ಮದುವೆ ಬೇಡ. ಮಗಳನ್ನು ಚನ್ನಾಗಿ ಓದಿಸೋಣ ಎಂದು ಹೇಳಿದಕ್ಕೆ ಬೀರಪ್ಪ ಎಂಬ ವ್ಯಕ್ತಿ ತನ್ನ ಹೆಂಡತಿ ಮಾಯವ್ವಾಳ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾನೆ. ಸದ್ಯ ಮಾಯವ್ವಾ ಬೈಲಹೊಂಗಲ ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ದೂರು ದಾಖಲಿಸಿದ್ದರೂ ಪೊಲೀಸರಿಂದ ಯಾವುದೇ ಕ್ರಮ ಜರುಗಿಲ್ಲ.

ಹಾರುಗೊಪ್ಪ ಗ್ರಾಮದ ಬೀರಪ್ಪ ತನ್ನ ಮಗಳಿಗೆ ಬಾಲ್ಯವಿವಾಹ ಮಾಡಿಸಲು ಮುಂದಾಗಿದ್ದರು. ಪತ್ನಿ ಮಾಯವ್ವಾ ಇದನ್ನು ನಿರಾಕರಿಸಿದಕ್ಕೆ ಹಲ್ಲೆ ನಡೆದಿದೆ. ಮಗಳಿಗೆ 13ವರ್ಷ, ವಯಸ್ಸು ಚಿಕ್ಕದು ಮದುವೆ ಬೇಡ. ಒಳ್ಳೆಯ ಶಿಕ್ಷಣ ಕೊಡಿಸೋಣ ಮದುವೆ ಬೇಡ. ಬಾಲ್ಯ ವಿವಾಹ ಸಮಸ್ಯೆ ಆಗುತ್ತೆ ಎಂದು ಪತಿಗೆ ಬುದ್ದಿವಾದ ಹೇಳಿದಕ್ಕೆ ಕೋಪಗೊಂಡ ಪತಿ, ಮದುವೆ ಬೇಡಾ ಅಂತಿಯಾ ಎಂದು ಹೆಂಡತಿ ಕೈ ಕಾಲು ಮುರಿದಿದ್ದಾನೆ.

ತನ್ನ ಅಣ್ಣನ ಹೆಂಡತಿ ಮನೆಯ ಹುಡಗನಿಗೆ ತನ್ನ ಮಗಳನ್ನು ಕೊಟ್ಟು ಮದುವೆ ಮಾಡಿಸಲು ಬೀರಪ್ಪನ ಮುಂದಾಗಿದ್ದ. 40 ಎಕರೆ ಜಮೀನು ಇದೆ, ನಿಮ್ಮ ಮಗಳು ಚೆನ್ನಾಗಿರುತ್ತಾಳೆ ಎಂದು ಬೀರಪ್ಪನ ಅತ್ತಿಗೆ ಮನೆಯವರು ಬೀರಪ್ಪನಿಗೆ ತಲೆ ಕೆಡಿಸಿದ್ದರು. ಹುಡುಗ ಸ್ವಲ್ಪ ಹುಚ್ಚನ ತರ ಇದ್ದಾನೆ, ಅವನಿಗೆ ಕೊಟ್ಟರೆ ಆಸ್ತಿ ಸಿಗುತ್ತೆ ಅಂತಾ ಬೀರಪ್ಪ ಲೆಕ್ಕಾಚಾರ ಹಾಕಿದ್ದ. ಹೀಗಾಗಿ ಮದುವೆ ಮಾಡಲು ಮುಂದಾಗಿದ್ದ. ಆದರೆ ಇದಕ್ಕೆ ಮಾಯವ್ವಾ ನಿರಾಕರಿಸಿದ್ದಾರೆ. ಪತಿಯ ನಿರ್ಧಾರಕ್ಕೆ ವಿರೋಧಿಸಿದ್ದಕ್ಕೆ ಪತ್ನಿಯ ಮೇಲೆ ಹಲ್ಲೆ ನಡೆಸಿ ಕೈ ಕಾಲು ಮುರಿದಿದ್ದಾನೆ. ಮಾಯವ್ವಾ ಅವರನ್ನು ಬೈಲಹೊಂಗಲ ತಾಲೂಕು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಇದಕ್ಕೆಲ್ಲಾ ಸೂತ್ರಧಾರಿ ಬೀರಪ್ಪನ ಅಣ್ಣ ಹಾಗೂ ಅವನ ಹೆಂಡತಿ ಮನೆಯವರು ಎಂದು ಮಾಯವ್ವಾ ಆರೋಪ ಮಾಡಿದ್ದಾರೆ. ಪ್ರಕರಣ ದಾಖಲಾದ್ರೂ ಪೊಲೀಸರು ಅವರನ್ನ ಬಂಧಿಸಿಲ್ಲ ಅಂತಾ ಮಹಿಳೆ ಆಕ್ರೋಶ ಹೊರ ಹಾಕಿದ್ದಾರೆ. ಮುರಗೋಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ 4 ಸಬ್ ಸೆಂಟರ್ ಸ್ಥಾಪನೆ

**ಹುಳಿಯಾರು:** ತಾಲೂಕಿನಲ್ಲಿ ಓವರ್ ಲೋಡ್ ತಪ್ಪಿಸಿ ಸಮರ್ಪಕ ವಿದ್ಯುತ್ ಪೂರೈಕೆಗಾಗಿ ಹೊಸದಾಗಿ 4 ಸಬ್ ಸ್ಟೇಷನ್ ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಹುಳಿಯಾರಿನ ತಿಪಟೂರು ರಸ್ತೆಯಲ್ಲಿ ಸೋಮವಾರ ಚಿಕ್ಕನಾಯಕನಹಳ್ಳಿ ತಾಲೂಕಿನ ಎರಡನೇ ವಿದ್ಯುತ್ ಪರಿವರ್ತಕ ದುರಸ್ತಿ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಹುಳಿಯಾರು ದೊಡ್ಡ ಹೋಬಳಿಯಾಗಿರುವುದರಿಂದ ಟಿಸಿ ಸಮಸ್ಯೆಯ ದೂರುಗಳು ಬಹಳ ಕೇಳಿಬರುತ್ತಿತ್ತು. ಹಾಲಿ ಇರುವ ಟಿಸಿ ದುರಸ್ತಿ ಕೇಂದ್ರಕ್ಕೆ ಒತ್ತಡ ಹೆಚ್ಚಾಗಿದ್ದು ಸಮಯಕ್ಕೆ ಸರಿಯಾಗಿ ದುರಸ್ತಿಯಾಗದೆ ರೈತರಿಗೆ ಸಕಾಲಕ್ಕೆ ಟಿಸಿ ಕೊಡಲಾಗುತ್ತಿರಲಿಲ್ಲ. ಇದರಿಂದ ರೈತರ ಬೆಳೆ ನಷ್ಟ ಜೊತೆಗೆ ಕುಡಿಯುವ ನೀರಿಗೂ ತೊಂದರೆಯಾಗುತ್ತಿತ್ತು. ಇದನ್ನು ಮನಗಂಡು ಜಿಲ್ಲೆಯ ಯಾವ ತಾಲೂಕಿನಲ್ಲೂ ಇಲ್ಲದ ಟಿಸಿ ದುರಸ್ತಿಯ ಎರಡನೇ ಕೇಂದ್ರವನ್ನು ಹುಳಿಯಾರಿನಲ್ಲಿ ಆರಂಭಿಸಿದ್ದು ದಿನಕ್ಕೆ 20 ಟಿಸಿ ರಿಪೇರಿ ಇಲ್ಲಿ ಮಾಡಬಹುದಾಗಿದ್ದು ಇದರಿಂದ ಬೇಸಿಗೆಯಲ್ಲಿ ರೈತರಿಗೆ ಟಿಸಿ



ತೊಂದರೆಯಾಗದಂತೆ ನೋಡಿಕೊಳ್ಳಲು ಸಹಕಾರಿಯಾಗಿದೆ ಎಂದರು. ಚುನಾವಣಾ ಪ್ರಚಾರಕ್ಕೆ ಬಂದಿದ್ದ ಸಂದರ್ಭದಲ್ಲಿ ರಂಗಸ್ವಾಮಿ ಅವರು ನಾನು ಕುಂಬಕರ್ಣ ಕೆಲಸಕಾರ್ಯ ಆಗಲ್ಲ ಎಂದು ನಿಂದಿಸಿದ್ದರು. ಈ ನಿಂದನೆ ಮಾತಿನಿಂದ ನಾನು ಪರಿವರ್ತನೆಯಾಗಿ ಈಗ ಕ್ಷೇತ್ರದಲ್ಲೇ ನೆಲೆಯೂರಿ ಅಭಿವೃದ್ಧಿ ಪರ್ವ ಆರಂಭಿಸಿದ್ದೇನೆ. ಇದುವರೆವಿಗೆ ಯಾರೂ ತರದಷ್ಟು ಜನರಲ್ ಮನೆಗಳನ್ನು ತಂದಿದ್ದೇನೆ. ಇನ್ನೂ 4 ಸಾವಿರ ಮನೆಗಳನ್ನು ತರುತ್ತೇನೆ. ಹೋಬಳಿಗೆ 600 ಸ್ಪಿಂಕ್ಲರ್ ಸೆಟ್ ತರಿಸಿದ್ದೇನೆ. ಇನ್ನೂ ತರಿಸುತ್ತೇನೆ. ಪ್ರತಿ ಸೋಮವಾರ ಜನಸ್ಪಂದ ಸಭೆ ನಡೆಸಿ ಮಧ್ಯವರ್ತಿ ಹಾಗೂ ಲಂಚದ ಕಾಟ ಇಲ್ಲದಂತೆ ನೇರವಾಗಿ ಸಾರ್ವಜನಿಕರ ಸಮಸ್ಯೆಗೆ ಸ್ಪಂಧಿಸುವ ಕೆಲಸ ಮಾಡುತ್ತಿದ್ದೇನೆ. ಮಾಸಾಶನಕ್ಕೆ ಅರ್ಜಿ ಹಾಕಿದ ವಾರದೊಳಕ್ಕೆ ಮಂಜುರಾತಿ ಪತ್ರ ಕೊಡುತ್ತಿದ್ದೇನೆ. ಸಾವಿರಾರು ಪೌವತಿ ಖಾತೆಯನ್ನು ಒಂದೇ ದಿನ ಮಾಡಿಸಿಕೊಟ್ಟಿದ್ದೇನೆ ಎಂದರು.

ಜಿಪಂ ಮಾಜಿ ಸದಸ್ಯೆ ಮಂಜುಳಾ, ತಾಪಂ ಮಾಜಿ ಸದಸ್ಯೆ ಹೇಮಾವತಿ, ಪಪಂ ಮಾಜಿ ಸದಸ್ಯ ಬಡ್ಡಿ ಪುಟ್ಟರಾಜು, ಗುತ್ತಿಗೆದಾರ ನಂದಿಹಳ್ಳಿಶಿವಣ್ಣ, ದುರಸ್ತಿ ಕೇಂದ್ರದ ಲಿಂಗರಾಜು, ಏಜಾಸ್, ಗೌಡಿ, ಗಣೇಶ್, ಪ್ರದೀಪ್, ಕುಮಾರ್, ರಂಗಸ್ವಾಮಿ, ದೇವರಾಜು, ಸಿದ್ದರಾಮಣ್ಣ, ಬಸವಣ್ಣ, ವಿಜಯಕುಮಾರ್, ತಿಪಟೂರು ಎಇಇ ಜಯಪ್ಪ, ಚಿ.ನಾ.ಹಳ್ಳಿ ಎಇಇ ಗವಿರಂಗಯ್ಯ, ಎಸ್ಓ ಉಮೇಶ್ ನಾಯಕ್, ರಘು, ರಾಮಯ್ಯ, ಹಂದನಕೆರೆ ಶಾಖೆ ರಾಜಶೇಖರ್, ಎಇ ಆನಂದ್, ಯೋಗೇಂದ್ರ, ಇರ್ಫಾನ್, ತಿಮ್ಮನಹಳ್ಳಿ ರಘು, ಹಿರಿಯ ಸಹಾಯಕ ಮಂಜುನಾಥ್ ಮತ್ತಿತರರು ಇದ್ದರು.

# ಬೋರ್ ಲಾರಿ ಕಳುಹಿಸಿಕೊಡಿ

**ಹುಳಿಯಾರು:** ನಮ್ಮೂರಿಗೆ ಕೊಳವೆಬಾವಿ ಕೊರೆಯಲು ಬೋರ್ ಲಾರಿಯವರು ಬರ್ತಿಲ್ಲ. ಬೇಸಿಗೆಯಲ್ಲಿ ಗಿಡಗಳು ಒಣಗುತ್ತಿವೆ. ದಯಮಾಡಿ ಬೋರ್ ಲಾರಿ ಕಳುಹಿಸಿಕೊಡಿ ಎಂದು ಹುಳಿಯಾರು ಹೋಬಳಿಯ ಸೋಮನಹಳ್ಳಿ ಭಾಗದ ರೈತರು ಶಾಸಕ ಸಿ.ಬಿ.ಸುರೇಶ್‌ಬಾಬು ಅವರಲ್ಲಿ ಮನವಿ ಮಾಡಿದರು.

ಹುಳಿಯಾರು ಎಪಿಎಂಸಿಯಲ್ಲಿ ಸೋಮವಾರ ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲು ಶಾಸಕರು ಆಗಮಿಸಿದ್ದ ಸಂದರ್ಭದಲ್ಲಿ ರೈತರು ಭೇಟಿಯಾಗಿ ಕೊಬ್ಬರಿ ಬೆಲೆ ಕುಸಿತವಾದ ಹಿನ್ನಲೆಯಲ್ಲಿ ಸೋಮನಹಳ್ಳಿ ಭಾಗದ ಅನೇಕ ರೈತರು ಅಡಿಕೆ ನಾಟಿ ಮಾಡಿದ್ದಾರೆ. ಆದರೆ ಬೇಸಿಗೆಯಲ್ಲಿ ನೀರಿನ ಅಭಾವ ಉಂಟಾಗಿ ಗಿಡಗಳಿಗೆ ಸಾಕಷ್ಟು ನೀರು ಕೊಡದೆ ಒಣಗುತ್ತಿವೆ. ಹಾಗಾಗಿ ಹೊಸ ಕೊಳವೆ ಬಾವಿ ಕೊರೆಸೋಣವೆಂದು ಬೋರ್ ಲಾರಿಯವರನ್ನು ಕೇಳಿದರೆ ಒಂದೂವರೆ ತಿಂಗಳಿಂದ ಯಾರೊಬ್ಬರೂ ನಮ್ಮೂರಿಗೆ ಬರುತ್ತಿಲ್ಲ. ಕೇಳಿದರೆ ನಿಮ್ಮೂರ ಭೂಮಿ ಹಾರ್ಡ್ ಇದೆ ಎನ್ನುತ್ತಿದ್ದಾರೆ ಎಂದು ದೂರಿದರು. ಇದಕ್ಕೆ ಸ್ಪಂಧಿಸಿದ ಶಾಸಕರು ತಹಸೀಲ್ದಾರ್ ಗೀತಾ ಅವರಿಗೆ ದೂರವಾಣಿ ಕರೆ ಮಾಡಿ ರೈತರ ಅಹವಾಲು ವಿವರಿಸಿ ಬೋರ್ ಲಾರಿ ಏಜೆಂಟರ ಸಭೆ ಕರೆದು ಸೋಮನಹಳ್ಳಿ ಭಾಗದಲ್ಲಿ ಬೋರ್ ಕೊರೆಯುವಂತೆ ಸೂಚನೆ ನೀಡಬೇಕು ಎಂದರು. ಆಗ ರೈತರು ಅಡಿಗೆ 120 ರೂ ಬೇಕಾದರೂ ಕೊಡುತ್ತೇವೆ ಕಳುಹಿಸಿಕೊಡಿ ಎಂದರು. ತಹಸೀಲ್ದಾರ್ ಅವರು ಈಗ ಜವಾಬ್ದಾರಿ ತಗೊಂಡಿದ್ದು ಅವರನ್ನು ಭೇಟಿಯಾಗಿ ಎಂದು ಶಾಸಕರು ರೈತರಿಗೆ ಹೇಳಿ ಕಳುಹಿಸಿದರು.

# ಬಡವರ ಹಸಿವು ನೀಗಿಸುವ ಇಂದಿರಾ ಕ್ಯಾಂಟೀನ್‌ಗಳು

## ಸಮಾಜ ಕಲ್ಯಾಣ ಇಲಾಖೆ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಹೇಳಿಕೆ

**ಮೈಸೂರು:** ಇಂದಿರಾ ಕ್ಯಾಂಟಿನ್‌ಗಳು ಬಡವರು, ಕೂಲಿ ಕಾರ್ಮಿಕರು, ವಿದ್ಯಾರ್ಥಿಗಳ ಹಸಿವನ್ನು ನೀಗಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಸಿ.ಮಹದೇವಪ್ಪ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿಯ ಆವರಣದಲ್ಲಿ ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ಇಲಾಖೆ ಹಾಗೂ ಜಿಲ್ಲಾಡಳಿತ ವತಿಯಿಂದ ಹಮ್ಮಿಕೊಂಡಿದ್ದ ಇಂದಿರಾ ಕ್ಯಾಂಟಿನ್ ಶಂಕುಸ್ಥಾಪನೆ ಹಾಗೂ ಮುಖ್ಯಮಂತ್ರಿಗಳ ನಗರೋತ್ಥಾನ 4 ರ ಅಡಿ ಆಯ್ದ ವೈಯಕ್ತಿಕ ಫಲಾನುಭವಿಗಳಿಗೆ ಸಹಾಯಧನ ವಿತರಣೆ ನೆರವೇರಿಸಿ ಅವರು ಮಾತನಾಡಿದರು. ಹೊಸದಾಗಿ 9 ಇಂದಿರಾ ಕ್ಯಾಂಟಿನ್‌ಗಳಿಗೆ ಇಂದು ಶಂಕು ಸ್ಥಾಪನೆ ನೆರವೇರಿಸಲಾಗಿದೆ. ಈಗಾಗಲೇ 2017 ರ ಇಸವಿಯಲ್ಲಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಗಳಾಗಿದ್ದಾಗ, ಇಂದಿರಾ ಕ್ಯಾಂಟಿನ್‌ಗಳನ್ನು ಹೊಸದಾಗಿ ಪ್ರಾರಂಭಿಸಲಾಯಿತು. 5 ರೂ.ಗೆ ತಿಂಡಿ 10 ರೂ.ಗೆ ಊಟ ನೀಡಲು ಆರಂಭಿಸಲಾಯಿತು. ಕರ್ನಾಟಕದಲ್ಲಿ 520 ಇಂದಿರಾ ಕ್ಯಾಂಟಿನ್‌ಗಳು ಕಾರ್ಯ ನಿರ್ವಹಿಸುತ್ತಿವೆ. ಇದರಿಂದ ಕೂಲಿ ಕಾರ್ಮಿಕರು, ಬಡವರು, ನಿರ್ಗತಿಕರು ಕಡಿಮೆ ದರದಲ್ಲಿ ಉತ್ತಮ ತಿಂಡಿ ಊಟ ಮಾಡುತ್ತಿದ್ದಾರೆ. ಜಿಲ್ಲೆಯಲ್ಲಿ 17 ಇಂದಿರಾ ಕ್ಯಾಂಟಿನ್‌ಗಳು ಕೆಲಸ ಮಾಡುತ್ತಿದು,?ದ ಇದರಲ್ಲಿ 12 ಮೈಸೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಮಾಹಿತಿ ನೀಡಿದರು. ಇಂದಿರಾ ಕ್ಯಾಂಟಿನ್‌ಗಳಲ್ಲಿ ಹೊಸದಾಗಿ ರಾಗಿಮುದ್ದೆ, ಸೊಪ್ಪು ಸಾರು ನೀಡಲು ಕ್ರಮ ವಹಿಸಲಾಗಿದೆ. ನಮ್ಮ ಸರ್ಕಾರದಲ್ಲಿ ಮನೆ ಇಲ್ಲದವರಿಗೆ ಮನೆ ನಿರ್ಮಾಣ ಮಾಡಲು ಸಹಾಯಧನ ನೀಡಲಾಗುತ್ತಿದೆ. ಓದುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಲ್ಯಾಪ್‌ಟಾಪ್‌ಗಳ ವಿತರಣೆ ಮಾಡಲಾಗುತ್ತಿದೆ. ಸಂವಿಧಾನವು ಎಲ್ಲರಿಗೂ ಸಮಾನ ಅವಕಾಶಗಳನ್ನು ನೀಡಿದೆ. ಸಂವಿಧಾನದ ಮೂಲ ಉದ್ದೇಶವನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು ಎಂದರು.

ನಮ್ಮ ಸರ್ಕಾರ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಇದರಿಂದ ಬಡ ವರ್ಗದ ಜನತೆಗೆ ಆಹಾರ, ಮಹಿಳೆಯರಿಗೆ ಉಚಿತ ಪ್ರಯಾಣ, ಉಚಿತ ವಿದ್ಯುತ್, ನಿರುದ್ಯೋಗಿ ಯುವಕರಿಗೆ ಯುವನಿಧಿ ಸಹಾಯಧನ ದೊರೆಯುತ್ತಿದೆ. ಇದರಿಂದ ಜನರ ಜೀವನಮಟ್ಟ ಸುಧಾರಿಸುತ್ತಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳಾದ ಡಾ. ಕೆ.ವಿ ರಾಜೇಂದ್ರ ಅವರು ಮಾತನಾಡಿ ಇಂದು ನಗರದಲ್ಲಿ 9 ಇಂದಿರಾ ಕ್ಯಾಂಟಿನ್‌ಗಳ ಶಂಕು ಸ್ಥಾಪನೆ ನೆರವೇರಿಸಲಾಗಿದೆ. ಜಿಲ್ಲೆಯಲ್ಲಿ ಈಗಾಗಲೇ 17 ಇಂದಿರಾ ಕ್ಯಾಂಟಿನ್‌ಗಳು ಕಾರ್ಯ ನಿರ್ವಹಿಸುತ್ತಿವೆ. ಊಟದ ಮೆನುವನ್ನು ಬದಲಾಯಿಸಿಕೊಂಡು ಮುದ್ದೆ ಮತ್ತು ಸೊಪ್ಪು ಸಾಂಬಾರ್ ನೀಡಲು ಟೆಂಡರ್‌ನಲ್ಲಿ ಸೇರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಶಾಸಕರಾದ ತನ್ವೀರ್ ಸೇಠ್ ಅವರು ಮಾತನಾಡಿ ಸರ್ಕಾರ ಜನಪರವಾದ ಯೋಜನೆಗಳನ್ನು ಜಾರಿಗೆ ತಂದಿದೆ. ದುಡಿಯುವ ವರ್ಗಕ್ಕೆ ಕಡಿಮೆ ದರದಲ್ಲಿ ಉತ್ತಮ ಆಹಾರ ನೀಡಲು ಇಂದಿರಾ ಕ್ಯಾಂಟಿನ್‌ಗಳನ್ನು ಸರ್ಕಾರದ ವತಿಯಿಂದ ತೆರೆಯಲಾಗುತ್ತಿದೆ. ದುಡಿಮೆ ಮಾಡುವ ವರ್ಗಕ್ಕೆ ಹೊಟ್ಟೆ ತುಂಬಾ ಆಹಾರವನ್ನು ಕಡಿಮೆ ದರದಲ್ಲಿ ನೀಡುವುದು ಇದರ ಉದ್ದೇಶವಾಗಿದೆ. ಜಿಲ್ಲಾಧಿಕಾರಿಗಳ ಕಛೇರಿಯ ಆವರಣದಲ್ಲಿ ಇಂದಿರಾ ಕ್ಯಾಂಟಿನ್ ತೆರೆಯುತ್ತಿರುವುದರಿಂದ, ವಿವಿಧ ಸರ್ಕಾರಿ ಕಚೇರಿಗಳಿಗೆ ಬರುವ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಫಲಾನುಭವಿಗಳಿಗೆ ಸಹಾಯಧನ ಸೌಲಭ್ಯವನ್ನು ವಿತರಿಸಿದರು. ವಿಧಾನ ಸಭೆಯ ಶಾಸಕರಾದ ಕೆ ಹರೀಶ್ ಗೌಡ, ವಿಧಾನ ಪರಿಷತ್ ಶಾಸಕರಾದ ಸಿ. ಎನ್.ಮಂಜೇಗೌಡ, ಡಿ. ತಿಮ್ಮಯ್ಯ, ಮೂಡಾ ಅಧ್ಯಕ್ಷರಾದ ಕೆ. ಮರಿಗೌಡ, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಆಯುಬ್ ಖಾನ್ ಉಪಸ್ಥಿತರಿದ್ದರು.



## 15ರಂದು ಗ್ಯಾರಂಟಿಗಳ ಸಮಾವೇಶ

**ರಾ**ಜ್ಯ ಸರ್ಕಾರದ ಪಂಚ ಗ್ಯಾರಂಟಿಗಳ ಸಮಾವೇಶ ಮಾರ್ಚ್ 15 ರ ಮಧ್ಯಾಹ್ನ 12 ಗಂಟೆಗೆ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯಲಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಸಿ.ಮಹಾದೇವಪ್ಪ ಹೇಳಿದರು. ಮೈಸೂರು ಜಿ.ಪಂ. ಸಭಾಂಗಣದಲ್ಲಿ ಸೋಮವಾರ ನಡೆದ ಗ್ಯಾರಂಟಿ ಗಳ ಸಮಾವೇಶ, ಬರ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು ಸಮಾವೇಶವನ್ನು ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರು ಉಧ್ಘಾಟಿಸಲಿದ್ದು, ಜಿಲ್ಲೆಯ ಜನಪ್ರತಿನಿಧಿಗಳು ಭಾಗವಹಿಸುವರು. ರಾಜ್ಯ ಸರ್ಕಾರ ವಾಗ್ದಾನ ನೀಡಿದಂತೆ ಐದು ಗ್ಯಾರಂಟಿಗಳನ್ನು ಜಾರಿಗೊಳಿಸಿದ್ದು ಕೋಟ್ಯಂತರ ಜನರು ಯೋಜನೆಗಳ ಫಲಾನುಭವಿಗಳಾಗಿದ್ದಾರೆ. ಸಮಾವೇಶದಲ್ಲಿ 50 ಸಾವಿರ ಫಲಾನುಭವಿಗಳು ಭಾಗಿಯಾಗಲಿದ್ದು ಅವರಿಗೆ ವ್ಯವಸ್ಥಿತ ಕುಡಿಯುವ ನೀರು, ಊಟದ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಲ್ಲಿ 6.73 ಲಕ್ಷ, ಗೃಹ ಜ್ಯೋತಿ 9 ಲಕ್ಷ, ಯುವನಿಧಿ 783, ಅನ್ನಭಾಗ್ಯ ಯೋಜನೆಯಲ್ಲಿ 22.76 ಲಕ್ಷ ಫಲಾನುಭವಿಗಳಿದ್ದು 7.10ಲಕ್ಷ ಪಡಿತರ ಚೀಟಿಗಳಿವೆ ಎಂದರು. ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ, ಮಾತನಾಡಿ 256 ಗ್ರಾ.ಪಂ ಹಾಗೂ 16 ಸ್ಥಳೀಯ ಸಂಸ್ಥೆಗಳಿಂದ 50 ಸಾವಿರ ಫಲಾನುಭವಿಗಳು ಆಗಮಿಸುತಿದ್ದು, 500 ಬಸ್ ಗಳ ಏರ್ಪಾಡು ಮಾಡಲಾಗಿದೆ. ಸಂಬಂಧಿಸಿದ ಅಧಿಕಾರಿಗಳು ಸಮಾವೇಶಕ್ಕೆ ಆಗಮಿಸುವ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ, ವೇದಿಕೆ,ಆಹಾರದ ವ್ಯವಸ್ಥೆಯ ಜವಾಬ್ದಾರಿಯನ್ನು ಮೂಡ ಆಯುಕ್ತರು ನೋಡಿಕೊಳ್ಳಬೇಕೆಂದರು. ಸಭೆಯಲ್ಲಿ ಜಿ.ಪಂ.ಸಿಇಒ ಕೆ.ಎಂ.ಗಾಯತ್ರಿ, ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.




# ಕುಡಿವ ನೀರಿಗೆ ಆದ್ಯತೆ ನೀಡಿ

**ಮೈಸೂರು:** ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಿ, ಮುಂಬರುವ ಸಮಸ್ಯಾತ್ಮಕ ಹಳ್ಳಿಗಳ ಗುರುತಿಸಿ ಕಾರ್ಯೋನ್ಮುಖರಾಗಿ ಎಂದು ಸಮಾಜ ಕಲ್ಯಾಣ ಹಾಗೂ ಜಿಲ್ಲಾನಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹಾದೇವಪ್ಪ ಹೇಳಿದರು.

ಜಿ.ಪಂ. ಸಭಾಂಗಣದಲ್ಲಿ ಸೋಮವಾರ ನಡೆದ ಬರ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು ಯಾವುದೇ ಜಲಮೂಗಳ ನೀರನ್ನು ಕುಡಿಯುವ ನೀರು ಹೊರತುಪಡಿಸಿ ಬೇರೆ ಉದ್ದೇಶಗಳಿಗೆ ಬಳಸಬಾರದು ಕುಡಿಯುವ ನೀರಿನ ಸಮಸ್ಯಾತ್ಮಕ ಹಳ್ಳಿಗಳ ಪಟ್ಟಿಮಾಡಿ ಪರಿಸ್ಥಿತಿ ನಿಭಾಯಿಸಲು ಜಿಲ್ಲಾ ಹಾಗೂ ತಾಲೂಕು ಆಡಳಿತಗಳು ಸಿದ್ದವಾಗಿರಬೇಕು ಎಂದರು.

ಆದಷ್ಟು ಹೊಸ ಕೊಳವೆ ಬಾವಿ ತೋಡಿಸುವುದಕ್ಕಿಂತ ಇರುವ ಕೊಳವೆ ಬಾವಿಗಳನ್ನು ದುರಸ್ತಿಪಡಿಸಿ ಮೋಟಾರ್,ಪಂಪ್ ಅಳವಡಿಸಿ ಹಾಗೂ ಈ ಸಂದರ್ಭದಲ್ಲಿ ಒಂದು ಹನಿ ನೀರು ಪೋಲಾಗದಂತೆ ನೋಡಿಕೊಳ್ಳಿ ಅವಶ್ಯ ಬಿದ್ದರೆ ಖಾಸಗಿ ಬೋರ್ ವಲ್ಗಳನ್ನು ಉಪಯೋಗಿಸಿಕೆ?ಳ್ಳಿ ಎಂದರು.

ಜಿಲ್ಲಾಧಿಕಾರಿ ಡಾ.ರಾಜೇಂದ್ರ, ಮಾತನಾಡಿ, ನದಿಪಾತ್ರದಲ್ಲಿ ಪಂಪ್ಸೆಟ್ಗಳನ್ನು ತೆರವುಗೊಳಿಸಲಾಗಿದೆ, ಕುಡಿಯುವ ನೀರನ್ನು ಕೃಷಿಗೆ ಬಳಸದಂತೆ ಜಾಗೃತಿ ಮೂಡಿಸಲಾಗಿದೆ ಅಗತ್ಯಬಿದ್ದರೆ ಹಾರಂಗಿ ಹೇಮಾವತಿಯಿಂದಲೂ ನೀರು ಬಳಸಿಕೊಳ್ಳಲಾಗುವುದೆಂದರು.

ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಂಜಿತ್ ಮಾಹಿತಿ ನೀಡಿ ಪ್ರಸ್ತುತ 2 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಇದ್ದು, ಖಾಸಗಿ ಬೋರ್ವೆಲ್ ಮೂಲಕ ನೀರು ಕೊಡಲಾಗುತ್ತಿದೆ. ಮುಂದಿನ ದಿನಗಳಲ್ಲಿ 134 ಗ್ರಾಮಗಳಲ್ಲಿ ನೀರಿನ ಅಭಾವ ಉಂಟಾಗುವ ಸಂಭವವಿದೆ ಈ ಪೈಕಿ 36 ಗ್ರಾಮಗಳಿಗೆ ಪ್ರತಿನಿತ್ಯ ನೀರು ಪೂರೈಸಲಾಗುತ್ತಿದೆ ಎಂದರು.

ಪಶು ಸಂಗೋಪನಾ ಇಲಾಖೆ ಅಧಿಕಾರಿ ಮಾಹಿತಿ ನೀಡಿ, 34 ವಾರಗಳಿಗಾಗುವಷ್ಟು ಮೇವು ಲಭ್ಯವಿದ್ದು ರೈತರಿಗೆ ಮೇವಿನ ಪೊಟ್ಟಣಗಳನ್ನೂ ಕೊಡಲಾಗುವುದು. ಈಗಾಗಲೇ 68 ಸಾವಿರ ಮೇವಿನ ಕಿಟ್ಗಳನ್ನು ನೀಡಲಾಗಿದೆ, ಸದ್ಯ ಗೋಶಾಲೆ ತೆರೆಯುವ ಅವಶ್ಯಕತೆ ಇಲ್ಲ, ಈಗಾಗಲೇ ಅಂತರಾಜ್ಯ ಮೇವು ಸಾಗಣೆ ನಿರ್ಬಂಧ ಜಾರಿಯಲ್ಲಿದೆ ಎಂದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಚಂದ್ರಶೇಖರ್ ಮಾಹಿತಿ ನೀಡಿ ಪೂರ್ವ ಮುಂಗಾರಿನಲ್ಲಿ ಹತ್ತಿ ಬೀಜಗಳ ಕೊರತೆ ಉಂಟಾಗಿದ್ದು , ಗುಣಮಟ್ಟ ಕಡಿಮೆ ಇದೆ ಸದ್ಯ ರೈತ ಸಂಪರ್ಕ ಕೇಂದ್ರಗಳಲ್ಲಿ 1.20ಲಕ್ಷ ಪಾಕೆಟ್ ಹತ್ತಿ ಬೀಜ ದೊರೆಯಲಿವೆ ಎಂದರು. ಈಗಾಗಲೇ ಬರ ಪರಿಹಾರದಡಿ ತಲಾ 2 ಸಾವಿರ ರೂಗಳಂತೆ ಜಿಲ್ಲೆಯ 88,620 ರೈತರಿಗೆ 15 ಕೋಟಿ 83 ಲಕ್ಷ ಪರಿಹಾರ ಖಾತೆಗಳಿಗೆ ಜಮೆಯಾಗಿದೆ ಎಂದರು. ಜಿ.ಪಂ. ಸಿಇಒ ಕೆ.ಎಂ.ಗಾಯತ್ರಿ, ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.



# ಹುಳಿಯಾರಿನಲಿ ಅಯೋದ್ಯೆ ಮಂಡಲ ಪೂಜೆ ಅಂಗವಾಗಿ ಅನ್ನಸಂತರ್ಪಣೆ

**ಹುಳಿಯಾರು:** ಅಯೋಧ್ಯೆಯಲ್ಲಿ ರಾಮನಲ್ಲಾನ ವಿಗ್ರಹದ ಪ್ರಾಣ ಪ್ರತಿಷ್ಠೆಯಾಗಿ 48 ದಿನಗಳ ಒಂದು ಮಂಡಲ ಕಳೆದಿದ್ದು, ಈ ನಿಮಿತ್ತ ಸೋಮವಾರ ಹುಳಿಯಾರಿನ ಪಟ್ಟಣದ ಬಸ್ ನಿಲ್ದಾಣದಲ್ಲಿ ಅನ್ನಸಂತರ್ಪಣೆ ಮಾಡಲಾಯಿತು. ಫುಟ್‌ಪಾತ್ ವ್ಯಾಪಾರಿಗಳ ಸಂಘ, ಖಾಸಗಿ ಬಸ್ ಏಜೆಂಟರ ಸಂಘ, ವರ್ತಕರ ಸಂಘ ಹಾಗೂ ಶ್ರೀರಾಮ ಭಕ್ತರ ಸಹಕಾರದೊಂದಿಗೆ ಶ್ರೀರಾಮದ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಶ್ರೀರಾಮಲಲ್ಲಾನಿಗೆ ಜಯಕಾರ ಹಾಕಿ ನೂರಾರು ಸಂಖ್ಯೆಯ ಪ್ರಯಾಣಿಕರು ಹಾಗೂ ಸಾರ್ವಜನಿಕರಿಗೆ ಕೋಸಂಬರಿ- ಪಾನಕ-ಕೇಸರಿ ಬಾತ್-ಪಲಾವ್- ಪುಳಿಯೋಗರೆ ಪ್ರಸಾದವಾಗಿ ವಿತರಿಸಲಾಯಿತು. ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಹೂವಿನ ಬಸವರಾಜು, ವರ್ತಕರ ಸಂಘದ ಎಂಎಸ್‌ಆರ್ ನಟರಾಜು, ಬಸ್ ಏಜೆಂಟರ ಸಂಘದ ಚನ್ನಕೇಶವ, ಮೋಹನ್ ಕುಮಾರ್ ರೈ, ಬಾಳೆಕಾಯಿ ಲಕ್ಷ್ಮಿಕಾಂತ್, ಹೂವಿನ ಶಾರದಮ್ಮ, ತಿಮ್ಮರಾಜು ಸೇರಿದಂತೆ ಅನೇಕರಿದ್ದರು.



# ಪಂಚ ಗ್ಯಾರಂಟಿಗಳಿಂದ ಜೀವನಮಟ್ಟ ಸುಧಾರಣೆ; ಎಂ ಸತೀಶ್ ಕುಮಾರ್.

**ವಿಜಯಪುರ:** ಕಾಂಗ್ರೆಸ್ ಸರ್ಕಾರ ವಿಧಾನಸಭಾ ಚುನಾವಣೆಯಲ್ಲಿ ನೀಡಿದ ಮಾತಿನಂತೆ ಪಂಚ ಗ್ಯಾರಂಟಿಗಳಾದ ಮಹಿಳೆಯರಿಗೆ ಸರ್ಕಾರಿ ಬಸ್ಸುಗಳಲ್ಲಿ ಉಚಿತ ಪ್ರಯಾಣ, ಗೃಹಲಕ್ಷ್ಮಿ ಯೋಜನೆಯಂತೆ ಪ್ರತಿ ಕುಟುಂಬದ ಮುಖ್ಯಸ್ಥೆಯರಿಗೆ ಹಣ. ಅನ್ನ ಭಾಗ್ಯ ಯೋಜನೆ ಅಡಿಯಲ್ಲಿ 5 ಕೆಜಿ ಹೆಚ್ಚುವರಿ ಅಕ್ಕಿಗೆ ಹಣ ನೀಡುವಿಕೆ, ಉಚಿತ ವಿದ್ಯುತ್ ನೀಡುವಿಕೆ ಹಾಗೂ ನಿರುದ್ಯೋಗ ಯುವಕರಿಗೆ ಪಿಂಚಣಿ ನೀಡುವ ವ್ಯವಸ್ಥೆಯನ್ನು ಜಾರಿಗೊಳಿಸುವುದರ ಮೂಲಕ ರಾಜ್ಯದ ಜನರ ಜೀವನಮಟ್ಟ ಸುಧಾರಣೆಗೆ ಕ್ರಮ ಕೈಗೊಂಡು ನುಡಿದಂತೆ ನಡೆದ ಸರ್ಕಾರ ಕಾಂಗ್ರೆಸ್ ಸರ್ಕಾರವಾಗಿದೆ ಎಂದು ಪಟ್ಟಣದ ಪುರಸಭಾ ಮಾಜಿ ಅಧ್ಯಕ್ಷ ಹಾಲಿ ಸದಸ್ಯ, ಎಂ ಸತೀಶ್ ಕುಮಾರ್ ತಿಳಿಸಿದರು. ಅವರು ಇಲ್ಲಿನ ಸರ್ಕಾರಿ ಕಿರಿಯ ಕಾಲೇಜು ಆಟದ ಮೈದಾನದ ಬಳಿಯಿಂದ, ಆಲೂರು ದುದ್ದನಹಳ್ಳಿ ಬಳಿಯಲ್ಲಿ ಏರ್ಪಡಿಸಲಾಗಿದ್ದ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶಕ್ಕೆ ಹೊರಟ ವಾಹನಗಳಿಗೆ ಚಾಲನೆ ನೀಡಿ ಮಾತನಾಡುತ್ತಿದ್ದರು. ಈ ಸಂದರ್ಭದಲ್ಲಿ ಪುರಸಭಾ ಸದಸ್ಯರಾದ ನಂದಕುಮಾರ್, ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷರಾದ ಮುನಿ ಚಿನ್ನಪ್ಪ, ಮಾಜಿ ಸದಸ್ಯರುಗಳಾದ ಮುನಿಕೃಷ್ಣಪ್ಪ, ಸಂಪತ್ ಕುಮಾರ್, ಹರೀಶ್, ಮುಖಂಡರುಗಳಾದ ಮರವೇ ಕೆಂಪಣ್ಣ, ಮಧು ಮತ್ತಿತರರು ಉಪಸ್ಥಿತರಿದ್ದರು.



ವಿಜಯಪುರ ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಕಿರಿಯ ಆಟದ ಮೈದಾನದ ಬಳಿ ಆಲೂರು ದುದ್ದನಹಳ್ಳಿ ಬಳಿಯಲ್ಲಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಕಾರ್ಯಕ್ರಮವಾದ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶಕ್ಕೆ ಹೊರಟ ವಾಹನಗಳಿಗೆ ಚಾಲನೆ ನೀಡಿದ ಪುರಸಭಾ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಎಂ ಸತೀಶ್ ಕುಮಾರ್ ಮತ್ತಿತರರು ಇದ್ದರು.

# ಸೀಗೆಬಾಗಿ ರಸ್ತೆ ದುರಸ್ತಿಗೆ ಚಾಲನೆ

**ಹುಳಿಯಾರು:** ತಿಪಟೂರು ರಸ್ತೆಯ ಸೀಗೆಬಾಗಿ ಗೇಟ್‌ನಿಂದ ಹುಳಿಯಾರು ವರೆಗಿನ ರಸ್ತೆಯನ್ನು 10 ಕೋಟಿ ರೂ.ವೆಚ್ಚದಲ್ಲಿ ದುರಸ್ತಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು. ಹುಳಿಯಾರು ಹೋಬಳಿ ಸೀಗೇಬಾಗಿ ಗೇಟ್‌ನಲ್ಲಿ ಸೋಮವಾರ ರಸ್ತೆ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಹಾಸನಕ್ಕೆ ಹೋಗುವ ಟ್ಯಾಂಕರ್ ಲಾರಿ ಸೇರಿದಂತೆ ಅನೇಕ ವಾಹನಗಳು ಹುಳಿಯಾರು ತಿಪಟೂರು ರಸ್ತೆ ಮೂಲಕ ಸಂಚರಿಸುತ್ತವೆ. ಸೀಗೇಬಾಗಿ ಗೇಟ್‌ನಿಂದ ತಿಪಟೂರಿಗೆ ರಸ್ತೆ ಚೆನ್ನಾಗಿದ್ದು ಅಲ್ಲಿಂದ ಹುಳಿಯಾರು ವರೆವಿಗೆ ರಸ್ತೆ ತೀರಾ ಹದಗೆಟ್ಟಿತ್ತು. ಹಾಗಾಗಿ ಈ ರಸ್ತೆಯಲ್ಲಿ 2 ವಾಹನಗಳು ಸರಾಗವಾಗಿ ಚಲಿಸುವಂತೆ ಮಾಡುವ ನಿಟ್ಟಿನಲ್ಲಿ ರಸ್ತೆ ಅಗಲೀಕರಣದ ಜೊತೆ ರಸ್ತೆ ದುರಸ್ತಿಯನ್ನೂ ಸಹ ಮಾಡಲಾಗುತ್ತಿದ್ದು 7 ಮೀಟರ್ ರಸ್ತೆ ಅಗಲವಾಗಲಿದೆ ಎಂದು ತಿಳಿಸಿದರು. ತಿಮ್ಲಾಪುರ ಗ್ರಾಪಂ ಅಧ್ಯಕ್ಷ ಮಂಜುನಾಥ್, ಗ್ರಾಪಂ ಸದಸ್ಯರಾದ ದೇವಾರಾಜ್, ಗಂಗಾಧರ್, ತರಣ್, ಮಧು, ರಘುನಾಯಕ್, ಪುಟ್ಟಣ್ಣ ಇದ್ದರು.



# ಮಹಿಳೆಯರು ಧೈರ್ಯವಾಗಿ ಮುನ್ನುಗ್ಗಬೇಕು

**ಮೈಸೂರು:** ಮಹಿಳೆಯರು ಎಲ್ಲಾ ರಂಗಗಳಲ್ಲಿಯೂ ಮುಂಚೂಣಿಯಲ್ಲಿದ್ದು ಧೈರ್ಯವಾಗಿ ಮುನ್ನುಗ್ಗಿದರೆ ಯಶಸ್ಸು ಖಂಡಿತಾ ದೊರೆಯುತ್ತದೆ ಎಂದು ಮೈಸೂರು ಜಿಲ್ಲಾ ಪಂಚಾಯಿತಿಯ ಉಪಕಾರ್ಯದರ್ಶಿಗಳಾದ ಬಿ.ಎಂ. ಸವಿತಾ ಅವರು ತಿಳಿಸಿದರು.

ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಹಾಗೂ ಪರಿಶಿಷ್ಟ ಪಂಗಡಗಳ ಇಲಾಖೆಯ ಸಹಯೋಗದೊಂದಿಗೆ ನಡೆದ ಮಹಿಳಾ ದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಯೋಜನಾ ಸಮನ್ವಯಾಧಿಕಾರಿ ಎಂ.ಕೆ ಮಲ್ಲೇಶ್ ಮಾತನಾಡಿ ಗಂಡಸರಿಗೆ ಪ್ರತಿ ಹಂತದಲ್ಲಿಯೂ ಮಹಿಳೆಯರ ರಕ್ಷಣೆ ಬೇಕೆಂದು ತಿಳಿಸುತ್ತಾ ಬಾಲ್ಯದಲ್ಲಿ ತಾಯಿ, ಯೌವ್ವನದಲ್ಲಿ ಮಡದಿ, ವೃದ್ಧಾಪ್ಯದಲ್ಲಿ ನಮ್ಮನ್ನು ನಮ್ಮ ಹೆಣ್ಣು ಮಕ್ಕಳೆ ಜೋಪಾನವಾಗಿ ನೋಡಿಕೊಳ್ಳುತ್ತಾರೆ. ಆದ್ದರಿಂದ ಮಹಿಳೆಯರಿಲ್ಲದೆ ಪುರುಷರು ಸಾಧನೆ ಮಾಡಲು ಸಾಧ್ಯವಿಲ್ಲ ಎಂದರು.

ಯೂನಿಯನ್ ಬ್ಯಾಂಕಿನ ರೀಜಿನಲ್ ಮುಖ್ಯಸ್ಥರಾದ ಸುನಿಲ್ ವಿ.ಪಾಟೀಲ್ ಮಾತನಾಡಿ ಯೂನಿಯನ್ ಬ್ಯಾಂಕಿನಿಂದ ಮಹಿಳೆಯರಿಗೆ ಇರುವ ಯೋಜನೆಗಳ ಬಗ್ಗೆ ತಿಳಿಸುತ್ತಾ ಮಹಿಳೆಯರಿಲ್ಲದೆ ಜಗತ್ತು ಶೂನ್ಯವೆಂದು ತಿಳಿಸಿದರು. ಸಮಾರಂಭದಲ್ಲಿ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಸಂಶೋಧನಾಧಿಕಾರಿ ಹೆಚ್.ಎಸ್. ಬಿಂದ್ಯಾ, ಯೂನಿಯನ್ ಬ್ಯಾಂಕಿನ ಸಿನಿಬಾ ಕುಮಾರಿ, ವಾರ್ಡನ್ ಸರಸ್ವತಿ, ಬ್ಯಾಂಕಿನ ಮಹಿಳಾ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.




# ಅಸೋಸಿಯೇಷನ್ ಆಫ್ ಅಲಯನ್ಸ್ ಜಿಲ್ಲಾ ಘಟಕಗಳ ಉದ್ಘಾಟನೆ

**ಮೈಸೂರು:** ಅಸೋಸಿಯೇಷನ್ ಆಫ್ ಅಲಯನ್ಸ್ ಸೇವಾ ಸಂಸ್ಥೆಯ ಮೈಸೂರು ಮತ್ತು ಮಂಡ್ಯ ಜಿಲ್ಲಾ ಘಟಕಗಳ ಉದ್ಘಾಟನಾ ಕಾರ್ಯಕ್ರಮ ಓಂಕಾರ ಭಾನುವಾರ (ಮಾ.10) ನಗರದ ಖಾಸಗಿ ಹೋಟೇಲ್‌ನಲ್ಲಿ ಆಯೋಜಿಸಲಾಗಿತ್ತು. ಮೈಸೂರಿನ ಪೊಲೀಸ್ ಆಯುಕ್ತ ಬಿ.ರಮೇಶ್ ಮತ್ತು ಅಲಯನ್ಸ್ ಇಂಟರ್‌ನ್ಯಾಷನಲ್ ಸೇವಾ ಸಂಸ್ಥೆಯ ಮಾಜಿ ಅಂತರರಾಷ್ಟ್ರೀಯ ಅಧ್ಯಕ್ಷ ಹಾಗೂ ಅಲಯನ್ಸ್ ಸಂಸ್ಥಾಪಕ ತಿರುಪತಿ ರಾಜುರವರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಂತರ ಪೊಲೀಸ್ ಆಯುಕ್ತ ಬಿ.ರಮೇಶ್ ಮಾತನಾಡಿ, ಅಲಯನ್ಸ್ ಇಂಟರ್‌ನ್ಯಾಷನಲ್ ಸೇವಾ ಸಂಸ್ಥೆಯು ಭಾರತೀಯರಿಂದ, ಭಾರತೀಯರಿಗಾಗಿ, ಭಾರತದಲ್ಲಿ ಕೇಂದ್ರ ಸ್ಥಾನವನ್ನು ಹೊಂದಿ 32ಕ್ಕಿಂತಲೂ ಅಧಿಕ ರಾಷ್ಟ್ರಗಳಲ್ಲಿ ಜಿಲ್ಲಾ ಕೇಂದ್ರಗಳನ್ನು ಹೊಂದಿ ಅಂತರರಾಷ್ಟ್ರೀಯ ಮಟ್ಟದಲ್ಲಿ 15 ವರ್ಷಗಳಿಂದ ನಿರಂತರವಾಗಿ ತನ್ನ ಸೇವೆಯನ್ನು ಮುಂದುವರೆಸುತ್ತಿದೆ. ಸಾಂಸ್ಕೃತಿಕ ರಾಜಧಾನಿ ಮೈಸೂರಿನಲ್ಲಿ ಹಾಗೂ ಸಕ್ಕರೆ ನಾಡು ಮಂಡ್ಯದಲ್ಲಿ ಸ್ವದೇಶಿ ಅಂತರರಾಷ್ಟ್ರೀಯ ಸೇವಾ ಸಂಸ್ಥೆ ಇಂದು ಅದ್ದೂರಿಯಾಗಿ 600ಕ್ಕೂ ಅಧಿಕ ಜನರ ಸಮ್ಮುಖದಲ್ಲಿ ಪ್ರಾರಂಭಿಸಿರುವುದು ಹೆಮ್ಮೆಯ ಸಂಗತಿ ಎಂದು ಸಂತಸ ವ್ಯಕ್ತಪಡಿಸಿದರು.

ಅವರು ಮುಂದುವರೆಸಿ, ಮುಖ್ಯವಾಗಿ ಹಸಿವು ನಿವಾರಣೆ, ವಿಶೇಷಚೇತನರ ಅಭಿವೃದ್ಧಿ, ಆರೋಗ್ಯ ತಪಾಸಣೆ, ಅವಶ್ಯಕತೆ ಇರುವಂತಹ ಸೇವಾ ಕಾರ್ಯಗಳನ್ನು ಗುರುತಿಸಿ ಎಲ್ಲಾ ಸದಸ್ಯರು ಒಂದುಗೂಡಿ ಸಾರ್ವಜನಿಕರಿಗೆ ಸಹಾಯ ಹಸ್ತ ನೀಡುವುದು ಈ ಸಂಸ್ಥೆಯ ಗುರಿಯಾಗಿದೆ. ಈಗಾಗಲೇ ಮೈಸೂರು ನಗರದಲ್ಲಿ 25 ಶಾಖೆಗಳು ಪ್ರಾರಂಭಗೊಂಡು, ಸೇವಾ ಕಾರ್ಯಕ್ರಮ ಪ್ರಾರಂಭಿಸಿವೆ ಹಾಗೂ ಮಂಡ್ಯದಲ್ಲಿ 15 ಕ್ಲಬ್ಬುಗಳು ಪ್ರಾರಂಭಗೊಂಡು ಕೇಂದ್ರ ಸರ್ಕಾರದಿಂದ ಅನುಮತಿ ದೊರಕಿದೆ. ನೆರೆಯ ರಾಷ್ಟ್ರಗಳಾದ ಆಂಧ್ರಪ್ರದೇಶ, ತಮುಳುನಾಡು ಮತ್ತು ಕೇರಳ ರಾಜ್ಯಗಳಲ್ಲಿ ಅತಿ ಹೆಚ್ಚು ಶಾಖೆಗಳು ಕಾರ್ಯ ನಿರ್ವಹಿಸುತ್ತಿವೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಅಲೈ ತಿರುಪತಿ ರಾಜು ಮಾತನಾಡಿ, ಈ ಸಂಸ್ಥೆ ಸುಮಾರು 50 ಸಾವಿರ ಸದಸ್ಯರನ್ನು ಹಾಗೂ 1800 ಶಾಖೆಗಳನ್ನು ಹೊಂದಿದ್ದು, ಅತೀ ವೇಗದಲ್ಲಿ ದೇಶದ ಪ್ರತಿ ರಾಜ್ಯ ಹಾಗೂ ಜಿಲ್ಲೆಗಳಲ್ಲಿ ತನ್ನ ಶಾಖೆಗಳನ್ನು ಪ್ರಾರಂಭಿಸಿದೆ. ಇದರ ಮುಖ್ಯ ಅನುಕೂಲ ಏನೆಂದರೆ ಅತೀ ಕಡಿಮೆ ಸೇವಾ ಶುಲ್ಕ ಮತ್ತು ನಿರಂತರ ನಾಯಕತ್ವ ಅಭಿವೃದ್ಧಿ. ಮೈಸೂರು ಮತ್ತು ಮಂಡ್ಯದಲ್ಲಿ 40 ಕ್ಲಬ್ಬುಗಳ ಜಿಲ್ಲೆಗಳು ಪ್ರಾರಂಭವಾಗಲು ಅಂತರರಾಷ್ಟ್ರೀಯ ನಿರ್ದೇಶಕರಾದ ಅಲೈ ನಾಗರಾಜ್ ವಿ.ಬೈರಿ ಹಾಗೂ ಮಾಜಿ ಅಂತರರಾಷ್ಟ್ರೀಯ ನಿರ್ದೇಶಕ ಜಿ.ಪಿ.ದಿವಾಕರ್, ಮಾಜಿ ರಾಜ್ಯಪಾಲ ಕೆ.ಎಂ. ಮುನಿಯಪ್ಪ ಹಾಗೂ ಅನಂತ ರಂಗಸ್ವಾಮಿಯವರುಗಳು ಮುಖ್ಯ ಕಾರಣ ಎಂದು ಅವರನ್ನು ಶ್ಲಾಘಿಸಿದರು. ಮೈಸೂರು ಜಿಲ್ಲೆಯಾದ 255ರ ರಾಜ್ಯಪಾಲರಾಗಿ ಅಲೈ ನಂಜುಂಡಸ್ವಾಮಿ ಹಾಗೂ ಮಂಡ್ಯ ಜಿಲ್ಲೆ 268ರ ರಾಜ್ಯಪಾಲರಾಗಿ ಅಲೈ ಕೆ.ಟಿ.ಹನುಮಂತು ಅಧಿಕಾರ ವಹಿಸಿಕೊಂಡರು. ಅಲೈ ಬಾಲಕೃಷ್ಣರಾಜು (ಸಿರಿಬಾಲು) ಹಾಗೂ ಮಾದೇಗೌಡರು ಒಂದನೇ ಉಪರಾಜ್ಯಪಾಲರಾಗಿ ಹಾಗೂ ಅಲೈ ವೆಂಕಟೇಶ್ ಮತ್ತು ಕೆ.ಆರ್.ಶಶಿಧರ್ ಈಚಗೆರೆ ಎರಡನೇ ರಾಜ್ಯಪಾಲರಾಗಿ ಅಧಿಕಾರ ವಹಿಸಿಕೊಂಡರು. ವೇದಿಕೆಯಲ್ಲಿ ಸಂತೋಷ್ ಕುಮಾರ್, ಗಂಗಾಧರಪ್ಪ, ರವೀಂದ್ರನಾಥ್, ರಮೇಶ್, ಚಂದ್ರಶೇಖರ್, ಅಪ್ಪಾಜಿ, ಅತಿತೇಯ ಸಮಿತಿ ಅಧ್ಯಕ್ಷ ಮಹಾಬಲೇಶ್ವರ ಬೈರಿ, ಕಾರ್ಯದರ್ಶಿ ಶ್ರೀಶೈಲ, ಉಪಾಧ್ಯಕ್ಷ ಕೃಷ್ಣಾಜಿರಾಯ್, ಕೋ-ಛೇರ್ಮನ್ ಶೋಭಾ ಸಿರಿಬಾಲು, ಖಜಾಂಚಿ ಸಂಪತ್ ಕುಮಾರ್ ಶೆಟ್ಟಿ ಉಪಸ್ಥಿತರಿದ್ದರು.




**ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ**
ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ

**ಇ-ಪ್ರಕ್ಯೂರ್‌ಮೆಂಟ್ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: 16/2023-24 ದಿನಾಂಕ: 07.03.2024**

**ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ಕೆ.ಡಬ್ಲ್ಯೂ-I ರ ನಿಬಂಧನೆಗೊಳಪಟ್ಟಂತೆ ಟೆಂಡರ್‌ಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪಾರದರ್ಶಕತೆ ಅಧಿನಿಯಮ 2000ರ ಪ್ರಕಾರ ಐಟಂವಾರು ಇ-ಪ್ರಕ್ಯೂರ್‌ಮೆಂಟ್ ಏಕ-ಲಕೋಟೆ ಪದ್ಧತಿಯಲ್ಲಿ (**Single Cover System**) ಸೂಕ್ತ ದರ್ಜೆಯಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿಸಿರುವ ಅಧಿಕೃತ ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇ-ಪ್ರಕ್ಯೂರ್‌ಮೆಂಟ್ ದಾಖಲೆಗಳಿಗಾಗಿ ಇಲಾಖಾ ವೆಬ್‌ಸೈಟ್: **https://eproc.karnataka.gov.in** ಮೂಲಕ ಅರ್ಜಿಯನ್ನು ಸಲ್ಲಿಸಲು ಕೋರಲಾಗಿದೆ. (1) E-procurement ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಷೆಡ್ಯೂಲ್-ಬಿ ಗಳನ್ನು ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ ಸಲ್ಲಿಸುವ ಕೊನೆಯ **ದಿನಾಂಕ: 15.03.2024 ರ 16.30 ರವರೆಗೆ. (2)** ಟೆಂಡರ್‌ನ್ನು ತೆರೆಯುವ **ದಿನಾಂಕ: 16.03.2024 ರಂದು 16.35 ನಂತರ. (3)** ಅರ್ಜಿ ಶುಲ್ಕ (ಹಿಂದಿರುಗಿಸಲಾಗುವುದಿಲ್ಲ): E-procurement ನಿಯಮಾನುಸಾರ.

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಪಂ.ರಾ.ಇಂ. ವಿಭಾಗ, ಚಿಕ್ಕಬಳ್ಳಾಪುರ**

ವಾಸಾಸಂಇ/ಚಿಕ್ಕಬಳ್ಳಾಪುರ/ಆರ್.ಓ.ಸಂಖ್ಯೆ:316/ಕೆಎಸ್‌ಎಂಸಿಎ/2023-24

# ಮಕ್ಕಳ ಮೇಲಿನ ದೌರ್ಜನ್ಯ ತಡೆಯಲು ಸಮನ್ವಯತೆ ಪ್ರಮುಖ

**ಮೈಸೂರು:** ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಸೇರಿದಂತೆ ಮಕ್ಕಳ ಮೇಲೆ ಯಾವುದೇ ದೌರ್ಜನ್ಯವಾದರೂ ಅದು ಸಾಂವಿಧಾನಿಕವಾದಂತಹ ಮಕ್ಕಳ ಹಕ್ಕುಗಳ ಉಲ್ಲಂಘನೆಯಾಗುತ್ತದೆ. ಹೀಗಾಗಿ ಮಕ್ಕಳ ಮೇಲಿನ ದೌರ್ಜನ್ಯ ತಡೆಯಲು ಎಲ್ಲಾ ಇಲಾಖೆಗಳ ಸಮನ್ವಯ ಇದರಲ್ಲಿ ಪ್ರಾಮುಖ್ಯವಹಿಸುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಬಿ.ಜಿ.ದಿನೇಶ್ ಅವರು ಹೇಳಿದರು.

ಮಕ್ಕಳ ರಕ್ಷಣಾ ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಸೋಮವಾರ ಜಿಲ್ಲಾ ಪೊಲೀಸ್ ವರೀಷ್ಠಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ಬಾಲನ್ಯಾಯ ಕಾಯ್ದೆ, ಮಿಷನ್ ವಾತ್ಸಲ್ಯ, ಬಾಲ್ಯವಿವಾಹ ನಿಷೇಧ ಕಾಯ್ದೆಗಳ ಕುರಿತ ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಮೇಲೆ ನಡೆಯುವ ದೌರ್ಜನ್ಯ ತಡೆಯುವಿಕೆ ಮುಖ್ಯವಾಗುತ್ತದೆ. ಮಕ್ಕಳ ಮೇಲೆ ಆಗುವ ದೌರ್ಜನ್ಯಗಳ ವಿರುದ್ಧ ಕ್ರಮಗಳನ್ನು ಯಾವ ಯಾವ ಇಲಾಖೆಗಳು ತೆಗೆದುಕೊಳ್ಳಬೇಕು ಅಂತಾ ಕಾನೂನಿನಲ್ಲಿ ಸೂಚಿಸಲಾಗಿದೆ. ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆಗಟ್ಟುವಿಕೆಯ ಬಗ್ಗೆ ಸೂಕ್ತ ಕ್ರಮ ಕೈಗೊಂಡರೆ ಮಾತ್ರ ಮುಂದೆ ಕಾನೂನನ್ನು ಬಳಸಿಕೊಳ್ಳುವ ಅವಶ್ಯಕತೆ ಇರುವುದಿಲ್ಲ. ಈ ನಿಟ್ಟಿನಲ್ಲಿ ಎಲ್ಲಾ ಇಲಾಖೆಗಳ ಸಮನ್ವಯತೆ ಮುಖ್ಯವಾಗಿರುತ್ತದೆ ಎಂದು ತಿಳಿಸಿದರು. ಮಕ್ಕಳೊಂದಿಗೆ ಸಂವೇದನೆ ಶೀಲತೆಯಿಂದ ವರ್ತಿಸಬೇಕು. ಒಂದು ಆ ಸೂಕ್ಷ್ಮತೆಯನ್ನು ನಾವು ಅಳವಡಿಸಕೊಳ್ಳದಿದ್ದರೆ ಮಕ್ಕಳ ಸಮಸ್ಯೆಗಳ ಬಗ್ಗೆ ತಿಳಿದುಕೊಳ್ಳುವಲ್ಲಿ ವಿಫಲರಾಗುತ್ತೇವೆ. ನಮಗೆ ಪ್ರತಿನಿತ್ಯ ಕೆಲಸ ಇರುತ್ತದೆ. ಆ ಕೆಲಸದ ಒತ್ತಡದ ನಡುವೆಯೂ ಮಕ್ಕಳ ಮೇಲಿನ ಯಾವುದೇ ಪ್ರಕರಣ ಬಂದರೂ ಸಹ ನಾವು ಅತ್ಯಂತ ಸಂವೇದನಾಶೀಲತೆಯಿಂದ ನಡೆದುಕೊಳ್ಳಬೇಕಾಗುತ್ತದೆ. ಸೂಕ್ಷ್ಮ ರೀತಿಯಲ್ಲಿ ತ್ವರಿತವಾಗಿ ಕ್ರಮವನ್ನು ಕೈಗೊಳ್ಳಬೇಕು. ಇಲ್ಲದಿದ್ದರೆ ಮಕ್ಕಳು ಮತ್ತೊಂದು ಪರಿಣಾಮವನ್ನು ಎದುರಿಸಬೇಕಾಗುತ್ತದೆ ಎಂದರು.



ಮಕ್ಕಳದೌರ್ಜನ್ಯ ತಡೆಯಲು ಹಲವಾರು ಕಾನೂನುಗಳಿದ್ದರೂ ಸಹ ಎಲ್ಲೋ ಒಂದು ಕಡೆ ನಾವೆಲ್ಲ ಎಡವುತ್ತಿದ್ದೇವೆ ಕಾರಣ ಒಂದು ತಿಂಗಳ ಹಿಂದೆ ಪಿರಿಯಾಪಟ್ಟಣದಲ್ಲಿ ನಡೆದ ಬಾಲ್ಯ ವಿವಾಹ ಪ್ರಕರಣದಲ್ಲಿ ಅಘಅ (ಚೈಲ್ಡ್ ವೆಲ್‌ಫೇರ್ ಕಮಿಟಿ) ಬಾಲ್ಯ ವಿವಾಹ ತಡೆಯಲು ಎಫ್.ಐ.ಆರ್ ಹಾಕಲು ಕ್ರಮ ಕೈಗೊಳ್ಳಿ ಎಂದು ತಿಳಿಸಿದರೂ ಸಹ ದೇವಸ್ಥಾನ ನಮ್ಮ ವ್ಯಾಪ್ತಿಗೆ ಬರಲ್ಲ ಎಂದು ಹೇಳಿದ ಪಿರಿಯಾಪಟ್ಟಣ ಪೊಲೀಸ್ ಅವರು ಹುಣಸೂರು ಪೊಲೀಸ್ ಠಾಣೆ ವ್ಯಾಪ್ತಿಗೆ ಬರುತ್ತದೆ ಎಂದು ಮಾಹಿತಿಯನ್ನು ನೀಡಿದ್ದರು. ಆದರೆ, ಎಫ್.ಐ.ಆರ್ ಮಾತ್ರ ಆಗುವುದಿಲ್ಲ ಎಂದು ತಿಳಿಸಿದರು.

ಮೈಸೂರಿನಂತಹ ನಗರ ಪ್ರದೇಶಗಳಲ್ಲಿ ಹೀಗೆ ಆಗುತ್ತಿರುವುದು ಆಘಾತಕಾರಿ. ಕಾನೂನು ಸಿ.ಆರ್.ಪಿ.ಸಿ, ಜೆ.ಜೆ. ಕಾಯ್ದೆ, ಪೊಕ್ಸೊ ಕಾಯ್ದೆ ಇರಬಹುದು, ಸರ್ವೋಚ್ಚ ನ್ಯಾಯಾಲಯದ ತೀರ್ಪುಗಳು ಯಾವುದೇ ಮಾಹಿತಿ ಬಂದರೆ ಪ್ರಕರಣ ತ್ವರಿತವಾಗಿ ಪ್ರಕರಣವನ್ನು ದಾಖಲಿಸಿಕೊಳ್ಳಬೇಕೆಂದು ಮಾಹಿತಿ ನೀಡಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಎಸ್.ಮಂಜು ಅವರು ಮಾತನಾಡಿ, ಇಂದಿನ ಮಕ್ಕಳೆ ಮುಂದಿನ ಪ್ರಜೆಗಳು. ಚಿಕ್ಕ ಮಕ್ಕಳು ಸಸಿಗಳಿದ್ದ ಹಾಗೆ. ಗಿಡಗಳಿಗೆ ಯಾವ ರೀತಿ ಪೋಷಣೆ ಮಾಡಿ ಬೆಳೆಸುತ್ತೇವೆಯೋ ಹಾಗೆಯೇ ಮಕ್ಕಳನ್ನು ಬೆಳೆಸಬೇಕು. ಮಕ್ಕಳ ಮೇಲಿನ ದೌರ್ಜನ್ಯ ತಡೆಯಲು ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಉಪ ಪೊಲೀಸ್ ಆಯುಕ್ತರಾದ ಎಸ್ ಜಾಹ್ನವಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನಂದಿನಿ ಬಿ.ಎನ್ ಸೇರಿದಂತೆ ಇತರರು ಹಾಜರಿದ್ದರು.

## ಪುರಂದರದಾಸರ ಸಂಸ್ಮರಣೋತ್ಸವ

**ಬೆಂಗಳೂರು:** ನಗರದ ಶ್ರೀ ದೇವಗಿರಿ ಲಕ್ಷ್ಮೀಕಾಂತ ಸಂಘದ ವತಿಯಿಂದ ಜಯನಗರ 8ನೇ ಬ್ಲಾಕ್‌ನ ಬೆಳಗೋಡು ಕಲಾ ಮಂಟಪದಲ್ಲಿ ತಿರುಮಲ ತಿರುಪತಿ ದೇವಸ್ಥಾನದ ದಾಸಸಾಹಿತ್ಯ ಪ್ರಾಜೆಕ್ಟ್ ಹಾಗೂ ಮಂತ್ರಾಲಯ ಗುರುಸಾರ್ವಭೌಮ ದಾಸ ಸಾಹಿತ್ಯ ಪ್ರಾಜೆಕ್ಟ್ ಸಹಯೋಗದಲ್ಲಿ ವಿಶಿಷ್ಟವಾಗಿ 36ನೇ ವರ್ಷದ ಪುರಂದರದಾಸರ ಸಂಸ್ಮರಣೋತ್ಸವದಲ್ಲಿ ಮಂತ್ರಾಲಯ ಗುರುಸಾರ್ವಭೌಮ ದಾಸ ಸಾಹಿತ್ಯ ಪ್ರಾಜೆಕ್ಟ್ ಕೆ.ಅಪ್ಪಣ್ಣಾಚಾರ್ಯರ ನೇತೃತ್ವದಲ್ಲಿ ಸುಪ್ರಭಾತಸೇವೆ , ಸಾಮೂಹಿಕ ಭಜನೆ ನಂತರ ಅನುಗ್ರಹ ಸಂಗೀತ ಮಹಾವಿದ್ಯಾಲಯದ ವಿದ್ವಾನ್ ಜೆ.ಎಸ್.ಶ್ರೀಕಂಠಭಟ್ ಮತ್ತು ಶಿಷ್ಯವೃಂದದಿಂದ ಪಿಳ್ಳಾರಿ ಗೀತೆಗಳು ನಡೆಯಿತು. ಶ್ರೀ ಸುವಿದ್ಯೇಂದ್ರ ತೀರ್ಥ ಶ್ರೀಪಾದರಿಂದ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು ನಂತರ ಕೆ.ಅಪ್ಪಣ್ಣಾಚಾರ್ಯರಿಂದ



ಅನುಗ್ರಹ ವಚನ . ನಾಡಿನ ಖ್ಯಾತ ಹರಿದಾಸ ಸಾಹಿತ್ಯ ವಿದ್ವಾಂಸರಾದ ಡಾ. ಅರಳುಮಲ್ಲಿಗೆ ಪಾರ್ಥಸಾರಥಿ , ಡಾ ಸುಭಾಷ್ ಕಾಖಂಡಕಿ , ಡಾ.ವಾಸುದೇವ ಅಗ್ನಿಹೋತ್ರಿ, ಕಲ್ಲಾಪುರ ಪವಮಾನಚಾರ್ಯರು ,ಡಾ.ಹ .ರಾ.ನಾಗರಾಜಾಚಾರ್ಯರು, ಡಾ.ಪರಶುರಾಮ ಬೆಟಗೇರಿ, ಪ್ರಸಿದ್ಧ ಗಾಯಕ , ಡಾ.ರಾಯಚೂರು ಶೇಷಗಿರಿದಾಸರು ಮತ್ತು ಸಂಸ್ಕೃತಿ ಚಿಂತಕ ಡಾ.ಗುರುರಾಜ ಪೋಶೆಟ್ಟಿಹಳ್ಳಿ ಮತ್ತು ಅನಂತರಾವ್ ದಂಡಿನ್ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಮಾರಂಭದಲ್ಲಿ ವಿದ್ವಾನ್ ಮಾದನೂರು ಪವಮಾನಾಚಾರ್ಯರಿಗೆ ಸನ್ಮಾನ ; ಮಧ್ಯಾಹ್ನ ವಿದ್ವಾನ್ ರಾಘವೇಂದ್ರ, ಸಿ.ಎನ್.ರಾಯಚೂರು ರವರಿಂದ ದಾಸವಾಣಿ , ಡಾ. ರಾಜಲಕ್ಷ್ಮಿ ಪಾರ್ಥಸಾರಥಿ , ಪುಷ್ಪಾ ಗುಪ್ತ , ಡಾ.ರೇಖಾಕಾಖಂಡಕಿ , ಪದ್ಮಾ ಕಾಖಂಡಕಿ , ಡಾ.ಚಂದ್ರಿಕಾ , ಡಾ,ರಮಾವಿಠಲ್ ಮುಂತಾದ ಮಹಿಳಾ ಹರಿದಾಸಿಣಿಯರಿಗೆ ಮತ್ತು ಸಂಘದ ಹಿರಿಯ ಸದಸ್ಯರಾದ ಸುಮನಾ ಬದಿನಾಥ್ , ವೇದಾವತಿ ಮತ್ತು ಪ್ರಮೀಳಾ ರವರಿಗೆ ಸನ್ಮಾನ , ಸಂಜೆ ದೇವಗಿರಿ ಲಕ್ಷ್ಮೀ ಕಾಂತ ಸಂಘದವರು ನಡೆಸಿದ ಸಾಹಿತ್ಯಕ-ಸಾಂಸ್ಕೃತಿಕ ಆಟಗಳ ಸ್ಪರ್ಧೆಯಲ್ಲಿ ವಿಜೇತರಿಗೆ ಬಹುಮಾನ ವಿನಿಯೋಗ , ಕಲಾಯೋಗಿ ಪುಲಿಕೇಶಿಕಸ್ತೂರಿ ರವರ ಶಾಂತಳಾ ಆರ್ಟ್ಸ್ ರವರಿಂದ ನೃತ್ಯ ರೂಪಕ ಆಯೋಜಿಸಲಾಗಿತ್ತು. ವಿವರಗಳಿಗೆ : 97418 40330 ಸಂಪರ್ಕಿಸಿ.

## ಉಚಿತ ಟೈಲರಿಂಗ್ ತರಬೇತಿ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ



ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಫ್ಯಾಶನ್ ಡಿಸೈನಿಂಗ್ (ಟೈಲರಿಂಗ್) ಕುರಿತ 30 ದಿನಗಳ ಉಚಿತ ತರಬೇತಿಯು ಏಪ್ರಿಲ್ 12 ರಿಂದ ಆರಂಭವಾಗಲಿದ್ದು, ಏಪ್ರಿಲ್ 12 ರಂದು ನಡೆಯಲಿರುವ ನೇರ ಸಂದರ್ಶನದಲ್ಲಿ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಮಹಿಳೆಯರು ಭಾಗವಹಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9740982585, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಮಫಲಕದಲ್ಲಿ ಶೇ. 60 ಕನ್ನಡ ಭಾಷೆ ಕಡ್ಡಾಯ

**ರಾಮನಗರ:** ರಾಮನಗರ ನಗರಸಭೆ ವ್ಯಾಪ್ತಿಯಲ್ಲಿನ ಎಲ್ಲಾ ಉದ್ದಿಮೆದಾರರು ರಾಜ್ಯ ಸರ್ಕಾರವು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಅಧಿನಿಯಮ, 2024ರ ರೀತ್ಯಾ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆಯಾದ ಅಧಿಸೂಚನೆಯಲ್ಲಿ ವಾಣಿಜ್ಯ/ಕೈಗಾರಿಕೆ ಹಾಗೂ ವ್ಯವಹಾರ ಉದ್ಯಮಗಳು, ಟ್ರಸ್ಟ್‌ಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನಾ ಕೇಂದ್ರಗಳು, ಹೋಟೆಲ್ ಮುಂತಾದವುಗಳು ತಮ್ಮ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು ಶೇ. 60 ರಷ್ಟು ಮತ್ತು ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿಸಬೇಕಿರುತ್ತದೆ. ಹಾಗಾಗಿಈ ಪ್ರಕಟಣೆಯಾದ 7 ದಿನಗಳೊಳಗಾಗಿ, ತಮ್ಮ ನಾಮಫಲಕದಲ್ಲಿ ಶೇ. 60 ರಷ್ಟು ಕನ್ನಡ ಭಾಷೆಯನ್ನು ಪ್ರದರ್ಶಿಸಬೇಕು ಹಾಗೂ ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿಸಲು ಕ್ರಮ ವಹಿಸಬೇಕು ತಪ್ಪಿದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ರಾಮನಗರ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನಹಿತ ಪತ್ರಿಕೋದ್ಯಮವು ಸವಾಲಿನ ಸಂಗತಿ: ಎನ್. ಎಸ್. ಶಂಕರ್

**ಬೆಂಗಳೂರು:** ಜನಹಿತ ಪತ್ರಿಕೋದ್ಯಮವು ಬಹುತೇಕ ಪತ್ರಕರ್ತರಿಗೆ ಪ್ರಸ್ತುತ ದಿನಗಳಲ್ಲಿ ನಿಜಕ್ಕೂ ಸವಾಲಾಗುತ್ತಿದ್ದು, ಪತ್ರಿಕಾ ಸ್ವಾತಂತ್ರ್ಯವನ್ನೇ ಕೆಲವರು ಪ್ರಶ್ನೆ ಮಾಡತೊಡಗಿರುವುದು ಅಪಾಯಕಾರಿ ಬೆಳವಣಿಗೆ ಎಂದು ಹಿರಿಯ ಪತ್ರಕರ್ತ ಹಾಗೂ ಚಿತ್ರ ನಿರ್ದೇಶಕ ಎನ್.ಎಸ್. ಶಂಕರ್ ಅಭಿಪ್ರಾಯಪಟ್ಟರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಮ್ಮಿಕೊಂಡ 'ಹಿರಿಯ ಪತ್ರಕರ್ತರಿಗೆ ಮನೆಯಂಗಳದಲ್ಲಿ ಮನದುಂಬಿ ನಮನ' ಕಾರ್ಯಕ್ರಮದಲ್ಲಿ ಸಂಘದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ನಾವು ಪತ್ರಿಕೋದ್ಯಮ ಪ್ರವೇಶ ಮಾಡಿದ ಕಾಲಘಟ್ಟವೇ ಬೇರೆ. ಆಗಿನ ಸೈದ್ಧಾಂತಿಕ ನಿಲುವುಗಳು ವೃತ್ತಿಪರವಾಗಿದ್ದವು. ಆ ಕಾರಣಕ್ಕಾಗಿಯೇ ಜನಪರ ಪತ್ರಿಕೋದ್ಯಮವನ್ನು ಮಾಡಲು ಸಾಧ್ಯವಾಯಿತು. ಎಲ್ಲರನ್ನು ಪ್ರಶ್ನಿಸುವಂತ ಧೈರ್ಯವನ್ನು ಎಂಬತ್ತರ ದಶಕದ ಪತ್ರಿಕೋದ್ಯಮ ಹುಟ್ಟು ಹಾಕಿದ್ದು ಮಹತ್ವದ ಬದಲಾವಣೆ ಎಂದರು. ಕನ್ನಡ ಪತ್ರಿಕೋದ್ಯಮದ ಹಿರಿಯ ತಲೆಮಾರಿನ ಲಂಕೇಶ್, ವಡ್ಡರ್ಸೆ ರಘುರಾಮ್ ಶೆಟ್ಟಿಯಂತವರ ಗರಡಿಯಲ್ಲಿ ತಾನು ಪಳಗಿದ್ದ ಕಾರಣ, ಹೋರಾಟ ಮನೋಭಾವವನ್ನೂ ರೂಢಿಸಿಕೊಳ್ಳಲು ಸಾಧ್ಯವಾಗಿದೆ ಎಂದರು.

ಈಗೀಗ ಹೆಚ್ಚಿನ ಟಿ.ವಿ. ಮಾಧ್ಯಮಗಳು ಟಿ.ಆರ್.ಪಿ. ಓಟದ ಹಿಂದೆ ಬೆನ್ನು ಹತ್ತಿ, ಸಿನಿಮಾ ದೃಶ್ಯಗಳಂತೆ ಪೂರ್ವಯೋಜಿತ ವರದಿ- ದೃಶ್ಯವನ್ನೊದಗಿಸುತ್ತದೆ ಎಂದೂ ಅವರು ಹೇಳಿದರು.

ಪತ್ರಕರ್ತರ ಪರವಾದ ಹೋರಾಟಕ್ಕೆಂದು ಆರಂಭವಾದ ಕಾರ್ಯನಿರತ ಪತ್ರಕರ್ತರ ಸಂಘವು ವೃತ್ತಿಪರ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿರುವುದು ನಿಜಕ್ಕೂ ಶ್ಲಾಘನೀಯ ಸಂಗತಿ ಎಂದರು.

ಕೆಯುಡಬ್ಲ್ಯೂಜೆ ಸೇವೆ ಅನನ್ಯ: ಪತ್ರಕರ್ತರ ಹಕ್ಕಿಗೋಸ್ಕರ ಹೋರಡಲು ಹುಟ್ಟಿಕೊಂಡ ಕೆಯುಡಬ್ಲ್ಯೂಜೆ ಅದಕ್ಕೆ ಮಾತ್ರ ಸೀಮಿತವಾಗದೆ ವಾರ್ಷಿಕ ಪತ್ರಕರ್ತರ ಸಮ್ಮೇಳನಗಳು, ಪ್ರಶಸ್ತಿ ಗಳು ಹಾಗೂ



ವೃತ್ತಿಗೆ ಸಹಾಯವಾಗುವಂತಹ ಅನೇಕ ಚಟುವಟಿಕೆಗಳನ್ನು ಮಾಡಿಕೊಂಡು ಬಂದಿದೆ. ಎಂದು ಎನ್.ಎಸ್.ಶಂಕರ್ ಹೇಳಿದರು.

ಪತ್ರಕರ್ತರಿಗೆ ಕಷ್ಟಬಂದಾಗ ವೃತ್ತಿಯಲ್ಲಿ ಬೆದರಿಕೆಗಳು ಬಂದಾಗ ಸಂಘ ನೆರವಿಗೆ ಬಂದಿದೆ. ಇಂತಹದೊಂದು ಸಂಸ್ಥೆ ಜೊತೆಯಲ್ಲಿ ಇಲ್ಲದಿದ್ದರೆ ಪತ್ರಕರ್ತರ ಕಷ್ಟವನ್ನು ಊಹೆಮಾಡಿಕೊಳ್ಳಲು ಸಾಧ್ಯವಿಲ್ಲ ದ ಪರಿಸ್ಥಿತಿ ನಿರ್ಮಾಣ ವಾಗಿತ್ತಿತ್ತು ಎಂದು ಅವರು ಅಭಿಪ್ರಾಯಪಟ್ಟರು.

ತಾನು ಕೆ.ಯು.ಡಬ್ಲ್ಯೂ.ಜೆ. ಕುರಿತಂತೆ ಸಾಕ್ಷ್ಯಚಿತ್ರವೊಂದನ್ನು ನಿರ್ದೇಶಿಸಿರುವುದಾಗಿಯೂ ತಮ್ಮ ಅನುಭವವನ್ನು ಎನ್.ಎಸ್.ಶಂಕರ್ ಮಾತುಕತೆಯ ವೇಳೆ ನೆನಪಿಸಿಕೊಂಡರು.

ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದ ತಂಡ ಹಿರಿಯರನ್ನು ಗೌರವಿಸುವ ಕಾರ್ಯಕ್ರಮ ಮುಂದುವರಿಸಲಿ , ವೃತ್ತಿನಿರತ ಪತ್ರಕರ್ತರಿಗೆ ಕಷ್ಟಗಳು ಬಂದಾಗ ನೆರವುಕೊಡಿಸುವಕೆಲಸ ಮುಂದುವರಿಸಲಿ ಎಂದು ಆಶಿಸಿದರು.

ದಂಪತಿಗಳನ್ನು ಅಭಿನಂದಿಸಿ ಮಾತನಾಡಿದ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಎನ್.ಎಸ್.ಶಂಕರ್ ಅವರು ಮೂರು ದಶಕಗಳ ಕಾಲ ಪತ್ರಿಕೋದ್ಯಮ ಮಾಡಿದ್ದಲ್ಲದೆ, ಉಲ್ಟಾ ಪಲ್ಟಾ ಚಲನ ಚಿತ್ರದಿಂದ ಜನಪ್ರಿಯತೆ ಗಳಿಸಿದ ಇವರು ಮೂರು ದಶಕಗಳಿಂದ ಪತ್ರಿಕಾರಂಗದಲ್ಲೂ ಕೆಲಸಮಾಡಿ ಅನುಭವ ಹೊಂದಿ ಬಹುಮುಖ ಪ್ರತಿಭೆಯಿಂದ ಕೂಡಿದವರಾಗಿದ್ದಾರೆ ಎಂದರು.

# ಶಿಕ್ಷಣವು ಪ್ರಗತಿಗೆ ಪ್ರೇರಕ ಶಕ್ತಿ

## ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಮತ

**ಬೆಂಗಳೂರು / ವಿಜಯಪುರ:** ರಾಷ್ಟ್ರದ ಅಭಿವೃದ್ಧಿಯಲ್ಲಿ ಮಹಿಳೆಯರ ಕೊಡುಗೆ ಬಹಳ ಮುಖ್ಯ. ಆ ದೇಶದ ಮಹಿಳೆಯರು ಅಭಿವೃದ್ಧಿಯಲ್ಲಿ ಸಂಪೂರ್ಣವಾಗಿ ಪಾಲ್ಗೊಂಡಾಗ ಮಾತ್ರ ಯಾವುದೇ ರಾಷ್ಟ್ರ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ 15ನೇ ವಾರ್ಷಿಕ ಘಟಿಕೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ಹೇಳಿದ್ದರು, ನೀವು ಸಮಾಜದ ಪ್ರಗತಿಯ ಬಗ್ಗೆ ನಿಖರವಾಗಿ ತಿಳಿದುಕೊಳ್ಳಬೇಕಾದರೆ, ಆ ಸಮಾಜದ ಮಹಿಳೆಯರ ಸ್ಥಿತಿಯ ಬಗ್ಗೆ ತಿಳಿದುಕೊಳ್ಳಿ. ಇಂದಿನ ಮಹಿಳೆಯರು ಕೌಟುಂಬಿಕ ಮತ್ತು ಸಾಮಾಜಿಕ ಜವಾಬ್ದಾರಿಗಳ ಜೊತೆಗೆ ಪ್ರತಿಯೊಂದು ಕ್ಷೇತ್ರದಲ್ಲೂ ತಮ್ಮ ಕೌಶಲ್ಯವನ್ನು ಪ್ರದರ್ಶಿಸುವ ಮೂಲಕ ರಾಷ್ಟ್ರದ ಅಭಿವೃದ್ಧಿಗೆ ಕೊಡುಗೆ ನೀಡುತ್ತಿದ್ದಾರೆ ಎಂದರು.

ಲಿಂಗ ಸಮಾನತೆಯ ತತ್ವವನ್ನು ಭಾರತೀಯ ಸಂವಿಧಾನದ ಪೀಠಿಕೆ, ಮೂಲಭೂತ ಹಕ್ಕುಗಳು, ಮೂಲಭೂತ ಕರ್ತವ್ಯಗಳು ಮತ್ತು ನಿರ್ದೇಶನ ತತ್ವಗಳಲ್ಲಿ ಪ್ರತಿಪಾದಿಸಲಾಗಿದೆ. ಸಂವಿಧಾನವು ಮಹಿಳೆಯರಿಗೆ ಸಮಾನ ಸ್ಥಾನಮಾನವನ್ನು ನೀಡುವುದು ಮಾತ್ರವಲ್ಲದೆ ಮಹಿಳೆಯರ ಸಬಲೀಕರಣಕ್ಕಾಗಿ ರಾಜ್ಯಕ್ಕೆ ಹಕ್ಕುಗಳನ್ನು ನೀಡುತ್ತದೆ ಎಂದು ಹೇಳಿದರು.

ಮಹಿಳೆಯರ ಹಕ್ಕುಗಳು ಮತ್ತು ಕಾನೂನು ಹಕ್ಕುಗಳನ್ನು ರಕ್ಷಿಸಲು, 1990 ರಲ್ಲಿ ಸಂಸತ್ತಿನ ಕಾಯಿದೆಯ ಮೂಲಕ ರಾಷ್ಟ್ರೀಯ ಮಹಿಳಾ ಆಯೋಗವನ್ನು ಸ್ಥಾಪಿಸಲಾಯಿತು. ಭಾರತೀಯ ಸಂವಿಧಾನದ 73 ಮತ್ತು 74ನೇ ತಿದ್ದುಪಡಿಗಳ ಮೂಲಕ ಮಹಿಳೆಯರಿಗೆ ಪಂಚಾಯತ್ ಮತ್ತು ಪುರಸಭೆಗಳ ಸ್ಥಳೀಯ ಸಂಸ್ಥೆಗಳಲ್ಲಿ ಸ್ಥಾನಗಳ ಮೀಸಲಾತಿಯನ್ನು ಒದಗಿಸಲಾಗಿದೆ. 128 ನೇ ಸಾಂವಿಧಾನಿಕ ತಿದ್ದುಪಡಿ ಮಸೂದೆ, ಮಹಿಳಾ ಮೀಸಲಾತಿ ಮಸೂದೆ 2023 ಅಥವಾ ನಾರಿ ಶಕ್ತಿ ವಂದನ್ ಕಾಯ್ದೆಯ ಮೂಲಕ, ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೂರನೇ



ಒಂದು ಭಾಗದಷ್ಟು ಸ್ಥಾನಗಳನ್ನು ಮೀಸಲಿಡಲು ಅವಕಾಶ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರವು ಮಹಿಳೆಯರನ್ನು ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಸಬಲೀಕರಣಗೊಳಿಸಲು ಮತ್ತು ಅವರಿಗೆ ಅಭಿವೃದ್ಧಿ ಮತ್ತು ಭದ್ರತೆಗೆ ಅವಕಾಶಗಳನ್ನು ಒದಗಿಸಲು ವಿವಿಧ ಯೋಜನೆಗಳನ್ನು ಪ್ರಾರಂಭಿಸಿದೆ. ಬೇಟಿ ಬಚಾವೋ ಬೇಟಿ ಪಢಾವೋ, ವರ್ಕಿಂಗ್ ವುಮೆನ್ ಹಾಸ್ಟೆಲ್, ಒನ್-ಸ್ಟಾಪ್ ಸೆಂಟರ್, ಮಹಿಳಾ ಸಹಾಯವಾಣಿ, ಮಹಿಳಾ ಪೊಲೀಸ್ ಸ್ವಯಂಸೇವಕರು, ಉಜ್ವಲಾ ಯೋಜನೆ, ಮಹಿಳಾ ಶಕ್ತಿ ಕೇಂದ್ರ ಮತ್ತು ಇತರ ಹಲವು ಯೋಜನೆಗಳ ಮೂಲಕ ಭಾರತ ಸರ್ಕಾರವು ಹೆಚ್ಚು ಅಂತರ್ಗತ ಮತ್ತು ಸುರಕ್ಷಿತ ವಾತಾವರಣವನ್ನು ಸೃಷ್ಟಿಸಲು ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಶಿಕ್ಷಣವು ಮಾನವೀಯತೆಯ ಪ್ರಗತಿಗೆ ಪ್ರೇರಕ ಶಕ್ತಿ ಎಂದು ನಮಗೆಲ್ಲರಿಗೂ ತಿಳಿದಿದೆ. ಇದು ರಾಷ್ಟ್ರವನ್ನು ಹೆಚ್ಚು ಶಕ್ತಿಯುತ ಮತ್ತು ಶ್ರೇಷ್ಠವನ್ನಾಗಿ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ರಾಷ್ಟ್ರದ ಪ್ರಗತಿಯಲ್ಲಿ ಶಿಕ್ಷಣದ ಪ್ರಾಮುಖ್ಯತೆಯನ್ನು ನೀತಿ ನಿರೂಪಕರು ಅರಿತುಕೊಂಡಿದ್ದಾರೆ ಮತ್ತು ಆದ್ದರಿಂದ ಇತ್ತೀಚಿನ ದಶಕಗಳಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಹೇಳಿದರು.

ಧನ ಗಳಿಸಲು ಲಕ್ಷ್ಮಿ ಪೂಜೆ ಮಾಡುತ್ತೇವೆ, ವಿದ್ಯೆಗಾಗಿ ಸರಸ್ವತಿ ಹಾಗೂ ಶಕ್ತಿಗಾಗಿ ದುರ್ಗಾ ಮಾತೆಯನ್ನು ಪೂಜಿಸುತ್ತೇವೆ. ಇದರ ಅರ್ಥ ಪ್ರಾಚೀನ ಕಾಲದಿಂದಲೂ ಮಹಿಳೆಯನ್ನು ಪೂಜಿಸುತ್ತ ಬಂದಿದ್ದೇವೆ. ಮಹಿಳೆಯ ಮನಸ್ಸು ಮಾಡಿದರೆ ಸಾಧನೆಗಳ ಉತ್ತುಂಗಕ್ಕೆ ತಲುಪಬಹುದು. ಈ ಮಹಿಳಾ ವಿಶ್ವವಿದ್ಯಾಲಯವು ಶಿಕ್ಷಣದ ಮೂಲಕ ಮಹಿಳಾ ಸಬಲೀಕರಣಕ್ಕಾಗಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರುವುದು ಸಂತೋಷದ ವಿಷಯವಾಗಿದೆ, ಇದಕ್ಕಾಗಿ ವಿಶ್ವವಿದ್ಯಾಲಯದ ಕುಟುಂಬದ ಎಲ್ಲ ಸದಸ್ಯರಿಗೆ ಅಭಿನಂದನೆಗಳು. ಪದವಿ ಸ್ವೀಕರಿಸಿದ ಎಲ್ಲಾ ವಿದ್ಯಾರ್ಥಿನಿಯರು ದೇಶವನ್ನು ಸರ್ವೋಚ್ಚ ಎಂದು ಪರಿಗಣಿಸಿ, ದೇಶದ ಆರ್ಥಿಕತೆಯನ್ನು ಬಲಪಡಿಸಲು ಮತ್ತು ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ಘಟಿಕೋತ್ಸವದಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ದಾಕ್ಷಾಯಣಿ ಎಸ್.ಅಪ್ಪ. ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ. ಸಿ. ಸುಧಾಕರ್, ಕುಲಪತಿಗಳಾದ ಪ್ರೊ?ರ. ಬಿ. ಕೆ. ತುಳಸಿಮಾಲಾ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ಡಿಎಫ್‌ಒ ಏಡುಕೊಂಡಲ ವಿರುದ ಕಾನೂನು ಕ್ರಮಕ್ಕೆ ರೈತರು ಒತ್ತಾಯ

**ಕೋಲಾರ:** ಅರಣ್ಯ ಒತ್ತುವರಿ ಆರೋಪದಡಿಯಲ್ಲಿ ಸಾಗುವಳಿ ಚೀಟಿ ಹೊಂದಿದ್ದ ರೈತರ ಸಾವಿರಾರು ಎಕರೆ ಮಾವಿನ ತೋಪುಗಳನ್ನು ಸೇರಿದಂತೆ ತರಕಾರಿ ಬೆಳೆಗಳನ್ನು ತೆರವುಗೊಳಿಸಿದ ಅರಣ್ಯ ಉಪ ಸಂರಕ್ಷಣಾಧಿಕಾರಿ ಏಡುಕೊಂಡಲು ಹಾಗೂ ಅದಕ್ಕೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಒತ್ತಾಯಿಸಿ ಸಂಯುಕ್ತ ಹೋರಾಟ ಸಮಿತಿ ಹಾಗೂ ರೈತರು ಜಿಲ್ಲಾಧಿಕಾರಿ ಕಛೇರಿ ಸಮೀಪ ಸೋಮವಾರ ಬೃಹತ್ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಹೈಕೋರ್ಟ್ ವಕೀಲ ಶಿವಪ್ರಕಾಶ್ ಮಾತನಾಡಿ ರೈತರಿಗೆ ಸರಕಾರವೇ ಕಾನೂನು ಪ್ರಕಾರ ಹಕ್ಕು ಪತ್ರಗಳನ್ನು ನೀಡಿದ್ದರೂ ಸಹ ಅವರ ಜಮೀನುಗಳನ್ನು ಅಕ್ರಮವಾಗಿ ದೌರ್ಜನ್ಯದಿಂದ ರೈತರಿಂದ ಸ್ವಾಧೀನಕ್ಕೆ ಪಡೆದು, ಕೋಟ್ಯಂತರ ರೂಪಾಯಿಗಳ ಮೌಲ್ಯದ ಮಾವಿನ ಮರಗಳು ತರಕಾರಿ ಬೆಳೆಗಳನ್ನು ನಾಶಪಡಿಸಿಕೊಂಡಿದ್ದಾರೆ ಕಾನೂನು ಪ್ರಕಾರ ಲಕ್ಷಾಂತರ ಮರಗಳನ್ನು ಕಡಿದು ಹಾಕಿದ ಅರಣ್ಯ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಇದು ಒಂದು ರೀತಿಯಲ್ಲಿ ಜಿಲ್ಲೆಯಲ್ಲಿ ಸರ್ವಾಧಿಕಾರಿ ದೋರಣೆಯ ರೀತಿಯಲ್ಲಿ ನಡೆದುಕೊಂಡಿದ್ದಾರೆ ಎಂದು ಆರೋಪಿಸಿದರು.

# ಮಂಡ್ಯದಲ್ಲಿ ಲಯನ್ಸ್ ಪ್ರಾಂತೀಯ ಸಮ್ಮೇಳನ ಯಶಸ್ವಿ

**ಮಂಡ್ಯ:** ಇಲ್ಲಿತನಕ ಉಪಗ್ರಹಗಳನ್ನು ಕಳುಹಿಸಲಾಗಿದ್ದು, ಮಾನವ ಸಹಿತ ಉಪಗ್ರಹ ಕಳುಹಿಸುವ ಆಲೋಚನೆ ಮಾಡುವ ಮೂಲಕ ಯಶಸ್ವಿಯಾಗುವ ನಿಟ್ಟಿನಲ್ಲಿ ಸಾಗುತ್ತಿದ್ದೇವೆ ಎಂದು ಬೆಂಗಳೂರಿನ ಇಸ್ರೋ ಗಗನಯಾನ ಯೋಜನೆಯ ಉಪ ಯೋಜನಾ ನಿರ್ದೇಶಕ ಎಂ.ಕೆ. ಮುರಹರಿ ಹೇಳಿದರು.

ನಗರದ ಎ ಅಂಡ್ ಎ ಕನ್ವೇನ್‌ಷನ್ ಹಾಲ್‌ನಲ್ಲಿ ಅಂತರ ರಾಷ್ಟ್ರೀಯ ಲಯನ್ಸ್ ಪ್ರಾಂತ್ಯ 8 ಮತ್ತು 9ರ ಅತಿಥೇಯ ಸಮಿತಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಪ್ರಾಂತೀಯ ಸಮ್ಮೇಳನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗಗನ ಯಾನದಲ್ಲಿ ರಷ್ಯಾ ಮತ್ತು ಚೈನಾ ಸಾಲಿಗೆ ಭಾರತವು ಕೂಡ 2035ರ ವೇಳೆಗೆ ಸಾಧನೆಯನ್ನು ಪರಿಪೂರ್ಣವಾಗಿ ಮಾಡುತ್ತದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ ಅವರು, ಚಂದ್ರಯಾನವು 2019 ರಲ್ಲಿ ಸಫಲವಾಗುವುದರಲ್ಲಿ ವಿಫಲರಾಗುತ್ತೇವೆ, ಆದರೆ ಅದರಲ್ಲಿ ಮತ್ತೆ ಯಶಸ್ವಿಯಾಗಿ ಚಂದ್ರಯಾನ ನಡೆಸಿ ಅದರ ಅಧ್ಯನದಲ್ಲಿ ಹಲವು ವಿಜ್ಞಾನಿಗಳ ಶ್ರಮದಿಂದ ಹಾಗೂ ಪ್ರಯತ್ನದಿಂದ ಯಶ ಕಾಣಲು ಸಾಧ್ಯವಾಗುತ್ತದೆ ಎಂದು




ವಿವರಿಸಿದರು.

ಇದೇ ಸಂದರ್ಭದಲ್ಲಿ ಹೊಲಿಗೆ ಯಂತ್ರ, ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್, ಆಕ್ಸಿಜನ್ ಕಾನ್ಸಟೇಟರ್, ಶುದ್ಧ ಕುಡಿಯುವ ನೀರಿನ ಯಂತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಗಾರರಾಗಿ ರಚನಾ ಮಹೇಶ್, ಪ್ರಾಂತ್ಯ ಅಧ್ಯಕ್ಷರಾದ ಎಂ.ಆರ್.ಮಂಜು, ಬಿ.ಆರ್.ಚಂದ್ರಶೇಖರ್, ಲಯನ್ ಕೆ.ದೇವೇಗೌಡ, ಆನಂದ್, ನಾರಾಯಣಸ್ವಾಮಿ, ಪುನೀತ್‌ಕುಮಾರ್, ಹರ್ಷಾ, ಹನುಮಂತಯ್ಯ ಸೇರಿದಂತೆ ಹಲವರು ಭಾಗವಹಿಸಿದ್ದರು.

# ವ್ಯಕ್ತಿ ಪೂಜೆ ಸರ್ವಾಧಿಕಾರತ್ವದ ಸಂಕೇತ

**ಪಿರಿಯಾಪಟ್ಟಣ:** ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಉಳಿಸಲು ದೇಶದಲ್ಲಿ 2ನೇ ಸ್ವಾತಂತ್ರ್ಯ ಸಂಗ್ರಾಮ ನಡೆಯಬೇಕಾದ ಅಗತ್ಯವಿದೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ತಿಳಿಸಿದರು.

ತಾಲೂಕಿನ ನವಿಲೂರು ಗ್ರಾಮದಲ್ಲಿ ಭಾನುವಾರ ಅಂಬೇಡ್ಕರ್ ಯುವಕರ ಸಂಘದ ವತಿಯಿಂದ ನಿರ್ಮಿಸಿರುವ ಅಂಬೇಡ್ಕರ್ ಹಾಗೂ ತಥಾಗತ ಗೌತಮ ಬುದ್ಧನ ಪ್ರತಿಮೆಗಳ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅಂಬೇಡ್ಕರ್ ಸಮಾಜದ ಪ್ರೇರಣಾ ಶಕ್ತಿಯಾಗಿ ಎಲ್ಲಾ ವರ್ಗದ ಜನರಿಗೂ ಸಮಾನವಾದ ಹಕ್ಕುಗಳನ್ನು ಸಂವಿಧಾನದಲ್ಲಿ ಕಲ್ಪಿಸಿಕೊಟ್ಟಿದ್ದಾರೆ. ಆದರೆ ಇತ್ತೀಚೆಗೆ ಮತೀಯ ಶಕ್ತಿಗಳು ವ್ಯಕ್ತಿ ಪೂಜೆ ಮಾಡುವ ಮೂಲಕ ದೇಶದಲ್ಲಿ ಸರ್ವಾಧಿಕಾರವನ್ನು ತರಲು ಹೊರಟಿರುವ ಕಾರಣ ನಮ್ಮ ಸಂವಿಧಾನ ಅಪಾಯದಲ್ಲಿದೆ. ಕೋಮುವಾದ, ಮತೀಯವಾದ ಹಾಗೂ ಧರ್ಮಾಂಧತೆಯ ಮೂಲಕ ಸ್ವಾತಂತ್ರ್ಯದ ಉದ್ದೇಶ ಹಾಗೂ ಕಾಂಗ್ರೆಸ್‌ನ ಹೋರಾಟದ ಆಶಯಗಳ ನಾಶಕ್ಕೆ ಕೋಮುವಾದಿಗಳು ಹೊರಟಿದ್ದಾರೆ ಹಾಗಾಗಿ ದೇಶದಲ್ಲಿ ಸಮಾನ ಅವಕಾಶಗಳು ಮತ್ತು ಸಮಾ ಸಮಾಜದ ಆಶಯ , ಸರ್ವಧರ್ಮ ಗಳನ್ನು ಪ್ರೀತಿಸುವವರ ಮತಗಳು ಮಾರಾಟವಾಗದಂತೆ ಎಚ್ಚರಿಕೆ ವಹಿಸಬೇಕು ಎಂದರು .ಪಶುಪಾಲನಾ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ಮಾತನಾಡಿ ಅಂಬೇಡ್ಕರ್ ಜೀವನದಲ್ಲಿ ಕಹಿ ಉಂಡಿದ್ದರೂ ಸಹ ಎಲ್ಲಾ ವರ್ಗದ ಜನರು ನನ್ನಂತೆ ನಲುಗಬಾರದು ಎಂದು ಎಲ್ಲಾ ವರ್ಗದ ಜನರಿಗೂ ಸಮಾನವಾದ ಹಕ್ಕುಗಳನ್ನು ಸಂವಿಧಾನದಲ್ಲಿ ಕಲ್ಪಿಸಿಕೊಟ್ಟಿದ್ದಾರೆ ಹಾಗಾಗಿ ಇಡೀ ವಿಶ್ವವೇ ಅಂಬೇಡ್ಕರ್ ಅವರನ್ನು ನೆನಪು ಮಾಡಿಕೊಳ್ಳುತ್ತಿದೆ. ಇತ್ತೀಚೆಗೆ ಮತೀಯ ಶಕ್ತಿಗಳು ಸಂವಿಧಾನವನ್ನೇ ಬದಲಿಸಲು ಮುಂದಾಗಿದ್ದಾರೆ ಇದರ ಬಗ್ಗೆ ಜಾಗೃತೆ ವಹಿಸಬೇಕು. ಇವರನ್ನು ಅಧಿಕಾರದಲ್ಲಿ ಮುಂದುವರಿದರೆ ಸಂವಿಧಾನ ಹಾಗೂ



ಪ್ರಜಾಪ್ರಭುತ್ವ ವ್ಯವಸ್ಥೆಗೆ ಅಪಾಯ ಕಟ್ಟಿಟ್ಟ ಬುತ್ತಿ ಹಾಗಾಗಿ ಸಂವಿಧಾನವನ್ನು ಉಳಿಸುವ ನಿಟ್ಟಿನಲ್ಲಿ ಎಲ್ಲರೂ ಕಾರ್ಯಪ್ರವೃತ್ತರಾಗಬೇಕು. ಪಿರಿಯಾಪಟ್ಟಣ ತಾಲೂಕಿನ ಕೆರೆಗಳಿಗೆ ನೀರು ತುಂಬಿಸುವ ವಿಚಾರದಲ್ಲಿ ನವಿಲೂರು ಗ್ರಾಮ ಎತ್ತರವಾದ ಪ್ರದೇಶವಾಗಿದ್ದು, ಈ ಭಾಗಕ್ಕೆ ಕಾವೇರಿ ನೀರು ಬರುವ ಸಾಧ್ಯತೆ ಕಡಿಮೆ ಇದೆ ಆದರೂ ಮತ್ತೊಮ್ಮೆ ಈ ಭಾಗದಲ್ಲಿ ನೀರು ತುಂಬಿಸುವ ಕೆಲಸಕ್ಕೆ ಪೂರಕವಾಗಿ ಕೆಲಸ ಮಾಡೋಣ, ಲೋಕಸಭೆ ಚುನಾವಣೆ ಮುಗಿದ ನಂತರ ಜಿಲ್ಲಾ ಮಟ್ಟದ ಉದ್ಯೋಗ ಮೇಳವನ್ನು ಪಿರಿಯಾಪಟ್ಟಣದಲ್ಲಿ ಆಯೋಜಿಸೋಣ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಅಂತಾರಾಷ್ಟ್ರೀಯ ಬುದ್ಧಿಸ್ಟ್ ಮಾಂಕ್ಸ್ ಟ್ರಸ್ಟ್ ನ ಬೋಧಿ ದತ್ತ ಭಂತೇಜಿ, ಬಹುಜನ ಚಿಂತಕ ರಘೋತ್ತಮ ಹೊ.ಬ, ನಳಂದ ಬೌದ್ಧಗುರು ಕರ್ಮಪ, ಮಾತನಾಡಿದರು. ತಹಶೀಲ್ದಾರ್ ಕುಂಞಿ ಅಹಮದ್, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ಗ್ರಾಪಂ ಅಧ್ಯಕ್ಷೆ ಸರೋಜ ಪ್ರಕಾಶ್, ಅಂಬೇಡ್ಕರ್ ಯುವಕರ ಸಂಘದ ಅಧ್ಯಕ್ಷ ಮಹಾದೇವ್, ಮುಖಂಡರಾದ ನವಿಲೂರು ಮಹಾದೇವ್, ಪಿ.ಮಹದೇವ್, ಐಲಾಪುರ ರಾಮು, ಚನ್ನಕಲ್ ಶೇಖರ್, ಚೆಲುವರಾಜ್, ಗ್ರಾಪಂ ಸದಸ್ಯರಾದ ಯಶೋದಮ್ಮ, ಜಯಂತಿ, ಶಾಂತಮ್ಮ ಇದ್ದರು.

## ಡಾ. ರಾಜ್ ಕಪ್ ಕ್ರಿಕೆಟ್ ಪಂದ್ಯಾವಳಿ

**ಪಿರಿಯಾಪಟ್ಟಣ:** ತಾಲೂಕಿನ ಭೋಗನಹಳ್ಳಿ ಗ್ರಾಮದಲ್ಲಿ 14ನೇ ವರ್ಷದ ಜಿಲ್ಲಾ ಮಟ್ಟದ ಡಾ. ರಾಜ್ ಕಪ್ ಕ್ರಿಕೆಟ್ ಪಂದ್ಯಾವಳಿ ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಬಿಜೆಪಿ ಜಿಲ್ಲಾ ಯುವ ಮೋರ್ಚಾ ಕಾರ್ಯದರ್ಶಿ ಅಭಿಲಾಶ್ ಮಾತನಾಡಿ ಗ್ರಾಮೀಣ ಮಟ್ಟದಲ್ಲಿ ಇಂತಹ ಕ್ರೀಡಾಕೂಟಗಳನ್ನು ಏರ್ಪಡಿಸುವ ಮೂಲಕ ಯುವಕರಲ್ಲಿ ಆತ್ಮಸ್ಥೈರ್ಯ ಹಾಗೂ ಒಗ್ಗಟ್ಟಿನಲ್ಲಿ ಬಲವಿದೆ ಎಂಬುದನ್ನು ತೋರಿಸಿವಲ್ಲಿ ಯಶಸ್ವಿಯಾಗಲಿದೆ ಈಗಿನ ಯುವ ಜನತೆ ದುಶ್ಚಟಗಳಿಗೆ ಮಾರುಹೋಗುತ್ತಿದ್ದಾರೆ ಅವರನ್ನ ಆ ಚಟದಿಂದ ದೂರ ಸರಿಸಬೇಕೆಂದರೆ ಇಂಥ ಕ್ರೀಡಾಟಗಳು ಅತಿ ಹೆಚ್ಚು ನಡೆಯಬೇಕು ಎಂದು ತಿಳಿಸಿದರು

ಮಾಜಿ ಸೈನಿಕ ಶಿವು ಅಕಾಡೆಮಿಯ ಸಂಸ್ಥಾಪಕ ಶಿವು ಮಾತನಾಡಿ ಕರ್ನಾಟಕದಲ್ಲಿ ಚಿತ್ರರಂಗದಲ್ಲೇ ಒಂದು ಉತ್ತಮ ಸ್ಥಾನಮಾನ ಗಳಿಸಿದಂತಹ ಮೇರು ನಟ ಡಾ. ರಾಜಕುಮಾರ್ ಅವರನ್ನು ಸ್ಮರಿಸುವ ಕೆಲಸವನ್ನು ಈ ಗ್ರಾಮದ ಯುವಕರು ಸೋಮೇಶ್ವರ ಕ್ರೀಡಾ ಸಂಸ್ಥೆ ಕಟ್ಟಿಕೊಂಡು ಕ್ರೀಡೆ ಒಂದೇ ಅನ್ನದೇ ಗ್ರಾಮಗಳಲ್ಲಿ ಆಗು ಹೋಗು ಕೆಲಸಗಳಿಗೆ ಸಮಾಜದಲ್ಲಿ ಯುವಕರಿಗೆ ಸ್ಫೂರ್ತಿ ದಾಯಕದ ಕಾರ್ಯಕ್ರಮಗಳನ್ನ ಮಾಡಿಕೊಂಡು ಬರುತ್ತಿದ್ದಾರೆ ಇದೊಂದು ಹೆಮ್ಮೆಯ ಸಂಗತಿ ಎಂದು ತಿಳಿಸಿದರು

ಪ್ರಥಮ ಸ್ಥಾನ ಪಡೆದುಕೊಂಡ ತಂಡ ಬೆಟ್ಟದಪುರ ಫ್ರೆಂಡ್ಸ್ 20,000 ನಗದು ಮತ್ತು ಆಕರ್ಷಕ ಟ್ರೋಫಿಯನ್ನ ತನ್ನದಾಗಿಸಿಕೊಂಡಿತು ದ್ವಿತೀಯ ಬಹುಮಾನವನ್ನು ಪಡೆದುಕೊಂಡ ತಂಡ ಬಿಸಿಸಿ ರಾವಂದೂರು 10,000 ನಗದು ಮತ್ತು ಟ್ರೋಫಿಯನ್ನ ಹಾಗೂ ತೃತೀಯ ಬಹುಮಾನವನ್ನು ಕಟ್ಟೆ ಮಳಲವಾಡಿ ತಂಡ ಪಡೆದುಕೊಂಡಿತ್ತು ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ವಿ ಎಸ್ ಎಸ್ ಬಿ ಎನ್ ಅಧ್ಯಕ್ಷರಾದ ಮರಿಗೌಡ ಗ್ರಾಮ ಪಂಚಾಯತಿ ಸದಸ್ಯ ಶಶಿಧರ್ ಕಾಂಗ್ರೆಸ್ ಮುಖಂಡರಾದ ನಂದೀಶ್ ಸಮಾಜ ಸೇವಕಿ ಶುಭ ಗೌಡ ಪ್ರಥಮ ದರ್ಜೆ ಗುತ್ತಿಗೆದಾರರ ಜಗದೀಶ್ ಎಂ ಎಂ ಕೆ ಫೌಂಡೇಶನ್ ಎಂ ಡಿ ಮಹದೇವ್ ಡಾ. ಶಂಕರ್ ಗ್ರಾಮದ ಮುಖಂಡರುಗಳಾದ ಕಾಳೇಗೌಡ ಮಂಜುನಾಥ್ ಕುಮಾರ್ ಬಿ.ಜೆ ಪ್ರಕಾಶ್ ಬಿ ಆರ್ ಹಾಗೂ ಸೋಮೇಶ್ವರ ಸಂಸ್ಥೆಯ ಸಂಘದ ಗೌರವ ಅಧ್ಯಕ್ಷ ಸುನಿಲ್ ಅಧ್ಯಕ್ಷ ವಿನಯ್ ರಾಜ್ ಖಜಾಂಚಿ ಗೋವಿಂದೇಗೌಡ ಕಾರ್ಯದರ್ಶಿ ರವಿಚಂದ್ರ, ಉಪಾಧ್ಯಕ್ಷ ಪ್ರಸನ್ನ ಸೇರಿದಂತೆ ಹಲವಾರು ಕ್ರೀಡಾಪಟುಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಸಂಜೆ ಟಿಪ್ಸ್



## ಬಗಾಡಿಯಾ ಚೈತ್ರ ಇಂಡಸ್ಟ್ರೀಸ್ ಸ್ವಾಧೀನ ಒಪ್ಪಂದಕ್ಕೆ ಪಿಟ್ಟಿ ಇಂಜಿನಿಯರಿಂಗ್ ಸಹಿ

ಪಿಟ್ಟಿ ಇಂಜಿನಿಯರಿಂಗ್ ಲಿಮಿಟೆಡ್ (ಪಿಇಎಲ್) ಇಂದು ಬಗಾಡಿಯಾ ಚೈತ್ರಾ ಇಂಡಸ್ಟ್ರೀಸ್ ಪ್ರೈವೇಟ್ ಲಿಮಿಟೆಡ್ (ಬಿಸಿಐಪಿಎಲ್) ಮತ್ತು ಅದರ ಷೇರುಗಳ ಸಹಿತ 124.92 ಕೋಟಿ ರೂಪಾಯಿ ಮೌಲ್ಯದ ಬಿಸಿಐಪಿಎಲ್ನ ಶೇಕಡ 100 ರಷ್ಟು ಈಕ್ವಿಟಿ ಷೇರು ಬಂಡವಾಳವನ್ನು ಸ್ವಾಧೀನಪಡಿಸಿಕೊಳ್ಳುವ ಒಪ್ಪಂದಕ್ಕೆ ಸಹಿ ಹಾಕಿದೆ. ನಿವ್ವಳ ಸಾಲ ಮತ್ತು ದುಡಿಯುವ ಬಂಡವಾಳ ಬದಲಾವಣೆಗಳಿಗೆ ಮೇಲೆ ಹೇಳಲಾದ ಎಂಟರ್ಪ್ರೈಸ್ ಮೌಲ್ಯವನ್ನು ಮುಕ್ತಾಯ ದಿನಾಂಕದಂದು ಹೊಂದಿಸುವ ಮೂಲಕ ಮತ್ತು ಉಭಯ ಪಕ್ಷಗಳ ನಡುವೆ ಪರಸ್ಪರ ಒಪ್ಪಿಗೆಯಾಗುವ ಇತರ ಹೊಂದಾಣಿಕೆಗಳಿಗೆ ಒಳಪಟ್ಟು ಸ್ವಾಧೀನದ ವೆಚ್ಚವನ್ನು ನೀಡಲಾಗುತ್ತದೆ. ಒಟ್ಟಾರೆ ಪರಿಗಣನೆಯ ಭಾಗವಾಗಿ, ಬಿಸಿಐಪಿಎಲ್ನ ಅಸ್ತಿತ್ವದಲ್ಲಿರುವ ಸಾಲವನ್ನು ಮರುಪಾವತಿಸಲು ಅಂತಿಮ ದಿನಾಂಕದಂದು ಬಿಸಿಐಪಿಎಲ್ಗೆ 40 ಕೋಟಿಗಳಷ್ಟು ಹಣವನ್ನು ತುಂಬಿಸಲು ಒಪ್ಪಿಕೊಳ್ಳಲಾಗಿದೆ ಎಂದು ಪಿಟ್ಟಿ ಇಂಜಿನಿಯರಿಂಗ್ ಲಿಮಿಟೆಡ್ನ ಉಪಾಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಅಕ್ಷಯ್ ಎಸ್ ಪಿಟ್ಟಿ ಪ್ರಕಟಣೆಯಲ್ಲಿ ಹೇಳಿದ್ದಾರೆ.ಬಿಸಿಐಪಿಎಲ್ ಎಸಿ/ಡಿಸಿ ಮೋಟಾರ್ಗಳು, ಆಲ್ಟರ್ನೇಟರ್ಗಳು, ಪಂಪ್ಗಳು, ಗೃಹೋಪಯೋಗಿ ಉಪಕರಣಗಳು, ಎಲೆಕ್ಟ್ರಿಕಲ್ ವೆಹಿಕಲ್ ಇತ್ಯಾದಿ ಉದ್ಯಮಗಳಿಗೆ ಎಲೆಕ್ಟ್ರಿಕಲ್ ಲ್ಯಾಮಿನೇಶನ್ಗಳು ಮತ್ತು ಅಲ್ಯೂಮಿನಿಯಂ ಡೈ ಕಾಸ್ಟ್ ರೋಟರ್ಗಳ ತಯಾರಕರಾಗಿದ್ದು, ದಕ್ಷಿಣ ಭಾರತದ ಮಾರುಕಟ್ಟೆಗೆ ಪ್ರಮುಖ ಭೌಗೋಳಿಕ ಮಾನ್ಯತೆ ಹೊಂದಿದೆ. ಈ ಸ್ವಾಧೀನವು ಪಿಟ್ಟಿ ದಕ್ಷಿಣ ಭಾರತದಲ್ಲಿ ತನ್ನ ಅಸ್ತಿತ್ವವನ್ನು ವಿಸ್ತರಿಸಲು ಸಹಾಯ ಮಾಡುತ್ತದೆ, ಒಟ್ಟಾರೆ ಆಸ್ತಿ ಬೇಸ್ ಮತ್ತು ಉತ್ಪಾದನಾ ಸಾಮರ್ಥ್ಯವನ್ನು ಸೇರಿಸುತ್ತದೆ, ಹೊಸ ಅಂತಿಮ ಬಳಕೆಯ ಕ್ಷೇತ್ರಗಳಿಗೆ ಪ್ರವೇಶವನ್ನು ಒದಗಿಸುತ್ತದೆ ಮತ್ತು ಹೊಸ ಗ್ರಾಹಕರನ್ನು ಸೇರಿಸುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ಗಸಗಸೆ ಪಾಯಸ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಗಸಗಸೆ- 1ಕಪ್, ಬಾದಾಮಿ- 7, ಅಕ್ಕಿ- 1ಚಮಚ, ಹಾಲು- ಅರ್ಧ ಲೀಟರ್, ಏಲಕ್ಕಿ- 5, ಸಕ್ಕರೆ- ಅರ್ಧ ಕಪ್, ತುಪ್ಪ- 2ಚಮಚ, ದ್ರಾಕ್ಷಿ, ಗೋಡಂಬಿ- ಸ್ವಲ್ಪ, ಕೇಸರಿ- ಸ್ವಲ್ಪ, ಜಾಯಿಕಾಯಿ ರಸ- ಸ್ವಲ್ಪ, ಲವಂಗ- 3

### ಮಾಡುವ ವಿಧಾನ

ಮೊದಲಿಗೆ ಅಕ್ಕಿಯನ್ನು ನೆನೆಸಿಟ್ಟುಕೊಳ್ಳಬೇಕು. ಇನ್ನೊಂದೆಡೆ ಕೇಸರಿಯನ್ನು ಹಾಲಿನಲ್ಲಿ ಅದ್ದಿಟ್ಟುಕೊಳ್ಳಬೇಕು. ಮತ್ತೊಂದೆಡೆ ದ್ರಾಕ್ಷಿ, ಗೋಡಂಬಿಯನ್ನು ತುಪ್ಪದಲ್ಲಿ ಹುರಿದಿಟ್ಟುಕೊಳ್ಳಬೇಕು. ಇಷ್ಟು ಮಾಡಿದ ಬಳಿಕ ಗಸಗಸೆಯನ್ನು ಚೆನ್ನಾಗಿ ಹುರಿದುಕೊಳ್ಳಬೇಕು. ಇದರ ಜತೆಯಲ್ಲೇ ಬಾದಾಮಿಯನ್ನು ಹಾಕಿ ಹುರಿಯಬೇಕು. ನಂತರ ಬೇರೊಂದು ಪಾತ್ರೆಯಲ್ಲಿ ಕಾಯಿಸಿದ ಹಾಲನ್ನು ತೆಗೆದಿಟ್ಟುಕೊಳ್ಳಬೇಕು. ಎಲ್ಲವನ್ನು ತಯಾರು ಮಾಡಿಟ್ಟುಕೊಂಡ ಬಳಿಕ ಹುರಿದ ಗಸಗಸೆ, ಬಾದಾಮಿ, ನೆನೆಸಿಟ್ಟ ಅಕ್ಕಿ, ಏಲಕ್ಕಿಯನ್ನು ಮಿಕ್ಸಿಗೆ ಹಾಕಿ ಚೆನ್ನಾಗಿ ರುಬ್ಬಬೇಕು. ಬಳಿಕ ತೆಗೆದು ಅದನ್ನು ಒಂದು ಪಾತ್ರೆಗೆ ಹಾಕಿ ಅದಕ್ಕೆ ಕಾಯಿಸಿದ ಹಾಲನ್ನು ಸೇರಿಸಿ ನಿಧಾನ ಉರಿಯಲ್ಲಿ ಕುದಿಸಬೇಕು. ಕುದಿಯುವಾಗಲೇ ಸಕ್ಕರೆಯನ್ನು ಸೇರಿಸಬೇಕು. ತಳ ಹಿಡಿಯದಂತೆ ಮತ್ತು ಗಂಟು ಕಟ್ಟದಂತೆ ಮಾಡಲು ಸೌಟುನಿಂದ ತಿರುಗಿಸುತ್ತಿರಬೇಕು. ಅದು ಚೆನ್ನಾಗಿ ಕುದಿಯುವಾಗ ಜಾಯಿಕಾಯಿ ರಸ ಮತ್ತು ಲವಂಗವನ್ನು ಹಾಕಬೇಕು. ಪಾಯಸ ಚೆನ್ನಾಗಿ ಕುದಿದ ಬಳಿಕ ಅದನ್ನು ಇಳಿಸಿ ತುಪ್ಪದಲ್ಲಿ ಹುರಿದ ದ್ರಾಕ್ಷಿ ಗೋಡಂಬಿ ಹಾಗೂ ಹಾಲಿನಲ್ಲಿ ಅದ್ದಿಟ್ಟ ಕೇಸರಿಯನ್ನು ಹಾಕಿ ಅಲಂಕರಿಸಿ.

# ಮಾಜಿ ವಿಶ್ವಸುಂದರಿ ಐಶ್ವರ್ಯಾ ರೈಗೆ ಮಗ ಇದ್ದಾನೆ



ಬಾಲಿವುಡ್ ನಟಿ, ಮಾಜಿ ವಿಶ್ವಸುಂದರಿ ಐಶ್ವರ್ಯಾ ರೈ ಇತ್ತೀಚೆಗೆ ಸಿನಿಮಾಗಳಿಂದ ದೂರವಿದ್ದಾರೆ. ಹಾಗಂತ ಅವರ ಪ್ರಸಿದ್ಧಿಗೆ ಕಿಂಚಿತ್ತೂ ಕೊರತೆ ಬಂದಿಲ್ಲ. ಇನ್ನು ಇತ್ತೀಚಿನ ದಿನಗಳವರೆಗೆ ಬಾಲಿವುಡ್ ಪವರ್ ಕಪಲ್ ಅಭಿಷೇಕ್ ಬಚ್ಚನ್ ಮತ್ತು ಐಶ್ವರ್ಯಾ ರೈ ಡಿವೋರ್ಸ್ ಪಡೆಯುತ್ತಾರೆ ಎಂಬ ಸುದ್ದಿ ವೈರಲ್ ಆಗಿತ್ತು. ಆದರೆ ಪೋಸ್ಟ್ ಶೇರ್ ಮಾಡುವ ಮೂಲಕ ವದಂತಿಗೆ ತೆರೆ ಎಳೆದಿದ್ದರು. ಇದೀಗ 32 ವರ್ಷದ ಯುವಕನೊಬ್ಬ, ತಾನು ಬಾಲಿವುಡ್ ನಟಿ ಐಶ್ವರ್ಯಾ ರೈ ಬಚ್ಚನ್ ಅವರ ಮಗ ಎಂದು ಹೇಳಿಕೊಂಡಿರುವ ಬಗ್ಗೆ ಸುದ್ದಿ ವೈರಲ್ ಆಗಿದೆ. ಅಂದಹಾಗೆ ಈ ವ್ಯಕ್ತಿ ಹುಟ್ಟಿದ್ದು, 1998 ರಲ್ಲಿ. ಲೆಕ್ಕಾಚಾರದ ಪ್ರಕಾರ ಆಗ ಐಶ್ವರ್ಯಾ ರೈಗೆ 15 ವರ್ಷ. ಟೈಮ್ಸ್ ಆಫ್ ಇಂಡಿಯಾದಲ್ಲಿ ಪ್ರಕಟವಾದ ಸುದ್ದಿ ಪ್ರಕಾರ, ಈ ವ್ಯಕ್ತಿಯ ಹೆಸರು ಸಂಗೀತ್ ಕುಮಾರ್. ಐಶ್ವರ್ಯಾ ರೈ ತಮ್ಮ ತಾಯಿ ಮತ್ತು ನಾನು ಲಂಡನ್'ನಲ್ಲಿ ಐವಿಎಫ್ (ಇನ್ ವಿಟ್ರೋ ಫರ್ಟಿಲೈಸೇಶನ್) ಮೂಲಕ ಜನಿಸಿದೆ ಎಂದು ಸಂದರ್ಶನವೊಂದರಲ್ಲಿ ಹೇಳಿಕೊಂಡಿದ್ದಾನೆ. ಅಂದಹಾಗೆ ಇದು ಎರಡು ವರ್ಷಗಳ ಹಿಂದಿನ ಸಂದರ್ಶನದ ವಿಡಿಯೋ. ಸಂಗೀತ್ ಕುಮಾರ್ ಎಂಬ ವ್ಯಕ್ತಿ 2018 ರಲ್ಲಿ ಮಾಧ್ಯಮಗಳ ಮುಂದೆ ಈ ವಿಷಯಗಳನ್ನು ಬಹಿರಂಗಪಡಿಸಿದ್ದನು. ಐಶ್ವರ್ಯಾ ರೈ ಅವರ ಪೋಷಕರು 2 ವರ್ಷ ವಯಸ್ಸಿನವರೆಗೂ ಆತನನ್ನು ನೋಡಿಕೊಂಡಿದ್ದಾರಂತೆ. ಅದಾದ ನಂತರ ವಡಿವೇಲು ರೆಡ್ಡಿ ವಿಶಾಖಪಟ್ಟಣಕ್ಕೆ ಕರೆತಂದರು. ತನ್ನ ಜನನಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಸಂಬಂಧಿಕರು ನಾಶಪಡಿಸಿದ್ದಾರೆ ಎಂದು ಸಂಗೀತ್ ಕುಮಾರ್ ಹೇಳುತ್ತಾನೆ.





# ಟೈಪ್-2 ಮಧುಮೇಹ ಹಿಮ್ಮೆಟ್ಟಿಸಲು ಆಹಾರ ಸೇವನೆ ಮತ್ತು ಜೀವನಶೈಲಿಯ ಬದಲಾವಣೆಯೇ ಸಾಕು

### ಹೆಲ್ತ್ ಟಿಪ್ಸ್



ಕರ್ನಾಟಕದಲ್ಲಿ ಪ್ರತಿ ಹತ್ತು ಜನರಲ್ಲಿ ಒಬ್ಬರು ಮಧುಮೇಹದಿಂದ ಬಳಲುತ್ತಿದ್ದಾರೆ ಮತ್ತು ಪ್ರತಿ ಮೂರನೇ ವ್ಯಕ್ತಿಯಲ್ಲಿ ಅಧಿಕ ರಕ್ತದೊತ್ತಡ ಇರುವುದು ಕಳೆದ ವರ್ಷ ನಡೆಸಿದ ಅಧ್ಯಯನದಿಂದ ತಿಳಿದು ಬಂದಿದೆ. ಬೆಂಗಳೂರಿನಂತಹ ವೇಗದ ಹಾಗೂ ತೀವ್ರ ಒತ್ತಡದ ಬದುಕಿನ ಮಹಾನಗರಗಳಲ್ಲಿ ನಡೆಸುವ ಅಧ್ಯಯನಗಳು ಇನ್ನೂ ಹೆಚ್ಚಿನ ಆತಂಕಕಾರಿ ಮಾಹಿತಿ ಒದಗಿಸುತ್ತವೆ. ವ್ಯಕ್ತಿಗಳನ್ನು ಕಾಡುವ ಮಧುಮೇಹ ಅಧಿಕ ರಕ್ತದೊತ್ತಡದಂತಹ ಕಾಯಿಲೆಗಳಿಗೆ ಆನುವಂಶಿಕವಾಗಿ ಬರುವ ಪ್ರಾಥಮಿಕ ಕಾರಣಗಳ ಕೊಡುಗೆಯೇ ಮುಖ್ಯವಾಗಿರುತ್ತದೆ. ವ್ಯಕ್ತಿಯಿಂದ ವ್ಯಕ್ತಿಗೆ ಆನುವಂಶಿಕವಾಗಿ ಹರಿದು ಬರುವ ವಂಶವಾಹಿನಿಗಳು ಮಧುಮೇಹಕ್ಕೆ ಕೊಡುಗೆ ನೀಡುವುದಕ್ಕಿಂತ ಆಹಾರ ಸೇವನೆ / ಪೋಷಣೆ ಮತ್ತು ಜೀವನಶೈಲಿಯೇ ಹೆಚ್ಚು ಮಹತ್ವದ್ದಾಗಿರಬಹುದು ಎಂಬುದನ್ನು ಸಂಶೋಧನೆಗಳು ದೃಢಪಡಿಸುತ್ತವೆ. ಪ್ರತಿ ದಿನ ವ್ಯಾಯಾಮ ಮಾಡುವುದರಿಂದ ಮತ್ತು ಆಹಾರ ಸೇವನೆಯಲ್ಲಿ ಸೂಕ್ತ ಬದಲಾವಣೆಗಳನ್ನು ಅಳವಡಿಸಿಕೊಳ್ಳುವುದರಿಂದ ಮಧುಮೇಹಕ್ಕೆ ಕಾರಣವಾಗಿರುವ ಆನುವಂಶಿಕತೆಯ ಪ್ರಭಾವವನ್ನು ನಿರ್ಮೂಲನೆ ಮಾಡಲು ಸಾಧ್ಯವಾಗಲಿದೆ ಎನ್ನುವುದೂ ಸಂಶೋಧನೆಗಳಿಂದ ಸಾಬೀತಾಗಿದೆ. ಇದೇ ಕಾರಣಕ್ಕಾಗಿಯೇ, ಆರಂಭದಲ್ಲಿಯೇ ಮಧುಮೇಹ ಪತ್ತೆ ಮಾಡುವುದರಿಂದ ಹಾಗೂ ದಿನನಿತ್ಯದ ಜೀವನಶೈಲಿಯಲ್ಲಿ ಸೂಕ್ತ ಬದಲಾವಣೆಗಳನ್ನು ರೂಢಿಸಿಕೊಳ್ಳುವುದರಿಂದ ಕಾಯಿಲೆ ಬರುವುದನ್ನು ಮತ್ತು ನಂತರದ ದಿನಗಳಲ್ಲಿ ಕಂಡುಬರುವ ಕಾಯಿಲೆಯ ತೀವ್ರತೆಯನ್ನು ಗಮನಾರ್ಹವಾಗಿ ತಗ್ಗಿಸಬಹುದು. ಸಸ್ಯಗಳನ್ನು ಆಧರಿಸಿದ ಸಂಪೂರ್ಣ ಸಸ್ಯಾಹಾರ ಸೇವನೆಯು ಮಧುಮೇಹವನ್ನು ತಡೆಗಟ್ಟುವ, ನಿರ್ವಹಿಸುವ ಮತ್ತು ಹಿಮ್ಮೆಟ್ಟಿಸುವಂತಹ ಸಾಮರ್ಥ್ಯವನ್ನು ಹೊಂದಿದೆ ಎಂಬುದನ್ನು ಸಾಬೀತುಪಡಿಸಲು ಸಾಕಷ್ಟು ಸಂಶೋಧನಾ ಪುರಾವೆಗಳಿವೆ.ಈ ವಾಸ್ತವ ಸಂಗತಿಯ ಹಿನ್ನೆಲೆಯಲ್ಲಿ, ಅಮೆರಿಕದ ಲಾಭದ ಉದ್ದೇಶ ಹೊಂದಿರದ ಹೊಣೆಗಾರಿಕೆಯ ಔಷಧಗಳಿಗೆ ಸಂಬಂಧಿಸಿದ ವೈದ್ಯರ ಸಮಿತಿಯು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ. ಮಧುಮೇಹವನ್ನು ಆರಂಭಿಕ ಹಂತದಲ್ಲಿಯೇ ಪೋಷಣೆ ಮತ್ತು ಜೀವನಶೈಲಿಯ ಮೂಲಕವೇ ನಿರ್ವಹಿಸಬಹುದಾಗಿರುವುದರ ವಾಸ್ತವ ಸಂಗತಿ ಬಗ್ಗೆ ವ್ಯಕ್ತಿಗಳು ಮತ್ತು ವೈದ್ಯರಲ್ಲಿ ಜಾಗೃತಿ ಮೂಡಿಸಲು ಈ ಸಮಿತಿಯು ರಚನಾತ್ಮಕವಾಗಿ ಕೆಲಸ ಮಾಡುತ್ತಿದೆ. ಔಷಧಿ ಸೇವಿಸುವ ಅಗತ್ಯವಿದ್ದರೆ ಅದು ಕಾಯಿಲೆ ನಿಯಂತ್ರಣದ ಎರಡನೇ ರಕ್ಷಣಾ ಕ್ರಮವಾಗಿರಬೇಕು ಎಂಬುದನ್ನು ಈ ವೈದ್ಯರ ಸಮಿತಿಯು ಪ್ರಚುರಪಡಿಸುತ್ತಿದೆ.ಸಾಮಾನ್ಯವಾಗಿ, ಮಧುಮೇಹಕ್ಕೆ ಔಷಧ ಸೇವನೆಯ ಚಿಕಿತ್ಸೆ ನೀಡಲಾಗುತ್ತದೆ. ಉದಾಹರಣೆಗೆ ಹೇಳುವುದಾದರೆ ಹೈಪೊಗ್ಲಿಸಿಮಿಕ್ ಮಾತ್ರೆಗಳ ಸೇವನೆ ಮತ್ತು ಇನ್ಸುಲಿನ್ ಚಿಕಿತ್ಸೆ ನೀಡಲಾಗುವುದು. ಜೊತೆಗೆ ಸ್ಥೂಲಕಾಯ ಅಥವಾ ಬೊಜ್ಜು ಕರಗಿಸುವ ಶಸ್ತ್ರಚಿಕಿತ್ಸೆ ನಡೆಸುವ ಆಯ್ಕೆಗಳೂ ಇರುತ್ತವೆ. ಹಲವಾರು ಸಮರ್ಥ ಕಾರಣಗಳು ಇದ್ದರೂ ಮಧುಮೇಹ ನಿರ್ವಹಣೆಗೆ ಪ್ರಮುಖವಾಗಿ ನೆರವಾಗುವ ಜೀವನಶೈಲಿಯಲ್ಲಿ ಬದಲಾವಣೆಗಳನ್ನು ಅಳವಡಿಸಿಕೊಳ್ಳಲು ಕಾಯಿಲೆಪೀಡಿತರು ಹೆಚ್ಚು ಮಹತ್ವ ನೀಡುವುದಿಲ್ಲ ಎಂದು ಪಿಸಿಆರ್ಎಂನ ಆಂತರಿಕ ಔಷಧ ಮತ್ತು ಜೀವನಶೈಲಿ ಔಷಧ ವಿಭಾಗದ ವೈದ್ಯೆ ಡಾ.ವನಿತಾ ರೆಹಮಾನ್ ಅವರು ಹೇಳುತ್ತಾರೆ. ಟೈಪ್-2 ಮಧುಮೇಹವು ವ್ಯಕ್ತಿಯನ್ನು ಜೀವನಪೂರ್ತಿ ಬಾಧಿಸುವ ಶಿಕ್ಷೆಯಲ್ಲ. ಅದನ್ನು ಸಂಪೂರ್ಣವಾಗಿ ನಿಯಂತ್ರಿಸಿ ಹಿಮ್ಮೆಟ್ಟಿಸಬಹುದು. ದಿನನಿತ್ಯ ತಪ್ಪದೇ ವ್ಯಾಯಾಮ ಮಾಡುವುದರಿಂದ, ಒತ್ತಡವನ್ನು ಸಮರ್ಪಕವಾಗಿ ನಿರ್ವಹಿಸುವುದರಿಂದ ಹಾಗೂ ಸಸ್ಯಾಹಾರ ಆಧಾರಿತ ಆಹಾರ ಸೇವನೆಯ ನೆರವಿನಿಂದ ಈ ಪ್ರಯೋಗದಲ್ಲಿ ಭಾಗಿಯಾಗಿದ್ದ ಶೇ 30ರಷ್ಟು ಮಧುಮೇಹಿಗಳಲ್ಲಿ ಕಾಯಿಲೆಯು ಉಪಶಮನ ಆಗಿರುವುದು ದೃಢಪಟ್ಟಿದೆ ಎಂದೂ ಅವರು ಹೇಳಿದ್ದಾರೆ.

# ಆಮ್ವೇ ಇಂಡಿಯಾ HerHealth First ಅಭಿಯಾನ




ಆಮ್ವೇ ಇಂಡಿಯಾ, ಪ್ರಬಲವಾದ #HerHealthFirst ವಿಧಾನವನ್ನು ಪರಿಚಯಿಸುವುದರ ಮೂಲಕ ಮಹಿಳೆಯರ ಆರೋಗ್ಯಕ್ಕೆ ಆದ್ಯತೆ ನೀಡುವ ಅಚಲ ಬದ್ಧತೆಯೊಂದಿಗೆ ಅಂತರರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲು ಮುಂಚೂಣಿಯಲ್ಲಿದೆ. ಈ ಉಪಕ್ರಮವು ಮಹಿಳೆಯರ ಆರೋಗ್ಯದ ಕುರಿತು ನಿರ್ಣಾಯಕ ವಿಷಯಗಳ ಬಗ್ಗೆ ಪ್ರೇರೇಪಿಸುವ ಮತ್ತು ವರ್ಧಿಸುವ ಗುರಿಯನ್ನು ಹೊಂದಿದೆ. ಈ ಉಪಕ್ರಮವು ಮಹಿಳೆಯರ ಆರೋಗ್ಯದ ಕುರಿತು ನಿರ್ಣಾಯಕ ವಿಷಯಗಳನ್ನು ಪ್ರೇರೇಪಿಸುವ ಮತ್ತು ವರ್ಧಿಸುವ ಗುರಿಯನ್ನು ಹೊಂದಿದೆ. ಕಾರ್ಯಕ್ರಮಗಳ ಸರಣಿಯನ್ನು ಆಯೋಜಿಸುವ ಮೂಲಕ, ಕಂಪನಿಯು ಎಲ್ಲಾ ಮಹತ್ವಾಕಾಂಕ್ಷೆಯ ಮಹಿಳೆಯರಿಗೆ ತಮ್ಮ ಆರೋಗ್ಯ ಗುರಿಗಳ ಉಸ್ತುವಾರಿ ವಹಿಸಲು ಹಾಗೂ ಅವರ ಕನಸುಗಳನ್ನು ಸಾಧಿಸಲು ತಮ್ಮ ಗಡಿಗಳನ್ನು ಮೀರಿ ಮುಂದುವರಿಯುವ ಪ್ರಬಲ ಸಂದೇಶವನ್ನು ನೀಡಿದೆ.

ಈ ಸಂದರ್ಭದಲ್ಲಿ ಪ್ರತಿಕ್ರಿಯಿಸಿದ ಆಮ್ವೇ ಇಂಡಿಯಾದ ಮುಖ್ಯಸ್ಥ ರಜನೀಶ್ ಚೋಪ್ರಾ ತಿಳಿಸಿದರು, ''ಆಮ್ವೇಯಲ್ಲಿ, ಪರಿವರ್ತನೆಯ ಬದಲಾವಣೆಯ ಹಿಂದೆ ಮಹಿಳೆಯರು ಪ್ರೇರಕ ಶಕ್ತಿ ಆಗಿದ್ದಾರೆ ಎನ್ನುವುದನ್ನು ನಾವು ನಂಬುತ್ತೇವೆ. ಆರೋಗ್ಯಕರ ಭಾರತವನ್ನು ನಿರ್ಮಿಸುವ ನಮ್ಮ ದೃಢವಾದ ಬದ್ಧತೆಯಲ್ಲಿ, ತಮ್ಮ ಕುಟುಂಬದ ಯೋಗಕ್ಷೇಮದಲ್ಲಿ ಮಹಿಳೆಯರು ವಹಿಸುವ ಪ್ರಮುಖ ಪಾತ್ರವನ್ನು ನಾವು ಗುರುತಿಸುತ್ತೇವೆ. ಸಶಕ್ತ ಮಹಿಳೆಯರು ಜೀವನದ ಪ್ರತಿ ಹಂತದಲ್ಲೂ ಉತ್ತಮ ಆರೋಗ್ಯ ಫಲಿತಾಂಶಗಳನ್ನು ಬೆಳೆಸುವಲ್ಲಿ ಪ್ರಮುಖರಾಗಿದ್ದಾರೆ. ಇದಲ್ಲದೆ, ಮಹಿಳೆಯರು ವೈವಿಧ್ಯತೆ ಮತ್ತು ಒಳಗೊಳ್ಳುವಿಕೆಯನ್ನು ಕೈಗೊಳ್ಳಲು ಉತ್ತೇಜಿಸುವ ಮೂಲಕ, ಸಮಾಜವನ್ನು ಉತ್ತಮವಾಗಿ ಮರುರೂಪಿಸುವ ಧನಾತ್ಮಕ ತರಂಗದ ಪರಿಣಾಮವನ್ನು ತರಬಹುದು.ಅವರು ಮತ್ತಷ್ಟು ಸೇರಿಸಿದರು, ಈ ವರ್ಷದ ಅಂತರಾಷ್ಟ್ರೀಯ ಮಹಿಳಾ ದಿನದ ಥೀಮ್, #InspireInclusion, ಮಹಿಳೆಯರ ಸಮಗ್ರ ಯೋಗಕ್ಷೇಮವನ್ನು ಆಚರಿಸುವ ಆಮ್ವೇಯ ಬದ್ಧತೆಯನ್ನು ಸಂಪೂರ್ಣವಾಗಿ ಪ್ರತಿಧ್ವನಿಸುತ್ತದೆ. ಮಹಿಳೆಯರು ತಮ್ಮ ಆರೋಗ್ಯ ಮತ್ತು ಅವರಕುಟುಂಬದವರ ಆರೋಗ್ಯದ ಬಗ್ಗೆ ತಿಳುವಳಿಕೆಯುಳ್ಳ ಆಯ್ಕೆಗಳನ್ನು ಮಾಡಲು ಅಧಿಕಾರ ನೀಡುವುದರ ಮೇಲೆ ನಾವು ಗಮನ ಹರಿಸುತ್ತೇವೆ. ಸ್ವ-ಆರೈಕೆ, ಆರೋಗ್ಯಕರ ಜೀವನಶೈಲಿ ಮತ್ತು ಕ್ಷೇಮ ಅನ್ವೇಷಣೆಗಳನ್ನು ಅಳವಡಿಸಿಕೊಳ್ಳಲು ನಾವು ಮಹಿಳೆಯರನ್ನು ಪ್ರೋತ್ಸಾಹಿಸುತ್ತೇವೆ.ಮಹಿಳೆಯರಿಗೆ ದೈಹಿಕವಾಗಿ, ಭಾವನಾತ್ಮಕವಾಗಿ ಮತ್ತು ವೃತ್ತಿಪರವಾಗಿ ಅಭಿವೃದ್ಧಿ ಹೊಂದುವ ವಾತಾವರಣವನ್ನು ಬೆಳೆಸುವ ಮೂಲಕ,ಅಂತರ್ಗತ ಯೋಗಕ್ಷೇಮದ ಕಡೆಗೆ ಧನಾತ್ಮಕ ಬದಲಾವಣೆಯನ್ನು ವೇಗವರ್ಧನೆ ಮಾಡುವ ಗುರಿಯನ್ನು ಆಮ್ವೇ ಹೊಂದಿದೆ. ಮಹಿಳೆಯರುತಮ್ಮ ಆರೋಗ್ಯ ಗುರಿಗಳನ್ನು ಅನುಸರಿಸುವಲ್ಲಿ ಮುಂದಾಳತ್ವ ವಹಿಸುವುದನ್ನು ವೀಕ್ಷಿಸಿದಲ್ಲಿ ಇದು ನಿಜವಾಗಿಯೂ ಸ್ಫೂರ್ತಿದಾಯಕವಾಗಿದೆ. ಆಮ್ವೇ ವ್ಯಾಪಾರದ ಮಾಲೀಕರಲ್ಲಿ 60% ಕ್ಕಿಂತ ಹೆಚ್ಚು ಮಹಿಳೆಯರಾಗಿರುವುದರಿಂದ, ಆರೋಗ್ಯ ಮತ್ತು ಯೋಗಕ್ಷೇಮವನ್ನು ಉತ್ತೇಜಿಸುವನಮ್ಮ ಬದ್ಧತೆಯನ್ನು ಇದು ಸ್ಪಷ್ಟಪಡಿಸುತ್ತದೆ. ಊಜಡಿಊಜಚಿಟಣಊಈಡಿಣ ಅಭಿಯಾನದ ಅಡಿಯಲ್ಲಿ ಇದು ಪ್ರಬಲ ಉದಾಹರಣೆಯಾಗಿದೆ. ಅವರಸಮೃದ್ಧಿ ಮತ್ತು ಯೋಗಕ್ಷೇಮವು ಎಲ್ಲರಿಗೂ ಹೆಚ್ಚು ಒಳಗೊಳ್ಳುವ, ಭರವಸೆಯ ಮತ್ತು ಆರೋಗ್ಯಕರ ಭವಿಷ್ಯಕ್ಕಾಗಿ ದಾರಿಮಾಡಿಕೊಡುತ್ತದೆ.ದೇಶದ ದಕ್ಷಿಣ ಭಾಗದಲ್ಲಿ, ಆಮ್ವೇ ಇಂಡಿಯಾವು ಮಹಿಳೆಯರಿಗಾಗಿ ಸಮಗ್ರ ಯೋಗಕ್ಷೇಮದ ಮೇಲೆ ಕೇಂದ್ರೀಕರಿಸಿದ ಆನ್ಲೈನ್ ಮತ್ತುಆಫ್ಲೈನ್ ಮಧ್ಯಸ್ಥಿಕೆಗಳ ಸರಣಿಯನ್ನು ಆಯೋಜಿಸಿದೆ. ಇವುಗಳು 39;ಖಣಾರಿಜಡಿ ಖಊಇಡಿಂಜ39; ಬ್ಯಾನರ್ ಅಡಿಯಲ್ಲಿ ಪ್ಯಾನೆಲ್ ಚರ್ಚೆಗಳಸರಣಿಯನ್ನು ಒಳಗೊಂಡಿವೆ. ಅಡೆತಡೆಗಳನ್ನು ಮುರಿದು ಆರೋಗ್ಯ ಮತ್ತು ಯೋಗಕ್ಷೇಮವನ್ನು ಚಾಲನೆ ಮಾಡುವಲ್ಲಿ ಗಮನಾರ್ಹ ಗುರಿಯನ್ನುಸಾಧಿಸಿದ ಮಹಿಳಾ ಉದ್ಯಮಿಗಳ ಕಥೆಗಳನ್ನು ಎತ್ತಿ ತೋರಿಸುತ್ತದೆ, ಎಲ್ಲರಿಗೂ ಆರೋಗ್ಯಕರ ಭವಿಷ್ಯವನ್ನು ನಿರ್ಮಿಸುವ ಗುರಿಯನ್ನುಹೊಂದಿದೆ. ಈ ವಾಣಿಜ್ಯೋದ್ಯಮಿಗಳಿಗೆ ಆರೋಗ್ಯ ಮತ್ತು ಯೋಗಕ್ಷೇಮದ ಮಾತುಕತೆಯಲ್ಲಿ ಸಹಾಯ ಮಾಡುವ ಸಲುವಾಗಿ ಪ್ರಮುಖರಾದಪೌಷ್ಟಿಕತಜ್ಞರು ಸಹ ಚರ್ಚೆಯಲ್ಲಿ ಪಾಲುದಾರರಾಗಿದ್ದರು. ಫಿಟ್ನೆಸ್ ಅನ್ನು ಮುಂಚೂಣಿಯಲ್ಲಿಟ್ಟುಕೊಂಡು, ಆಯ್ದ ಮಾರುಕಟ್ಟೆಗಳಲ್ಲಿಎಲ್ಲಾ ಮಹಿಳಾ ಆರೋಗ್ಯ ರನ್ ಅನ್ನು ಆಯೋಜಿಸಲಾಗಿದೆ. ಆಮ್ವೇ ಇಂಡಿಯಾ ಪ್ರಬಲವಾದ ಭಾವನೆಯನ್ನು ಪ್ರತಿಧ್ವನಿಸಿತು,ಮಹತ್ವಾಕಾಂಕ್ಷಿ ಮಹಿಳೆಯರು ತಮ್ಮ ಆರೋಗ್ಯ ಪ್ರಯಾಣದಲ್ಲಿ ನಾಯಕತ್ವವನ್ನು ಅಳವಡಿಸಿಕೊಳ್ಳುವಂತೆ ಪ್ರೋತ್ಸಾಹಿಸಿತು.ಮಹಿಳೆಯರನ್ನು ಬೆಂಬಲಿಸುವ ಕಂಪನಿಯ ಬದ್ಧತೆಯು ಕೇವಲ ಪದಗಳನ್ನು ಮೀರಿರುವುದಲ್ಲದೆ ಅದರ ಮೂಲ ಮೌಲ್ಯಗಳಲ್ಲಿ ಬೇರೂರಿದೆ.

# ಅಂದಕ್ಕೆ ಮನೆಯಲ್ಲಿಯೇ ತಯಾರಿಸಿ ಟೋನರ್

### ಬ್ಯೂಟಿ ಟಿಪ್ಸ್



ಮುಖದ ಚರ್ಮವನ್ನು ಸರಿಯಾಗಿ ಆರೈಕೆ ಮಾಡಬೇಕು. ಇಲ್ಲವಾದರೆ ಮುಖದ ತ್ವಚೆಗೆ ಹಾನಿಯಾಗುತ್ತದೆ. ಇದರಿಂದ ಮುಖದ ಅಂದ ಕೆಡುತ್ತದೆ. ಹಾಗಾಗಿ ಸುಂದರವಾದ ಚರ್ಮವನ್ನು ಹೊಂದಲು ಮನೆಯಲ್ಲಿಯೇ ತಯಾರಿಸಿದ ಟೋನರ್ ಬಳಸಿ ನೋಡಿ. ಹಾಲನ್ನು ಬಹಳ ಹಿಂದಿನ ಕಾಲದಿಂದಲೂ ಟೋನರ್ ಆಗಿ ಬಳಸುತ್ತಾರೆ. ಹಾಲನ್ನು ಮುಖಕ್ಕೆ ಹಚ್ಚುವುದರಿಂದ ಚರ್ಮದಲ್ಲಿರುವ ಕಲ್ಮಶಗಳು ಹೊರಹೋಗುತ್ತವೆ. ಚರ್ಮ ಕ್ಲೀನ್ ಆಗುತ್ತದೆ. 2 ಚಮಚ ವಿನೆಗರ್ ಗೆ ನೀರು ಮತ್ತು ಪುದೀನಾ ಎಲೆಗಳನ್ನು ಬೆರೆಸಿ ಕೆಲವು ದಿನಗಳವರೆಗೆ ಇಟ್ಟು ಬಳಿಕ ಅದನ್ನು ಕಾಟನ್ ಪ್ಯಾಡ್ ನಲ್ಲಿ ಅದ್ದಿ ಮುಖಕ್ಕೆ ಹಚ್ಚಿ. ಇದು ಮುಖದ ಚರ್ಮದಲ್ಲಿರುವ ಬ್ಯಾಕ್ಟೀರಿಯಾಗಳನ್ನು ನಾಶ ಮಾಡುತ್ತದೆ. ಗ್ರೀನ್ ಟೀಯಲ್ಲಿ ಆಯಂಟಿ ಆಕ್ಸಿಡೆಂಟ್ ಗಳು ಹೆಚ್ಚಾಗಿದ್ದು, ಇದು ಕಲ್ಮಶಗಳನ್ನು ಹೊರಹಾಕಿ ಚರ್ಮದ ಕಾಂತಿಯನ್ನು ಹೆಚ್ಚಿಸುತ್ತದೆ. ಹಾಗಾಗಿ ಗ್ರೀನ್ ಟೀ ತಯಾರಿಸಿ ಇದು ತಣಿದ ಮೇಲೆ ಮುಖಕ್ಕೆ ಹಚ್ಚಿ.

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಗುರು ಹಿರಿಯರಲ್ಲಿ ಭಕ್ತಿ, ಉದ್ಯೋಗದಲ್ಲಿ ಪ್ರಗತಿ, ಕೋಪ ಜಾಸ್ತಿ, ತಾಳ್ಮೆ ಅಗತ್ಯ.

**ವೃಷಭ:** ಯತ್ನ ಕಾರ್ಯಗಳಲ್ಲಿ ಜಯ, ಶೀತಸಂಬಂಧ ರೋಗಗಳು, ಶತ್ರು ಭಾದೆ, ದಾಂಪತ್ಯದಲ್ಲಿ ಪ್ರೀತಿ, ಅನಗತ್ಯ ಖರ್ಚು.

**ಮಿಥುನ:** ಶರೀರದಲ್ಲಿ ತಳಮಳ, ವೈದ್ಯರ ಭೇಟಿ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ಮಾತಿನ ಚಕಮಕಿ, ಮನಕ್ಲೇಶ.

**ಕಟಕ:** ರಫ್ತು ವ್ಯಾಪಾರದಿಂದ ಲಾಭ, ವಾಹನ ಖರೀದಿ, ಕುಟುಂಬದಲ್ಲಿ ಪ್ರೀತಿ, ಆದಾಯಕ್ಕಿಂತ ಖರ್ಚು ಹೆಚ್ಚು.

**ಸಿಂಹ:** ಸಾಲದಿಂದ ಮುಕ್ತಿ, ಕಾರ್ಯಕ್ಷೇತ್ರದಲ್ಲಿ ಉತ್ತಮ ಗೌರವ, ಮಹಿಳೆಯರಿಗೆ ಗೌರವ, ದಾಂಪತ್ಯದಲ್ಲಿ ಪ್ರೀತಿ.

**ಕನ್ಯಾ:** ರೋಗಭಾದೆ, ಮಾನಸಿಕ ವ್ಯಥೆ, ಸ್ವಯಂಕೃತ ಅಪರಾಧ, ಶತ್ರು ಭಾದೆ, ರಾಜಕೀಯ ಕ್ಷೇತ್ರದಲ್ಲಿ ಮನ್ನಣೆ.

**ತುಲಾ:** ಮಾತೃವಿನ ಸಹಾಯ, ಅನಗತ್ಯ ವಿಷಯಗಳು ಚರ್ಚೆ ಬೇಡ, ಸ್ಥಳ ಬದಲಾವಣೆ, ಕೃಷಿಕರಿಗೆ ಅಧಿಕ ಲಾಭ.

**ವೃಶ್ಚಿಕ:** ನೂತನ ಪ್ರಯತ್ನದಿಂದ ಯಶಸ್ಸು, ದೃಷ್ಟಿ ದೋಷ, ವಾಹನ ರಿಪೇರಿ, ಆಪ್ತರ ಸಲಹೆ, ದುಷ್ಟ ಜನರಿಂದ ದೂರವಿರಿ.

**ಧನಸ್ಸು:** ಎಲ್ಲರ ಪ್ರೀತಿ ವಿಶ್ವಾಸ ಗಳಿಸುವಿರಿ, ಬಹು ಲಾಭ, ಮನಶಾಂತಿ, ಹಿರಿಯರ ಸಲಹೆಯಿಂದ ವ್ಯವಹಾರ ಸುಗಮ.

**ಮಕರ:** ಹಿರಿಯರ ಹಿತನುಡಿ, ವಾಸಗೃಹದಲ್ಲಿ ತೊಂದರೆ, ಅಶಾಂತಿ, ಸಂತಾನ ಪ್ರಾಪ್ತಿ, ಪ್ರಿಯ ಜನರ ಭೇಟಿ.

**ಕುಂಭ:** ಸ್ನೇಹಿತರಿಂದ ಬೆಂಬಲ, ಖರ್ಚಿನ ಬಗ್ಗೆ ನಿಯಂತ್ರಣವಿರಲಿ, ಗುರಿ ಸಾಧನೆ, ದೂರ ಪ್ರಯಾಣ.

**ಮೀನ:** ಯಾರನ್ನು ಹೆಚ್ಚಾಗಿ ನಂಬಬೇಡಿ, ಸ್ಥಗಿತಗೊಂಡ ಕೆಲಸಗಳಿಗೆ ಮರುಚಾಲನೆ, ಉನ್ನತ ವಹಿವಾಟುದಾರರಿಗೆ ಅಧಿಕ ಲಾಭ.

# ವಿಶ್ವ ಗ್ಲುಕೋಮಾ ದಿನ




ವಿಶ್ವ ಗ್ಲುಕೋಮಾ ದಿನವನ್ನು ಪ್ರಪಂಚದಾದ್ಯಂತ ಪ್ರತಿ ವರ್ಷ ಮಾರ್ಚ್ 12 ರಂದು ಆಚರಿಸಲಾಗುತ್ತದೆ. ಗ್ಲುಕೋಮಾ ಎಂದು ಕರೆಯಲ್ಪಡುವ ಕಣ್ಣಿನ ಕಾಯಿಲೆಗಳ ಗುಂಪಿನ ಬಗ್ಗೆ ಜಾಗೃತಿ ಮೂಡಿಸಲು ಇದು ಪ್ರಮುಖ ದಿನವಾಗಿದೆ. ಈ ದಿನವು ಈ ರೋಗದ ಬಗ್ಗೆ ಜಾಗೃತಿ ಮೂಡಿಸುವ ಒಂದು ವಾರದ ಭಾಗವಾಗಿದೆ ಮತ್ತು ಅದನ್ನು ಬೇಗನೆ ಹಿಡಿಯುವುದನ್ನು ಖಾತ್ರಿಪಡಿಸುತ್ತದೆ. ಗ್ಲುಕೋಮಾದ ಆರಂಭಿಕ ಪತ್ತೆಯು ಸರಿಯಾದ ಚಿಕಿತ್ಸೆಗಳೊಂದಿಗೆ ರೋಗವನ್ನು ನಿಲ್ಲಿಸುವ ಅಥವಾ ನಿಧಾನಗೊಳಿಸುವ ಸಾಧ್ಯತೆಗಳನ್ನು ಸುಧಾರಿಸುತ್ತದೆ. ಗ್ಲುಕೋಮಾದಿಂದ ಉಂಟಾದ ಕುರುಡುತನವನ್ನು ಬದಲಾಯಿಸಲಾಗದು, ಆದರೆ ಆರಂಭದಲ್ಲಿ ಸಿಕ್ಕಿಬಿದ್ದರೆ, ರೋಗಕ್ಕೆ ಚಿಕಿತ್ಸೆ ನೀಡಬಹುದು ಫಿವಿಶ್ವ ಗ್ಲುಕೋಮಾ ದಿನವನ್ನು ಪ್ರತಿ ವರ್ಷ ಮಾರ್ಚ್ 12 ರಂದು ಆಚರಿಸಲಾಗುತ್ತದೆ. ಜಾಗೃತಿ ಮೂಡಿಸಲು ಮತ್ತು ಗ್ಲುಕೋಮಾದಿಂದ ಉಂಟಾಗುವ ಕುರುಡುತನವನ್ನು ತೊಡೆದುಹಾಕಲು ಮೀಸಲಿಟ್ಟ ವಾರದ ಭಾಗವಾಗಿ ಈ ದಿನವನ್ನು ವಿಶ್ವಾದ್ಯಂತ ಆಚರಿಸಲಾಗುತ್ತದೆ.ಗ್ಲುಕೋಮಾ ಎಂಬುದು ಹಲವಾರು ಕಣ್ಣಿನ ಕಾಯಿಲೆಗಳ ಹೆಸರು, ಇದು ಆಪ್ಟಿಕ್ ನರವನ್ನು ಹಾನಿಗೊಳಿಸುವ ಮೂಲಕ ದೃಷ್ಟಿ ನಷ್ಟವನ್ನು ಉಂಟುಮಾಡಬಹುದು. ಸಾಮಾನ್ಯವಾಗಿ ರೋಗಗಳು ನಿಧಾನವಾಗಿ ಬೆಳವಣಿಗೆಯಾಗುತ್ತವೆ ಮತ್ತು ಯಾವುದೇ ನೋವನ್ನು ಉಂಟುಮಾಡುವುದಿಲ್ಲ, ಇದು ತುಂಬಾ ತಡವಾಗಿ ತನಕ ನಿರ್ಲಕ್ಷಿಸುವುದನ್ನು ಸುಲಭಗೊಳಿಸುತ್ತದೆ. ಗ್ಲುಕೋಮಾದಿಂದ ಉಂಟಾಗುವ ಕುರುಡುತನವನ್ನು ಬದಲಾಯಿಸಲಾಗುವುದಿಲ್ಲ. ಆದಾಗ್ಯೂ, ರೋಗವು ಆರಂಭಿಕ ಹಂತದಲ್ಲಿ ಕಂಡುಬಂದರೆ ಚಿಕಿತ್ಸೆ ನೀಡಬಹುದು. ಗ್ಲುಕೋಮಾದಿಂದ ಆಪ್ಟಿಕ್ ನರಕ್ಕೆ ಉಂಟಾಗುವ ಹಾನಿಯು ರೋಗದ ಪ್ರಗತಿಯನ್ನು ನಿಲ್ಲಿಸಲು ಅಥವಾ ಕನಿಷ್ಠ ಅದನ್ನು ನಿಧಾನಗೊಳಿಸಲು ಚಿಕಿತ್ಸೆ ನೀಡಬಹುದು. ಹಠಾತ್ ಆಕ್ರಮಣವನ್ನು ಹೊಂದಿರುವ ಗ್ಲುಕೋಮಾದ ಕೆಲವು ಕಾರಣಗಳಿವೆ, ಹೆಚ್ಚಿನ ಸಮಯ, ಈ ರೋಗಗಳು ಕ್ರಮೇಣ ಬೆಳವಣಿಗೆಯಾಗುತ್ತವೆ ಮತ್ತು ಕುರುಡುತನವನ್ನು ತಡೆಗಟ್ಟಲು ಸಮಯಕ್ಕೆ ಹಿಡಿಯಬಹುದು. ಗ್ಲುಕೋಮಾದ ಪ್ರಮುಖ ಕಾರಣವೆಂದರೆ ದ್ರವದ ಶೇಖರಣೆಯಾಗಿದ್ದು ಅದು ಕಣ್ಣಿನಲ್ಲಿ ಒತ್ತಡವನ್ನು ಹೆಚ್ಚಿಸುತ್ತದೆ. ಜಲೀಯ ಹಾಸ್ಯ – ಕಣ್ಣಿನಿಂದ ಉತ್ಪತ್ತಿಯಾಗುವ ನೈಸರ್ಗಿಕ ದ್ರವ – ಕಣ್ಣಿನಿಂದ ನೈಸರ್ಗಿಕವಾಗಿ ಹೊರಬರಲು ವಿಫಲವಾದಾಗ ಗ್ಲುಕೋಮಾ ಕಾಯಿಲೆ ಉಂಟಾಗುತ್ತದೆ. ಸಾಮಾನ್ಯವಾಗಿ, ದ್ರವವು ಕಣ್ಣಿನಿಂದ ಹೊರಬರುತ್ತದೆ ಮತ್ತು ತಾಜಾ ಜಲೀಯ ಹಾಸ್ಯದಿಂದ ಬದಲಾಯಿಸಲ್ಪಡುತ್ತದೆ, ಇದು ಕಣ್ಣು ನಿರಂತರವಾಗಿ ಉತ್ಪಾದಿಸುತ್ತದೆ. ಹೇಗಾದರೂ, ಒಳಚರಂಡಿ ಕೋನದಲ್ಲಿ ಏನಾದರೂ ತಪ್ಪಾಗಿದ್ದರೆ, ನಂತರ ದ್ರವವನ್ನು ಕಣ್ಣಿನಲ್ಲಿ ಉಳಿಸಿಕೊಳ್ಳಲಾಗುತ್ತದೆ ಮತ್ತು ಕಾಲಾನಂತರದಲ್ಲಿ, ದ್ರವದ ಸಂಗ್ರಹವು ಆಪ್ಟಿಕ್ ನರದ ಮೇಲೆ ಒತ್ತಡವನ್ನು ಹೆಚ್ಚಿಸುತ್ತದೆ.

# ದೇಶ–ವಿದೇಶ



## ಜನರಿಗೂ ಅರ್ಥವಾಗುವ ಸರಳ ಭಾಷೆಯಲ್ಲಿ ತೀರ್ಪು ಬರೆಯಲು ಜಡ್ಜ್‌ಗಳಿಗೆ ಸಿಜೆಐ ಸಲಹೆ



**ಜೈಪುರ್:** ಸಾಮಾನ್ಯ ಜನರಿಗೂ ಅರ್ಥವಾಗುವ ರೀತಿಯಲ್ಲಿ ಸರಳವಾದ ಭಾಷೆಯಲ್ಲಿ ತೀರ್ಪು ಬರೆಯುವಂತೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ನ್ಯಾಯಾಧೀಶರಿಗೆ ಕಿವಿಮಾತು ಹೇಳಿದ್ದಾರೆ.

ರಾಜಸ್ಥಾನದ ಬಿಕಾನೇರ್ ನಲ್ಲಿ ಶನಿವಾರ ನಡೆದ ನಮ್ಮ ಸಂವಿಧಾನ ನಮ್ಮ ಗೌರವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಿಜೆಐ ಡಿ.ವೈ. ಚಂದ್ರಚೂಡ್ ಅವರು, ನ್ಯಾಯಾಲಯದ ತೀರ್ಪುಗಳು ಪ್ರಾದೇಶಿಕ ಭಾಷೆಯಲ್ಲಿಯೂ ಲಭ್ಯವಾಗಿಸುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ಕ್ರಮ ಕೈಗೊಂಡಿದೆ. ಇದರಿಂದಾಗಿ ಅದೆಷ್ಟೋ ತೀರ್ಪುಗಳು ಪ್ರಾದೇಶಿಕ ಭಾಷೆಗಳಲ್ಲಿಯೂ ಲಭ್ಯವಿದೆ. ಆದರೆ ಸಂಕೀರ್ಣತೆಯಿಂದ ಕೂಡಿದ ಕಾನೂನು ಭಾಷೆ ಎಲ್ಲರಿಗೂ ಅರ್ಥವಾಗುವುದಿಲ್ಲ. ಜನಸಾಮಾನ್ಯರಿಗೂ ಅರ್ಥವಾಗುವ ರೀತಿಯಲ್ಲಿ ಸರಳವಾದ ಭಾಷೆಯಲ್ಲಿ ಜಡ್ಜ್‌ಗಳು ತೀರ್ಪು ಬರೆಯಬೇಕು ಎಂದು ಹೇಳಿದ್ದಾರೆ.

ದೇಶದ ಏಕತೆ ಮತ್ತು ಪ್ರಗತಿಯಲ್ಲಿ ಸಂವಿಧಾನದ ಪಾತ್ರ ಮಹತ್ವದ್ದು. ನಾಗರೀಕರ ಹಕ್ಕುಗಳು ಮತ್ತು ಕರ್ತವ್ಯಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ಕೈಗೊಂಡ ನಮ್ಮ ಸಂವಿಧಾನ ನಮ್ಮ ಗೌರವ ಅಭಿಯಾನ ಪೂರಕವಾಗಿದೆ ಎಂದು ಹೇಳಿದ್ದಾರೆ.

## ಇಮ್ರಾನ್ ಪಕ್ಷದ ಅಯೂಬ್ ವಿರೋಧ ಪಕ್ಷದ ನಾಯಕ



**ಇಸ್ಲಮಾಬಾದ್:** ಮಾಜಿ ಪ್ರಧಾನಿ ಇಮ್ರಾನ್ಖಾನ್ ಅವರ ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್(ಪಿಟಿಐ) ಪಕ್ಷದ ಮುಖಂಡ ಒಮರ್ ಅಯೂಬ್‌ರನ್ನು ಪಾಕಿಸ್ತಾನದ ರಾಷ್ಟ್ರೀಯ ಅಸೆಂಬ್ಲಿಯಲ್ಲಿ ವಿರೋಧ ಪಕ್ಷದ ನಾಯಕರನ್ನಾಗಿ ಪಿಟಿಐ ಮತ್ತು ಎಸ್‌ಐಸಿ ಪಕ್ಷಗಳು ಜಂಟಿಯಾಗಿ ನಾಮನಿರ್ದೇಶನ ಮಾಡಿದೆ.

ಫೆಬ್ರವರಿ 8ರಂದು ನಡೆದಿದ್ದ ಸಾರ್ವತ್ರಿಕ ಚುನಾವಣೆಯಲ್ಲಿ ಪಕ್ಷೇತರರಾಗಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದ ಸುಮಾರು 90ರಷ್ಟು ಪಿಟಿಐ ಅಭ್ಯರ್ಥಿಗಳು ಎಸ್‌ಐಸಿ ಪಕ್ಷವನ್ನು ಸೇರಿದ್ದರು. ಅಯೂಬ್ ಈ ಎರಡೂ ಪಕ್ಷಗಳ ಜಂಟಿ ಅಭ್ಯರ್ಥಿಯಾಗಿ ಪ್ರಧಾನಮಂತ್ರಿ ಚುನಾವಣೆಯಲ್ಲಿ ಪಿಎಂಎಲ್-ಎನ್ ಅಭ್ಯರ್ಥಿ ಶೆಹಬಾಝ್ ಷರೀಫ್ ವಿರುದ್ಧ ಸ್ಪರ್ಧಿಸಿ ಸೋಲುಂಡಿದ್ದರು.

## ಲಾಲು ಆಪ್ತ ಸುಭಾಷ್ ಯಾದವ್‌ಗೆ ಮಾ. 22ರವರೆಗೆ ನ್ಯಾಯಾಂಗ ಬಂಧನ

**ಬಿಹಾರ:** ಬಿಹಾರ ಮಾಜಿ ಸಿಎಂ ಲಾಲು ಪ್ರಸಾದ್ ಯಾದವ್ ಅವರ ಆಪ್ತ ಸುಭಾಷ್ ಯಾದವ್ ಅವರನ್ನು ಮಾರ್ಚ್ 22 ರವರೆಗೆ ಪಾಟ್ನಾ ನ್ಯಾಯಾಲಯ ನ್ಯಾಯಾಂಗ ಬಂಧನಕ್ಕೆ ಕಳುಹಿಸಿದೆ. ಲಾಲು ಪ್ರಸಾದ್ ಯಾದವ್ ಅವರ ಆಪ್ತ ಸಹಾಯಕನಿಗೆ ಸಂಬಂಧಿಸಿದ ಅನೇಕ ಸ್ಥಳಗಳಲ್ಲಿ ದಾಳಿ ನಡೆಸಿದ ಇಡಿ ಅಧಿಕಾರಿಗಳು ವಿಚಾರಣೆ ನಡೆಸಿದ ನಂತರ ಯಾದವ್ ಅವರನ್ನು ಬಂಧಿಸಿದ್ದರು. ಶೋಧದ ವೇಳೆ ಸುಭಾಷ್ ಯಾದವ್ ಅವರನ್ನು ಬಂಧಿಸುವ ಮುನ್ನ ಇಡಿ ಅಧಿಕಾರಿಗಳು ಮರಳು ಗಣಿಗಾರಿಕೆ ಮತ್ತು ಇತರ ಹಣಕಾಸು ವಹಿವಾಟುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಪತ್ತೆ ಮಾಡಿದ್ದಾರೆ. ಶೋಧ ಕಾರ್ಯಾಚರಣೆ ವೇಳೆ ಕೇಂದ್ರ ಸಂಸ್ಥೆಯು ಸುಮಾರು 2.37 ಕೋಟಿ ರೂಪಾಯಿ ಮೌಲ್ಯದ ನಗದು ಪತ್ತೆಯಾಗಿದೆ. ಸುಭಾಷ್ ಅವರು ಬಿಹಾರದಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಸುತ್ತಿದ್ದಾರೆ ಮತ್ತು ಪಾಟ್ನಾದಲ್ಲಿ ಪ್ರಮುಖ ಮರಳು ವ್ಯಾಪಾರಿಯಾಗಿದ್ದಾರೆ. ಅವರು ಬ್ರಾಡ್ಸನ್ ಕನ್ಸ್ಟ್ರಕ್ಷನ್ ಪ್ರೈವೇಟ್ ಲಿಮಿಟೆಡ್ನ ನಿರ್ದೇಶಕರೂ ಆಗಿದ್ದಾರೆ.



## CAAಗೆ ಅಮೆರಿಕದ ಖ್ಯಾತ ನಟಿ ಮೇರಿ ಮಿಲ್ಬೆನ್ ಅಭಿನಂದನೆ



**ನ್ಯೂಯಾರ್ಕ್:** ಪೌರತ್ವ ತಿದ್ದುಪಡಿ ಕಾಯ್ದೆಯನ್ನು ಜಾರಿಗೆ ತಂದ ಕೇಂದ್ರ ಸರಕಾರದ ವಿರುದ್ಧ ಕಾಂಗ್ರೆಸ್ ಸೇರಿ ವಿಪಕ್ಷಗಳು ಟೀಕಿಸುತ್ತಿರುವ ವೇಳೆಯಲ್ಲಿ ಆಫ್ರಿಕನ್-ಅಮೆರಿಕನ್ ನಟಿ ಮತ್ತು ಗಾಯಕಿ ಮೇರಿ ಮಿಲ್ಬೆನ್ ಪ್ರಧಾನಿ ಮೋದಿ ಅವರನ್ನು ಅಭಿನಂದಿಸಿದ್ದಾರೆ. ಎಕ್ಸ್ ಪೋಸ್ಟ್ ನಲ್ಲಿ 'ಇದು ಶಾಂತಿಯ ಕಡೆಗೆ ಒಂದು ಮಾರ್ಗವಾಗಿದೆ. ಇದು ಪ್ರಜಾಪ್ರಭುತ್ವದ ನಿಜವಾದ ಕಾರ್ಯವಾಗಿದೆ. ಕ್ರಿಶ್ಚಿಯನ್ ಧರ್ಮದಲ್ಲಿ ನಂಬಿಕೆಯುಳ್ಳ ಮಹಿಳೆಯಾಗಿ, ಧಾರ್ಮಿಕ ಸ್ವಾತಂತ್ರ್ಯಕ್ಕಾಗಿ ಜಾಗತಿಕ ವಕೀಲರಾಗಿ, ನಾನು ಮೋದಿಯವರನ್ನು ಶ್ಲಾಘಿಸುತ್ತೇನೆ. ಮೋದಿ ನೇತೃತ್ವದ ಸರ್ಕಾರವು ಇಂದು ಪಾಕಿಸ್ಥಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ಥಾನದಿಂದ ಕಿರುಕುಳಕ್ಕೊಳಗಾದ ಮುಸ್ಲಿಮೇತರ ವಲಸಿಗರು, ಕ್ರಿಶ್ಚಿಯನ್ನರು, ಹಿಂದೂಗಳು, ಸಿಖ್ಖರು, ಜೈನರು, ಬೌದ್ಧರು ಮತ್ತು ಪಾರ್ಸಿಗಳಿಗೆ ಭಾರತೀಯ ರಾಷ್ಟ್ರೀಯತೆಯನ್ನು ನೀಡುವ ಪೌರತ್ವ (ತಿದ್ದುಪಡಿ) ಕಾಯ್ದೆಯ ಅನುಷ್ಠಾನವನ್ನು ಇಂದು ಘೋಷಿಸಿತು.ನಿಮ್ಮ ಸಹಾನುಭೂತಿಯ ನಾಯಕತ್ವಕ್ಕಾಗಿ ಮತ್ತು ಮುಖ್ಯವಾಗಿ ಕಿರುಕುಳಕ್ಕೊಳಗಾದವರನ್ನು ಸ್ವಾಗತಿಸುವಲ್ಲಿ ಧಾರ್ಮಿಕ ಸ್ವಾತಂತ್ರ್ಯವನ್ನು ಎತ್ತಿಹಿಡಿದುದಕ್ಕಾಗಿ ನರೇಂದ್ರ ಮೋದಿ, ಅಮಿತ್ ಶಾ ಮತ್ತು ಭಾರತ ಸರ್ಕಾರಕ್ಕೆ ಧನ್ಯವಾದಗಳು ಎಂದು ಪೋಸ್ಟ್ ಮಾಡಿ ಗಮನ ಸೆಳೆದಿದ್ದಾರೆ.



## ಕೇಂದ್ರ ಗೃಹ ಸಚಿವ ಮತ್ತು ಸಹಕಾರ ಸಚಿವ ಅಮಿತ್ ಶಾ ಅನಿಸಿಕೆ

## ಡೇಟಾಬೇಸ್ ಮೂಲಕ ಸಹಕಾರಿ ಕ್ಷೇತ್ರದ ವಿಸ್ತರಣೆ

**ದೆಹಲಿ:** ಕೇಂದ್ರ ಗೃಹ ಸಚಿವ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ರಾಷ್ಟ್ರೀಯ ಡೇಟಾಬೇಸ್‌ಅನ್ನು ಉದ್ಘಾಟಿಸಿದರು. ಸಹಕಾರಿ ಆಂದೋಲನದೊಂದಿಗೆ ಸಂಬಂಧ ಹೊಂದಿರುವ ಶಾ, 'ಸಹಕಾರಿ ಕ್ಷೇತ್ರದ ವಿಸ್ತರಣೆ, ಅಭಿವೃದ್ಧಿ ಮತ್ತು ವಿತರಣೆಯನ್ನು ಡೇಟಾಬೇಸ್ ಮೂಲಕ ಖಚಿತಪಡಿಸಿಕೊಳ್ಳಲಾಗುವುದು' ಎಂದು ಹೇಳಿದರು.

ಸ್ವಾತಂತ್ರ್ಯ ಬಂದು ದಶಕಗಳೇ ಕಳೆದರೂ ಪ್ರತ್ಯೇಕ ಸಹಕಾರ ಸಚಿವಾಲಯದ ರಚನೆಯ ಬೇಡಿಕೆಯಡೆಗೆ ಯಾವ ಸರಕಾರವೂ ಗಮನ ಹರಿಸಲಿಲ್ಲ. ಇದರಿಂದ ಸಹಕಾರಿ ಕ್ಷೇತ್ರದ ಸ್ಥಿತಿ ಹದಗೆಡುತ್ತಲಿತ್ತು. 2021 ರಲ್ಲಿ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ದೂರದರ್ಶನದ ಭಾಷಣದಲ್ಲಿ, ಪ್ರತ್ಯೇಕ ಸಹಕಾರ ಸಚಿವಾಲಯವನ್ನು ಸ್ಥಾಪಿಸುವ ಕಾರ್ಯಕ್ಕೆ ಮುನ್ನುಡಿ ಬರೆದು, ಅದರ ಹೊಣೆಯನ್ನು ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿಯ ವರಿಷ್ಠ ನಾಯಕ ಶ್ರೀ ಅಮಿತ್ ಶಾರವರಿಗೆ ವಹಿಸಿದರು. ತಮ್ಮ ಆರಂಭದ ದಿನಗಳಿಂದಲೂ ಸಹಕಾರಿ ಕ್ಷೇತ್ರದೊಂದಿಗೆ ಒಡನಾಟ ಹೊಂದಿರುವ ಶಾ, ಕೆಲವೇ ವರ್ಷಗಳಲ್ಲಿ ಸರ್ವತೋಮುಖ ಪ್ರಯತ್ನಗಳ ಮೂಲಕ ಸಹಕಾರಿ ಸಂಘಗಳನ್ನು ಸಬಲೀಕರಣಗೊಳಿಸುವಲ್ಲಿ ಯಶಸ್ವಿಯಾದರು.'

ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವ ಮತ್ತು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರ ನುರಿತ ಮಾರ್ಗದರ್ಶನದಲ್ಲಿ, ಒಂದು ಕಾಲದಲ್ಲಿ ತೆವಳುತ್ತಾ ಸಾಗುತ್ತಿದ್ದ ಸಹಕಾರಿ ಸಂಘಗಳು ಇಂದು ಚೇತನದೊಂದಿಗೆ ಎದ್ದು ನಿಂತಿವೆ. ದೇಶವು ಈಗ ಕೇಂದ್ರೀಕೃತವಾಗಿದೆ, ಹಾಗೇ ಗಣಕೀಕರಣಗೊಂಡಿದೆ. ದೇಶಾದ್ಯಂತ ಪ್ರಾಥಮಿಕ ಕೃಷಿ ಪತ್ತಿನ ಸಂಘಗಳನ್ನು ಬಹುಕ್ರಿಯಾತ್ಮಕವಾಗಿ ಮಾಡಲಾಗುತ್ತಿದೆ. 'ಅಂತ್ಯೋದಯ' (ಉನ್ನತಿ) ರಾಜಕೀಯಕ್ಕೆ ಹೆಸರುವಾಸಿಯಾಗಿರುವ ಅಮಿತ್ ಶಾ ಅವರು 2027 ರ ವೇಳೆಗೆ ದೇಶದ ಪ್ರತಿ ಪಂಚಾಯತ್ನಲ್ಲಿ ಒಂದು ಕಂಅಖ ಇರಲಿದೆ ಎಂದು ಪದೇ ಪದೇ ಪ್ರತಿಪಾದಿಸುತ್ತಾ ಬಂದಿದ್ದಾರೆ. ಈ ಹೇಳಿಕೆಯು ನಿಜವಾಗುವ ಸಮಯ ಬಂದಿದೆ, ಕಾರಣ, ರಾಷ್ಟ್ರೀಯ ದತ್ತಸಂಚಯವನ್ನು (ಡೇಟಾಬೇಸ್) ರಚಿಸಲಾಗಿದೆ, ಇದು ದೇಶದ ಸಹಕಾರ ಸಂಘಗಳ ಸಂಖ್ಯೆಯಲ್ಲಿನ ಅಂತರವನ್ನು ಗುರುತಿಸಲು ಸಹಾಯ ಮಾಡುತ್ತದೆ ಮತ್ತು ಸಹಕಾರಿಗಳ ವಿಸ್ತರಣೆಗೆ ಸಹಾಯಕವಾಗಲಿದೆ. ರಾಷ್ಟ್ರೀಯ ಡೇಟಾಬೇಸ್ ಮೂಲಕ, ಸಹಕಾರಿಗಳಿಗೆ ಸಂಬಂಧಿಸಿದ ಮಾಹಿತಿಯು ಒಂದು ಕ್ಲಿಕ್ನಲ್ಲಿ ಲಭ್ಯವಾಗುತ್ತದೆ. ರಾಷ್ಟ್ರೀಯ ಡೇಟಾಬೇಸ್ ನೀತಿ ನಿರೂಪಕರು, ಸಂಶೋಧಕರು ಮತ್ತು ಮಧ್ಯಸ್ಥಗಾರರಿಗೆ ಅಮೂಲ್ಯವಾದ ಸಂಪನ್ಮೂಲವಾಗಿದ್ದು, ಇದು ಅಭಿವೃದ್ಧಿಯ ದಿಕ್ಕಿನೆಡೆಗೆ ದಿಕ್ಸೂಚಿಯಾಗಿ ಕಾರ್ಯನಿರ್ವಹಿಸುತ್ತದೆ. ಈ ಡೇಟಾಬೇಸ್ ಮಾಹಿತಿಯನ್ನು ಸುಧಾರಿತ ತಂತ್ರಜ್ಞಾನದೊಂದಿಗೆ ಅಭಿವೃದ್ಧಿಪಡಿಸಲಾಗಿದೆ ಮತ್ತು ಭಾರತದಲ್ಲಿನ ಸಹಕಾರ ಚಟುವಟಿಕೆಗಳ ಪ್ರತಿಯೊಂದು ಅಂಶಗಳ ಮಾಹಿತಿಯನ್ನು ಹೊಂದಿದೆ. ಡೇಟಾಬೇಸ್ ಪೋರ್ಟಲ್ ಮೂಲಕ, ಸಣ್ಣ ಸಹಕಾರಿ ಸಂಸ್ಥೆಗಳು ತಮ್ಮ ವಿಸ್ತರಣೆಗೆ ಮಾರ್ಗದರ್ಶನವನ್ನು ಪಡೆಯಬಹುದು. ಡೇಟಾಬೇಸ್ PACS ನಿಂದ APEX ಗೆ, ಹಳ್ಳಿಯಿಂದ ನಗರಕ್ಕೆ, ಮಂಡಿಯಿಂದ ಜಾಗತಿಕ ಮಾರುಕಟ್ಟೆಗೆ ಮತ್ತು ರಾಜ್ಯದಿಂದ ಅಂತರರಾಷ್ಟ್ರೀಯ ಡೇಟಾಬೇಸ್ಗಳಿಗೆ ಮಾಹಿತಿಯನ್ನು ಸಂಪರ್ಕಿಸುವ ಸಾಮರ್ಥ್ಯವನ್ನು ಹೊಂದಿದೆ.

ಭೌಗೋಳಿಕ ಅಸಮತೋಲನ, ವಲಯವಾರು ಅಸಮತೋಲನ, ಸಮುದಾಯ ಅಸಮತೋಲನ ಮತ್ತು ಕ್ರಿಯಾತ್ಮಕ ಅಸಮತೋಲನ - ಈ ಎಲ್ಲಾ ಸಮಸ್ಯೆಗಳಿಗೆ ಉಪಕರಣಗಳನ್ನು ಬಳಸಿಕೊಂಡು ಈ ಡೇಟಾಬೇಸ್ನಲ್ಲಿ ಸೂಕ್ಷ್ಮವಾಗಿ ಪರಿಹಾರ ತಿಳಿಸಲಾಗಿದೆ. ಸಹಕಾರಿ ಕ್ಷೇತ್ರದ ಉತ್ಕರ್ಷವನ್ನು ನೋಡಿದರೆ, ಮೋದಿಯವರ ಸಹಕಾರಿ ಸಂಸ್ಥೆಗಳು ಡಿಜಿಟಲ್ ಮೂಲಕ ಏಳಿಗೆ ಮತ್ತು ಅಭಿವೃದ್ಧಿ ತಂದು, ಡೇಟಾಬೇಸ್ ಮೂಲಕ ಲಕ್ಷ್ಯವನ್ನು ಸಾಧಿಸಲಿವೆ. ಪ್ರಸ್ತುತವಾಗಿ, 8 ಲಕ್ಷಕ್ಕೂ ಹೆಚ್ಚು ಸಹಕಾರಿ ಸಂಘಗಳು ನೋಂದಾಯಿಸಲ್ಪಟ್ಟಿವೆ ಮತ್ತು 30 ಕೋಟಿಗೂ ಹೆಚ್ಚು ನಾಗರಿಕರು ಈ ಸಂಘಗಳೊಂದಿಗೆ ಸಂಪರ್ಕ ಹೊಂದಿದ್ದಾರೆ.

ನವ ಭಾರತ ನಿರ್ಮಾಣದಲ್ಲಿ ತೊಡಗಿರುವ ಮೋದಿಯವರು ಮತ್ತು ಅಮಿತ್ ಶಾ ಭಾರತದ ರಾಜಕೀಯಕ್ಕೆ ನವ ದಿಶೆಯನ್ನು ನೀಡಿದ್ದಾರೆ. ಶಾ ಅವರು ದಿಟ್ಟ ನಿರ್ಧಾರಗಳನ್ನು ತೆಗೆದುಕೊಳ್ಳುವುದಕ್ಕೆ ಮತ್ತು ಅವುಗಳನ್ನು ಕಾರ್ಯರೂಪಕ್ಕೆ ತರುವುದಕ್ಕೆ ಹೆಸರುವಾಸಿಯಾಗಿದ್ದಾರೆ. ಈ ಕಾರಣದಿಂದಲೇ ಸಹಕಾರ ಸಚಿವಾಲಯವನ್ನು ಸ್ಥಾಪಿಸಲಾಯಿತು, ತತ್ಪರಿಣಾಮವಾಗಿ ಇಂದು ಸಹಕಾರಿ ಕ್ಷೇತ್ರವೂ ಅಭಿವೃದ್ಧಿ ಹೊಸ ಹೊಸ ಆಯಾಮಗಳನ್ನು ಮುಟ್ಟುತ್ತಿದೆ.

## ಅಮೆರಿಕದಲ್ಲಿ ಖಾಸಗಿ ಜೆಟ್ ಪತನ ; 5 ಸಾವು

**ನ್ಯೂಯಾರ್ಕ್:** ಅಮೆರಿಕದ ವರ್ಜೀನಿಯಾ ನಗರದ ಅರಣ್ಯಪ್ರದೇಶದಲ್ಲಿ ರವಿವಾರ ಸಂಜೆ ಖಾಸಗಿ ಜೆಟ್ ವಿಮಾನವೊಂದು ಪತನಗೊಂಡಿದ್ದು ವಿಮಾನದಲ್ಲಿದ್ದ ಎಲ್ಲಾ 5 ಮಂದಿಯೂ ಸಾವನ್ನಪ್ಪಿರುವುದಾಗಿ ವರದಿಯಾಗಿದೆ. ಅವಳಿ ಇಂಜಿನ್ನ ಲಘು ವಿಮಾನ ಅರ್ಕಾನ್ಸಾಸ್ ಪ್ರದೇಶದ ಹಾಟ್ಸ್ಪ್ರಿಂಗ್ಸ್ ನಗರದ ವಿಮಾನ ನಿಲ್ದಾಣದ ಬಳಿ ಅರಣ್ಯ ಪ್ರದೇಶದಲ್ಲಿ ಅಪಘಾತಕ್ಕೀಡಾಗಿ ಬೆಂಕಿಯಲ್ಲಿ ಸುಟ್ಟುಹೋಗಿದೆ. ವಿಮಾನದ ಪೈಲಟ್, ಒಂದು ಮಗು ಹಾಗೂ ಇತರ ಮೂವರು ಸಾವನ್ನಪ್ಪಿದ್ದಾರೆ. ಬೆಟ್ಟದ ತಪ್ಪಲಿನಲ್ಲಿ ಅಪಘಾತ ನಡೆದಿದ್ದು ತುರ್ತು ಕಾರ್ಯಪಡೆ ಹರಸಾಹಸ ಪಟ್ಟು ಆ ಪ್ರದೇಶವನ್ನು ತಲುಪಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ದುರಂತದ ಬಳಿಕ ವಿಮಾನ ನಿಲ್ದಾಣವನ್ನು ಮುಚ್ಚಲಾಗಿದ್ದು ದುರಂತದ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.



## ಆಸ್ಟ್ರೇಲಿಯಾದಲ್ಲಿ ಹೈದರಾಬಾದ್ ಮಹಿಳೆಯ ಶವ ಪತ್ತೆ ಪತಿಯಿಂದಲೇ ಕೊಲೆ ಶಂಕೆ

**ಹೈದರಾಬಾದ್/ಕ್ಯಾನ್ಬೆರಾ:** ಆಸ್ಟ್ರೇಲಿಯಾದ ವಿಕ್ಟೋರಿಯಾದ ಬಕ್ಲಿಯಲ್ಲಿ ರಸ್ತೆ ಬದಿಯ ಡಬ್ಬಿಯೊಂದರಲ್ಲಿ ಹೈದರಾಬಾದ್ ಮೂಲದ ಮಹಿಳೆಯೊಬ್ಬಳ ಶವ ಪತ್ತೆಯಾಗಿದೆ. ಮೃತ ಮಹಿಳೆಯನ್ನು ಚೈತನ್ಯ ಮದಗಣಿ ಅಲಿಯಾಸ್ ಶ್ವೇತಾ ಎಂದು ಗುರುತಿಸಲಾಗಿದೆ. ಮಹಿಳೆ ಪತಿ ಹಾಗೂ ಮಗುವಿನೊಂದಿಗೆ ವಾಸವಾಗಿದ್ದರು. ಇದೀಗ ಪತಿಯೇ ಮಹಿಳೆಯನ್ನು ಹತ್ಯೆಗೈದಿರುವ ಬಗ್ಗೆ ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಶ್ವೇತಾಳನ್ನು ಹತ್ಯೆಗೈದ ಬಳಿಕ ಪುತ್ರನೊಂದಿಗೆ ಹೈದರಾಬಾದ್‌ಗೆ ಬಂದಿರಬಹುದು ಎಂದು ವರದಿಯಾಗಿದೆ. ಮಹಿಳೆಯ ಪೋಷಕರ ಕೋರಿಕೆಯ ಮೇರೆಗೆ ಆಕೆಯ ಮೃತದೇಹವನ್ನು ಹೈದರಾಬಾದ್‌ಗೆ ತರಲು ವಿದೇಶಾಂಗ ಕಚೇರಿಗೆ ಸ್ಥಳೀಯ ಶಾಸಕರು ಪತ್ರ ಬರೆದಿದ್ದಾರೆ. ಅಲ್ಲದೇ ಮಹಿಳೆಯ ಪೋಷಕರು ನೀಡಿದ ಮಾಹಿತಿಯ ಪ್ರಕಾರ, ಅವರ ಅಳಿಯನೇ ತಮ್ಮ ಮಗಳನ್ನು ಕೊಂದಿರುವುದಾಗಿ ಒಪ್ಪಿಕೊಂಡಿದ್ದಾನೆ ಎಂದು ಅವರು ತಿಳಿಸಿದ್ದಾರೆ. ಮಹಿಳೆಯ ಹತ್ಯೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ವಿಕ್ಟೋರಿಯಾ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.



## ಅಲ್ ಖೈದಾ ಮುಖ್ಯಸ ಖಾಲಿದ್ ಅಲ್-ಬತರ್ಫಿ ನಿಗೂಢ ಸಾವು

**ಸನಾ:** ಅಲ್ ಖೈದಾ ಮುಖ್ಯಸ್ಥ ಖಾಲಿದ್ ಅಲ್-ಬತರ್ಫಿ ಮೃತಪಟ್ಟಿದ್ದಾನೆ ಎಂದು ಉಗ್ರಗಾಮಿ ಗುಂಪು ಭಾನುವಾರ ತಡರಾತ್ರಿ ಘೋಷಿಸಿದೆ. ಸ್ಥಾಪಕ ಒಸಾಮಾ ಬಿನ್ ಲಾಡೆನ್ ಹತ್ಯೆಯ ನಂತರವೂ ಕಾರ್ಯನಿರ್ವಹಿಸುತ್ತಿರುವ ಉಗ್ರಗಾಮಿ ಗುಂಪಿನ ಅತ್ಯಂತ ಅಪಾಯಕಾರಿ ಶಾಖೆ ಎಂದು ಹೇಳಲಾದ ಅರೇಬಿಯನ್ ಪರ್ಯಾಯ ದ್ವೀಪದಲ್ಲಿ ಅಲ್-ಖೈದಾ ಗುಂಪನ್ನು ಮುನ್ನಡೆಸಿದ್ದಕ್ಕಾಗಿ ಖಾಲಿದ್ ಅಲ್-ಬತರ್ಫಿ ಅವರ ತಲೆಗೆ ಯುಎಸ್ ಸರ್ಕಾರವು 5 ಮಿಲಿಯನ್ ಡಾಲರ್ ಬಹುಮಾನವನ್ನು ಘೋಷಿಸಿತ್ತು. ಇದೀಗ ಅಲ್ ಖೈದಾ ಮುಖ್ಯಸ್ಥ ಖಾಲಿದ್ ಅಲ್-ಬತರ್ಫಿ ಮೃತಪಟ್ಟಿದ್ದಾನೆ ಎಂದು ಉಗ್ರಗಾಮಿ ಗುಂಪು ಭಾನುವಾರ ತಡರಾತ್ರಿ ಘೋಷಿಸಿದೆ. ಅಲ್-ಖೈದಾ ಕಪ್ಪು-ಬಿಳುಪು ಧ್ವಜದ ಕವರ್ನಲ್ಲಿ ಸುತ್ತಿದ ಅಲ್-ಬತರ್ಫಿಯನ್ನು ತೋರಿಸುವ ವೀಡಿಯೊವನ್ನು ಅಲ್-ಖೈದಾ ಬಿಡುಗಡೆ ಮಾಡಿದೆ.



## ಆಸ್ಕರ್ ಪ್ರಶಸ್ತಿ ನೀಡಲು ಬೆತ್ತಲೆಯಾಗಿ ಬಂದ WWE ಸ್ಟಾರ್ ಜಾನ್ಸೀನಾ





**ದೆಹಲಿ:** ನಿನ್ನೆಯಷ್ಟೇ ಆಸ್ಕರ್ ಪ್ರಶಸ್ತಿ ಪ್ರಧಾನ ಸಮಾರಂಭ ನಡೆದಿದ್ದು, ಹಲವರಿಗೆ ಪ್ರಶಸ್ತಿ ಸಿಕ್ಕಿದೆ. ಉತ್ತಮ ನಟ, ನಟಿ, ಪೋಷಕ ನಟ, ಪೋಷಕ ನಟಿ ಇತ್ಯಾದಿ ಪ್ರಶಸ್ತಿಗಳನ್ನು ನೀಡಲಾಗಿದೆ. ಆದರೆ ಬೆಸ್ಟ್ ಕಾಸ್ಟ್ಯೂಮ್ ಡಿಸೈನರ್ ಪ್ರಶಸ್ತಿ ನೀಡಲು ವೇದಿಕೆ ನಟನೊಬ್ಬ ಬೆತ್ತಲೆಯಾಗಿ ಬಂದು ಎಡವಟ್ಟು ಮಾಡಿದ್ದಾನೆ.

ಬೇರೆಯವರಿಗೆ ಇದು ಎಡವಟ್ಟು ಅನ್ನಿಸಿದರೂ, ವಿದೇಶಿಗರಿಗೆ ಇದು ಕಾಮನ್. WWE ಸ್ಟಾರ್ ಜಾನ್ ಸೀನಾ ಓರ್ವ ನಟ ಕೂಡ ಹೌದು. ಆಸ್ಕರ್ ಪ್ರಶಸ್ತಿ ಪ್ರಧಾನ ಸಮಾರಂಭದ ವೇಳೆ ಜಾನ್ಸೀನಾ, ವೇದಿಕೆ ಮೇಲೆ ಬೆತ್ತಲೆಯಾಗಿ ಬಂದಿದ್ದಾರೆ. ಚಿಕ್ಕ ಬೋರ್ಡ್ನಿಂದ ತಮ್ಮ ಮುಖ್ಯ ಅಂಗಗಳನ್ನು ಮುಚ್ಚಿಕೊಂಡಿದ್ದಾರೆ. ಬಳಿಕ ಅವರಿಗೆ ವೇದಿಕೆ ಮೇಲೆಯೇ ಬೇರೆ ಬಟ್ಟೆ ತೊಡಿಸಲಾಗಿದೆ.

ಈ ಫೋಟೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದ್ದು, ಈ ಬಗ್ಗೆ ಪರ ವಿರೋಧ ಚರ್ಚೆಗಳು ನಡೆಯುತ್ತಿದೆ. ಕೆಲವರು ಇದನ್ನು ನಾರ್ಮಲ್ ಆಗಿ ತೆಗೆದುಕೊಂಡು, ಜಾನ್ಸೀನಾ ತಮಾಷೆಗಾಗಿ ಹೀಗೆ ಮಾಡಿದ್ದಾರೆಂದು ಹೇಳಿದರೆ, ಓರ್ವ ಸೆಲೆಬ್ರಿಟಿಯಾಗಿ ಈ ರೀತಿ ತಮಾಷೆ ಮಾಡಿದ್ದು, ತಪ್ಪು ಎಂದು ಹಲವರು ಆಕ್ರೋಶ ಹೊರಹಾಕಿದ್ದಾರೆ.

## ಸಿಎಎ ಅಧಿಸೂಚನೆ ಜಾರಿಗೊಳಿಸಿದ ಕೇಂದ್ರ ಸರ್ಕಾರ



**ನವದೆಹಲಿ:** ಈ ಹಿಂದಿನ ಚುನಾವಣೆಯ ಸಂದರ್ಭದಲ್ಲಿ ಸಿಎಎ ಜಾರಿಗೊಳಿಸುತ್ತೇವೆ ಎಂದು ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ಪ್ರಕಟಿಸಿತ್ತು. ರಾಷ್ಟ್ರಪತಿಗಳು ಕಾಯ್ದೆಗೆ ಸಹಿ ಹಾಕಿದ್ದರೂ ಇಲ್ಲಿಯವರೆಗೆ ಜಾರಿ ಆಗಿರಲಿಲ್ಲ. ಇದೀಗ ಲೋಕಸಭಾ ಚುನಾವಣೆ ಹೊಸ್ತಿಲಲ್ಲೇ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಭಾರತದದಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ ಅಧಿಸೂಚನೆ ಹೊರಡಿಸಿದೆ. ಈ ಮೂಲಕ ದೇಶಾದ್ಯಂತ ಸಿಎಎ ಪೌರತ್ವ ಕಾಯ್ದೆಯ ನಿಯಮಗಳ ಅಧಿಸೂಚನೆ ಹೊರಬಿದ್ದಿದೆ. ಈ ಕಾಯ್ದೆಯ ಪ್ರಕಾರ ಪಾಕಿಸ್ತಾನ, ಅಫ್ಘಾನಿಸ್ತಾನ, ಬಾಂಗ್ಲಾದೇಶಗಳಿಂದ ಬರುವ ಹಿಂದೂ, ಸಿಖ್, ಜೈನ್, ಕ್ರೈಸ್ತ ಮತ್ತು ಬೌದ್ಧ ಸಮುದಾಯದವರಿಗೆ ಭಾರತದ ಪೌರತ್ವ ನೀಡಲಾಗುತ್ತದೆ.2019ರಲ್ಲಿ ಸಂಸತ್ತಿನಲ್ಲಿ ಸಿಎಎ ಕಾಯ್ದೆಗೆ ಅನುಮೋದನೆ ಸಿಕ್ಕರೂ, ಅಧಿಸೂಚನೆ ಹೊರಡಿಸಿರಲಿಲ್ಲ. ಈ ಹಿಂದೆ ನೀಡಿದ್ದ ಭರವಸೆಯಂತೆ ಸಿಎಎ ಜಾರಿಗೊಳಿಸಿದೆ.

## ಇಸ್ರೇಲ್‌ನ ಯುದ್ಧನೀತಿ ಕುರಿತ ಬೈಡನ್ ಹೇಳಿಕೆ ತಪ್ಪು: ನೆತನ್ಯಾಹು



**ಟೆಲ್‌ಅವೀವ್:** ಗಾಝಾದಲ್ಲಿನ ಯುದ್ಧಕ್ಕೆ ಸಂಬಂಧಿಸಿ ಇಸ್ರೇಲ್ನ ನೀತಿಯು ಇಸ್ರೇಲ್ಗೆ ನೆರವಾಗುವ ಬದಲು ಹಾನಿಯುಂಟು ಮಾಡುತ್ತಿದೆ ಎಂಬ ಅಮೆರಿಕ ಅಧ್ಯಕ್ಷ ಜೋ ಬೈಡನ್ ಹೇಳಿಕೆಯನ್ನು ತಿರಸ್ಕರಿಸುವುದಾಗಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

'ನಾನು ಬಹುಸಂಖ್ಯಾತರ ಆಶಯದ ಬದಲು ನನ್ನ ವೈಯಕ್ತಿಕ ನೀತಿಗೆ ಆದ್ಯತೆ ನೀಡುತ್ತೇನೆ ಮತ್ತು ಇದು ಇಸ್ರೇಲ್ನ ಹಿತಾಸಕ್ತಿಗೆ ಹಾನಿಯುಂಟು ಮಾಡುತ್ತಿದೆ ಎಂಬುದು ಅವರ ಹೇಳಿಕೆಯ ಅರ್ಥವಾಗಿದ್ದರೆ ಈ ಎರಡೂ ತಪ್ಪು ಅಭಿಪ್ರಾಯಗಳು ಎಂದು ಸ್ಪಷ್ಟಪಡಿಸುತ್ತಿದ್ದೇನೆ. ಯುದ್ಧಕ್ಕೆ ಸಂಬಂಧಿಸಿದ ನನ್ನ ನೀತಿಗಳನ್ನು ಬಹುಪಾಲು ಇಸ್ರೇಲಿಗಳು ಬೆಂಬಲಿಸಿದ್ದಾರೆ. ಹಮಾಸ್ನ ಉಳಿದ ಬೆಟಾಲಿಯನ್ಗಳನ್ನು ನಾಶಗೊಳಿಸಲು ನಾನು ತೆಗೆದುಕೊಳ್ಳುತ್ತಿರುವ ಕ್ರಮಗಳನ್ನು ಅವರು ಬೆಂಬಲಿಸಿದ್ದಾರೆ. ಒಮ್ಮೆ ನಾವು ಹಮಾಸ್ ಅನ್ನು ನಾಶಗೊಳಿಸಿದರೆ ನಾವು ಗಾಝಾದಲ್ಲಿ ಮಾಡಬೇಕಾದ ಕೊನೆಯ ಕೆಲಸವೆಂದರೆ ಗಾಝಾದ ಉಸ್ತುವಾರಿ ವಹಿಸುವುದು ಎಂದು ಇಸ್ರೇಲ್ ಪ್ರಜೆಗಳು ಹೇಳುತ್ತಿದ್ದಾರೆ' ಎಂದು ನೆತನ್ಯಾಹು ಹೇಳಿದ್ದಾರೆ.

ಗಾಝಾದಲ್ಲಿ ಇಸ್ರೇಲ್ನ ಕಾರ್ಯಾಚರಣೆಯಲ್ಲಿ ಸಾವನ್ನಪ್ಪಿದ ಮುಗ್ಧ ಜೀವಗಳ ಬಗ್ಗೆ ನೆತನ್ಯಾಹು ಹೆಚ್ಚು ಗಮನ ವಹಿಸಬೇಕು ಎಂದು ಬೈಡನ್ ಆಗ್ರಹಿಸಿದ್ದರು.

## ಟೇಕ್ ಆಫ್ ಆದ ಕೆಲವೇ ಸಮಯದಲ್ಲಿ ನಿದ್ದೆಗೆ ಜಾರಿದ ಪೈಲಟ್‌ಗಳು

**ದೆಹಲಿ:** ವಿಮಾನವೊಂದರ ಇಬ್ಬರು ಪೈಲಟ್ ಗಳು ನಿದ್ದೆಗೆ ಜಾರಿದ ಪರಿಣಾಮ ವಿಮಾನ ದಿಕ್ಕು ತಪ್ಪಿದ ಘಟನೆ ಇಂಡೋನೇಷ್ಯಾದಲ್ಲಿ ಬಾಟಿಕ್ ನಲ್ಲಿ ನಡೆದಿದ್ದು ತಡವಾಗಿ ಘಟನೆ ಬೆಳಕಿಗೆ ಬಂದಿದೆ.

ಈ ವರ್ಷದ ಜನವರಿ ತಿಂಗಳಲ್ಲಿ ಘಟನೆ ನಡೆದಿದ್ದು ಇದೀಗ ಪ್ರಕರಣ ಬೆಳಕಿಗೆ ಬಂದಿದೆ. ಅರ್ಧ ಗಂಟೆಯ ನಂತರ ನಿದ್ರೆಗೆ ಜಾರಿದ ಪೈಲಟ್ ಎಚ್ಚರಗೊಂಡಿದ್ದರಿಂದ ಭಾರೀ ಅನಾಹುತ ತಪ್ಪಿದೆ.

ಈ ಬಗ್ಗೆ ತನಿಖೆ ನಡೆಸಲಾಗಿದ್ದು, ಪೈಲಟ್ ಮತ್ತು ಸಹ ಪೈಲಟ್ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಲಾಗಿದೆ.

ಪೈಲಟ್ಗಳು ನಿದ್ರೆಗೆ ಜಾರಿದಾಗ ವಿಮಾನದಲ್ಲಿ ಸುಮಾರು 153 ಪ್ರಯಾಣಿಕರಿದ್ದರು. ಸುಲವೇಸಿಯಿಂದ ಜಕಾರ್ತಕ್ಕೆ ಈ ವಿಮಾನ ಹೊರಡುವ ವೇಳೆ ಈ ಘಟನೆ ನಡೆದಿದೆ. ಆದರೆ, ಈ ಘಟನೆಯ ಹಿಂದಿನ ರಾತ್ರಿ, ಕರ್ತವ್ಯದಲ್ಲಿದ್ದ ಸಹ ಪೈಲಟ್ ಸರಿಯಾಗಿ ವಿಶ್ರಾಂತಿ ತೆಗೆದುಕೊಳ್ಳಲಿಲ್ಲ ಎಂದು ಹೇಳಲಾಗುತ್ತಿದೆ.

ಮರುದಿನ ಸುಲವೇಸಿ ಏರ್ಪೋರ್ಟ್ ನಿಂದ ವಿಮಾನ ಟೇಕ್ ಆಫ್ ಆದ ಅರ್ಧ ಗಂಟೆಯ ನಂತರ ಫ್ಲೈಟ್ ಕ್ಯಾಪ್ಟನ್ ಸಹ ಪೈಲಟ್ ಬಳಿ ವಿಶ್ರಾಂತಿ ಪಡೆಯಲು ಅನುಮತಿ ಕೇಳಿದ್ದಾರೆ ಅದಕ್ಕೆ ಸಹ ಪೈಲೆಟ್ ಅನುಮತಿ ನೀಡಿದ್ದಾರೆ. ಅದರಂತೆ ವಿಮಾನ ಪೈಲೆಟ್ ವಿಶ್ರಾಂತಿಗೆ ತೆರಳಿದ್ದಾರೆ ಇದಾದ ಬಳಿಕ ಸಹ ಪೈಲಟ್ ಕರ್ತವ್ಯದಲ್ಲಿದ್ದ ವೇಳೆ ಅವರೂ ನಿದ್ರೆಗೆ ಜಾರಿದ್ದಾರೆ, ಈ ವೇಳೆ ಜಕಾರ್ತದಲ್ಲಿರುವ ಏರಿಯಾ ಕಂಟ್ರೋಲ್ ಸೆಂಟರ್ ವಿಮಾನವನ್ನು ಸಂಪರ್ಕಿಸಲು ಯತ್ನಿಸಿದ್ದಾರೆ. ಆದರೆ ಏರ್ ಕಂಟ್ರೋಲ್ ಸೆಂಟರ್ ನಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಕಾರಣ ಇಬ್ಬರೂ ಪೈಲೆಟ್ ಗಳು ನಿದ್ರೆಗೆ ಜಾರಿದ್ದಾರೆ, ಇದಾದ ಬಳಿಕ ಸುಮಾರು ಅರ್ಧ ಗಂಟೆ ಕಳೆದ ಬಳಿಕ ವಿಶ್ರಾಂತಿಯಲ್ಲಿದ್ದ ಪೈಲೆಟ್ ಎಚ್ಚರಗೊಂಡು ನೋಡಿದಾಗ ಸಹ ಪೈಲೆಟ್ ನಿದ್ರೆಗೆ ಜಾರಿದ್ದು ಗಮನಕ್ಕೆ ಬಂದಿದೆ ಕೂಡಲೇ ಪೈಲೆಟ್ ಸಹ ಪೈಲೆಟ್ ನನ್ನ ಎಬ್ಬಿಸಿದ್ದಾರೆ, ಈ ವೇಳೆ ವಿಮಾನ ಸರಿಯಾದ ದಾರಿಯಲ್ಲಿ ಸಂಚರಿಸುತ್ತಿಲ್ಲ ಎಂಬುದು ಗೊತ್ತಾಗಿದೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಹೊಸ ಚಿತ್ರಕ್ಕೆ ನಾಯಕನಾದ ವಿಜಯ್ ಸೂರ್ಯ



'ಅಗ್ನಿಸಾಕ್ಷಿ' ಸೀರಿಯಲ್ ಮೂಲಕ ಮನೆ ಮಾತಾದ ನಟ ವಿಜಯ್ ಸೂರ್ಯ ಇದೀಗ 'ಸ್ವಿಚ್ ಕೇಸ್ ಎನ್' ಸಿನಿಮಾಗೆ ನಾಯಕನಾಗಿ ಎಂಟ್ರಿ ಕೊಟ್ಟಿದ್ದಾರೆ. ಈ ಚಿತ್ರದ ಟ್ರೈಲರ್ ರಿಲೀಸ್ ಆಗಿದೆ. 'ಸ್ವಿಚ್ ಕೇಸ್ ಎನ್' ಚಿತ್ರದ ಝುಲಕ್‌ಗೆ ಪ್ರೇಕ್ಷಕರಿಂದ ಮೆಚ್ಚುಗೆ ಸಿಕ್ಕಿದೆ.

ಪ್ರಸ್ತುತ 'ನಮ್ಮ ಲಚ್ಚಿ' ಹೀರೋ ವಿಜಯ್ ಸೂರ್ಯ ತೆಲುಗು ಕಿರುತೆರೆಯಲ್ಲೂ ಬ್ಯುಸಿಯಾಗಿದ್ದಾರೆ. ಇದರ ಜೊತೆಗೆ ಕನ್ನಡ ಸಿನಿಮಾಗಳಲ್ಲಿ ವಿಜಯ್ ಮಿಂಚ್ತಿದ್ದಾರೆ. ಇದೀಗ 'ಸ್ವಿಚ್ ಕೇಸ್ ಎನ್' ಚಿತ್ರದ ಟ್ರೈಲರ್ ಮೂಲಕ ವಿಜಯ್ ಗಮನ ಸೆಳೆದಿದ್ದಾರೆ.

ಐಟಿ ಕಂಪನಿ ನಡೆಯುವ ಒಬ್ಬ ಹುಡುಗನ ಜರ್ನಿಯ ಕಥೆಯಾಗಿದೆ. ಸಿನಿಮಾ ರಿಯಲ್ ಬದುಕಿಗೆ ಕನೆಕ್ಟ್ ಆಗುವ ಹಾಗೇ ನೈಜವಾಗಿ ಮೂಡಿ ಬಂದಿದೆ. ರಿಯಲ್ ಸ್ಟೋರಿ ಇಟ್ಟುಕೊಂಡು ಈ ಸಿನಿಮಾ ಮಾಡಿದ್ದಾರೆ. ಐಟಿ ಕಂಪನಿಯಲ್ಲಿ ಮ್ಯಾನೇಜರ್ ಜೊತೆ ನಡೆಯುವ ಮಾತುಕತೆ, ಕೆಲಸದಲ್ಲಿ ಎದುರಿಸುವ ಚಾಲೆಂಜ್ ಇವೆಲ್ಲವನ್ನೂ ಸಿನಿಮಾದಲ್ಲಿ ತೋರಿಸಲಾಗಿದೆ ಎಂದು ವಿಜಯ್ ಸೂರ್ಯ ತಿಳಿಸಿದ್ದಾರೆ.

'ಸ್ವಿಚ್ ಕೇಸ್ ಎನ್' ಚಿತ್ರಕ್ಕೆ ಚೇತನ್ ಶೆಟ್ಟಿ ನಿರ್ದೇಶನ ಮಾಡಿದ್ದಾರೆ. ವಿಜಯ್ ಸೂರ್ಯಗೆ ನಾಯಕಿಯಾಗಿ ಶ್ವೇತಾ ವಿಜಯ್ ಕುಮಾರ್ ನಟಿಸಿದ್ದಾರೆ. ಇದು ಅವರ ಚೊಚ್ಚಲ ಚಿತ್ರವಾಗಿದೆ. ಸದ್ಯದಲ್ಲೇ ಸಿನಿಮಾ ರಿಲೀಸ್ ಬಗ್ಗೆ ಚಿತ್ರತಂಡ ಮಾಹಿತಿ ನೀಡಲಿದೆ.

ಕ್ರೇಜಿಲೋಕ, ಇಷ್ಟಕಾಮ್ಯ, ಕದ್ದುಮುಚ್ಚಿ, ಗಾಳಿಪಟ 2, ವೀರಪುತ್ರ ಸಿನಿಮಾಗಳಲ್ಲಿ ವಿಜಯ್ ಸೂರ್ಯ ನಟಿಸಿ ಸೈ ಎನಿಸಿಕೊಂಡಿದ್ದಾರೆ.



# 'ಗೂಗ್ಲಿ' ನಟಿ ಕೃತಿ ಕರಬಂಧ ಮದುವೆ ಯಾವಾಗ, ಎಲ್ಲಿ?

ಕನ್ನಡದ ನಟಿ, ಬಾಲಿವುಡ್ ಬೆಡಗಿ ಕೃತಿ ಕರಬಂಧ ಮನೆಯಲ್ಲಿ ಸಂಭ್ರಮ ಮನೆ ಮಾಡಿದೆ. ಬಹುಕಾಲದ ಗೆಳೆಯ ಪುಲ್ಕಿತ್ ಸಾಮ್ರಾಟ್ ಜೊತೆ ಕೃತಿ ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ಹಾಗಾದ್ರೆ ಕೃತಿ ಯಾವಾಗ, ಎಲ್ಲಿ? ಇಲ್ಲಿದೆ ಮಾಹಿತಿ.

'ಗೂಗ್ಲಿ' ಬೆಡಗಿ ಕೃತಿ ಜೊತೆ ಪುಲ್ಕಿತ್ ಇದೇ ಮಾರ್ಚ್ 15ರಂದು ದೆಹಯಲ್ಲಿ ಗ್ರ್ಯಾಂಡ್ ಆಗಿ ಮದುವೆ ಆಗುತ್ತಿದ್ದಾರೆ. ಈ ಜೋಡಿ ತಮ್ಮ ಆಪ್ತರಿಗೆ, ಬಾಲಿವುಡ್‌ನ ನಟ-ನಟಿಯರಿಗೆ ಆಮಂತ್ರಣ ನೀಡಿದ್ದಾರೆ.

ಈಗ ಈ ಜೋಡಿ ಮದುವೆ ಆಗುತ್ತಿರುವ ಸ್ಥಳದ ಬಗ್ಗೆ ಮಾಹಿತಿ ಹೊರಬಿದ್ದಿದೆ. ಸುಮಾರು 300 ಎಕರೆಯಲ್ಲಿ ನಿರ್ಮಾಣಗೊಂಡಿರುವ ರೆಸಾರ್ಟ್‌ನಲ್ಲಿ ಕೃತಿ ಮದುವೆಯಾಗುತ್ತಿದ್ದಾರೆ. ಮಾರ್ಚ್ 13ರಿಂದ ಮಾರ್ಚ್ 16ರವರೆಗೆ ಮದುವೆ ಶಾಸ್ತಗಳು ನಡೆಯಲಿದೆ. ಮಾರ್ಚ್ 15ರಂದು ಹೊಸ ಬಾಳಿಗೆ ಕಾಲಿಡಲಿದ್ದಾರೆ.





'ಗೂಗ್ಲಿ' ಬ್ಯೂಟಿ ಕೃತಿ ಕರಬಂಧ ಹಾಗೂ ಪುಲ್ಕಿತ್ ಸಮರ್ಥ್ ದೆಹಲಿಯಲ್ಲಿರುವ ಐಟಿಸಿ ಗ್ರ್ಯಾಂಡ್ ಐಷಾರಾಮಿ ರೆಸಾಟ್‌ನಲ್ಲಿ ಮದುವೆ ಆಗುತ್ತಿದ್ದಾರೆ ಎಂದು ಆಂಗ್ಲ ಪತ್ರಿಕೆಯೊಂದು ವರದಿ ಮಾಡಿದೆ. ಈ ರೆಸಾರ್ಟ್ 300 ಎಕರೆ ವಿಸ್ತೀರ್ಣದಲ್ಲಿ ನಿರ್ಮಾಣಗೊಂಡಿದೆ. ಪ್ರಾಚೀನ ಶೈಲಿಯಲ್ಲಿ ಸುಂದರವಾದ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗಿದೆ.

ಗ್ರ್ಯಾಂಡ್ ಭಾರತ್ ರೆಸಾರ್ಟ್‌ನಲ್ಲಿ ಸುಮಾರು 4 ಪ್ರೆಸಿಡೆಂನ್ಸಿಯಲ್ ವಿಲ್ಲಾವಿದೆ. ಐಷಾರಾಮಿ ಸ್ಪಾಗಳು ಸೇರಿದಂತೆ ಅನೇಕ ಸೌಲಭ್ಯಗಳಿವೆ. ಇನ್ನೂ ಕೃತಿ, ಪುಲ್ಕಿತ್ ಇಬ್ಬರೂ ದೆಹಲಿಯಲ್ಲೇ ಹುಟ್ಟಿ ಬೆಳೆದಿದ್ದಾರೆ. ಇವರ ಕುಟುಂಬ ದೆಹಲಿಯಲ್ಲಿಯೇ ನೆಲೆಸಿರುವುದರಿಂದ ಇದೇ ಸೂಕ್ತ ಆಯ್ಕೆ ಎಂದು ಜೋಡಿ ನಿರ್ಧರಿಸಿದೆ.

2019ರಲ್ಲಿ ತೆರೆಕಂಡ 'ಪಾಗಲ್‌ಪಂತಿ' ಸಿನಿಮಾದಲ್ಲಿ ಪುಲ್ಕಿತ್ ಸಾಮ್ರಾಟ್, ಕೃತಿ ಜೋಡಿಯಾಗಿ ನಟಿಸಿದ್ದರು. ಈ ವೇಳೆ, ಇಬ್ಬರ ಪರಿಚಯವಾಗಿತ್ತು. ಈ ಪರಿಚಯ ಪ್ರೀತಿಗೆ ತಿರುಗಿದೆ. ಹಲವು ವರ್ಷಗಳ ಡೇಟಿಂಗ್ ನಂತರ ಇದೀಗ ಗುರುಹಿರಿಯರ ಸಮ್ಮತಿಯ ಮೇರೆಗೆ ಈ ಜೋಡಿ ಮದುವೆಯಾಗುತ್ತಿದ್ದಾರೆ.

## ಏಪ್ರಿಲ್ ಮೊದಲ ವಾರದಲ್ಲಿ ಬಹುನಿರೀಕ್ಷಿತ 'ಮ್ಯಾಟ್ನಿ'

ಅಯೋಗ್ಯ ಚಿತ್ರದ ತರುವಾಯ ಒಂದು ಸುದೀರ್ಘಾವಧಿಯ ನಂತರ ನೀನಾಸಂ ಸತೀಶ್ ಮತ್ತು ರಚಿತಾ ರಾಮ್ ಜೋಡಿಯಾಗಿ ನಟಿಸುತ್ತಿರುವ ಚಿತ್ರ 'ಮ್ಯಾಟ್ನಿ'. ಯಶಸ್ವಿ ಜೋಡಿಯಾಗಿ ಗುರುತಿಸಿಕೊಂಡಿರುವ ಸತೀಶ್ ಮತ್ತು ರಚಿತಾ ಮತ್ತೊಂದು ತೆರನಾದ ಗೆಟಪ್ಪಿನಲ್ಲಿ ಕಾಣಿಸಿಕೊಂಡಿರುವ ಮ್ಯಾಟ್ನಿಯ ಬಿಡುಗಡೆ ದಿನಾಂಕದ ಬಗ್ಗೆ ಒಂದಷ್ಟು ವಿಚಾರಗಳು ಹರಿದಾಡುತ್ತಿವೆ. ಗಾಂಧಿ ನಗರದಲ್ಲಿ ಸದ್ಯಕ್ಕೆ ಗುಲ್ಲೆದ್ದಿರುವ ವಿಚಾರಗಳನ್ನಾಧರಿಸಿ ಹೇಳೋದಾದರೆ, ಏಪ್ರಿಲ್ ತಿಂಗಳ ಮೊದಲ ವಾರದಲ್ಲಿ ಮ್ಯಾಟ್ನಿ ತೆರೆಗಾಣುವ ಸಾಧ್ಯತೆಗಳಿವೆ.

ಮನೋಹರ್ ಕಾಂಪಲ್ಲಿ ನಿರ್ದೇಶನದಲ್ಲಿ, ಜಿ3 ಪ್ರೊಡಕ್ಷನ್ಸ್ ಬ್ಯಾನರಿನಡಿಯಲ್ಲಿ ಮೂಡಿ ಬಂದಿರುವ ಮ್ಯಾಟ್ನಿ ಆರಂಭದಿಂದ ಇಲ್ಲಿಯವರೆಗೂ ಪ್ರೇಕ್ಷಕರ ಆಸಕ್ತಿ ಸೆಳೆಯುತ್ತಾ ಬಂದಿದೆ. ಹಂತ ಹಂತವಾಗಿ ಒಂದಿಷ್ಟು ವಿಚಾರಗಳನ್ನು ತಲುಪಿಸುತ್ತಾ ಬಂದಿರುವ ಈ ಚಿತ್ರವೀಗ ಬಿಡುಗಡೆಯ ಅಂಚಿಗೆ ಬಂದು ನಿಂತಿದೆ. ಸದ್ದಿಲ್ಲದಂತೆ ಪೋಸ್ಟ್ ಪ್ರೊಡಕ್ಷನ್ ಕಾರ್ಯ ಮುಗಿಸಿರುವ ಮ್ಯಾಟ್ನಿಯ ಪ್ರಚಾರ ಕಾರ್ಯವೂ ಚಾಲೂ ಆಗುವ ಲಕ್ಷಣಗಳು ಕಾಣಿಸುತ್ತಿವೆ.

ಇತ್ತೀಚಿನ ವರ್ಷಗಳಲ್ಲಿ ವಿಶೇಷವಾದ, ಒಂದಕ್ಕೊಂದು ಭಿನ್ನವಾದ ಪಾತ್ರಗಳನ್ನೇ ನೀನಾಸಂ ಸತೀಶ್ ಒಪ್ಪಿಕೊಳ್ಳುತ್ತಾ ಬರುತ್ತಿದ್ದಾರೆ. ಅದರ ಮುಂದುವರೆಕೆಯ ಭಾಗವೆಂಬಂತೆ ಕಾಣಿಸುತ್ತಿರುವ



ಮ್ಯಾಟ್ನಿ ಮನಮೋಹಕ ಕಥೆಯ ಹೂರಣದೊಂದಿಗೆ ರೂಪಿಸಲ್ಪಟ್ಟಿದೆ. ಒಂದು ಯಶಸ್ವಿ ಜೋಡಿ ಮತ್ತೊಂದು ಸಿನಿಮಾದಲ್ಲಿಯೂ ಜೊತೆಯಾದಾಗ ಸಹಜವಾಗಿಯೇ ಅದರತ್ತ ಒಂದಷ್ಟು ಕುತೂಹಲ ಮೂಡಿರತ್ತೆ. ಈ ಸಿನಿಮಾದ ಬಗ್ಗೆಯೂ ಅಂಥದ್ದೊಂದು ನಿರೀಕ್ಷೆ ಮೂಡಿದೆ.

## ಭಾರೀ ಹೈಡ್ರಾಮಾ ಬಳಿಕ ಟ್ರಯಲ್ಸ್‌ನಲ್ಲಿ ವಿನೇಶ್‌ಗೆ ವಿಜಯ

**ನವದೆಹಲಿ:** ಏಷ್ಯನ್ ಗೇಮ್ಸ್ ಹಾಗೂ ಕಾಮನ್ ವೆಲ್ತ್ ಗೇಮ್ಸ್ ಚಿನ್ನದ ಪದಕ ವಿಜೇತೆ ವಿನೇಶ್ ಫೋಗಟ್ ಒಲಿಂಪಿಕ್ಸ್‌ಗೆ ನಡೆದ ಕುಸ್ತಿ ಆಯ್ಕೆ ಟ್ರಯಲ್ಸ್‌ನಲ್ಲಿ 50 ಕೆಜಿ ವಿಭಾಗದಲ್ಲಿ ಗೆಲುವು ಸಾಧಿಸಿದ್ದಾರೆ. ಈ ಮೂಲಕ 2024ರ ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಪಡೆಯುವ ಕನಸನ್ನು ಜೀವಂತವಾಗಿಸಿಕೊಂಡಿದ್ದಾರೆ.

**ಮೂರು ಗಂಟೆ ಭಾರೀ ಹೈಡ್ರಾಮಾ:** ಪಟಿಯಾಲದಲ್ಲಿರುವ ಭಾರತೀಯ ಕ್ರೀಡಾ ಪ್ರಾಧಿಕಾರ ಕೇಂದ್ರದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಮಹಿಳಾ ಕುಸ್ತಿ ಟ್ರಯಲ್ಸ್‌ನಲ್ಲಿ ಸುಮಾರು ಮೂರು ಗಂಟೆಗಳ ಕಾಲ ಭಾರೀ ಹೈಡ್ರಾಮಾ ನಡೆಯಿತು. ಮೊದಲಿಗೆ ವಿನೇಶ್ ಫೋಗಟ್ ಕುಸ್ತಿಯಲ್ಲಿ ಪಾಲ್ಗೊಳ್ಳಲು ಒಪ್ಪದೇ ಹೈಡ್ರಾಮಾ ಸೃಷ್ಟಿಸಿದ್ರು. 53 ಮತ್ತು 50 ಕೆ.ಜಿ ಎರಡೂ ವಿಭಾಗದಲ್ಲಿ ಟ್ರಯಲ್ಸ್‌ಗೆ ಒಪ್ಪಿಗೆ ನೀಡುವಂತೆ ಪಟ್ಟು ಹಿಡಿದಿದ್ದರು. ಅಧಿಕಾರಿಗಳು ಎರಡೂ ವಿಭಾಗದಲ್ಲಿ ಟ್ರಯಲ್ಸ್‌ನಲ್ಲಿ ಭಾಗವಹಿಸಲು ಅನುಮತಿ ನೀಡಿದ ನಂತರವೇ ಕಣಕ್ಕಿಳಿಯಲು ಮುಂದಾದರು. ಪ್ರತಿ ಬಾರಿ 53 ಕೆಜಿ ವಿಭಾಗದಲ್ಲಿ ಸ್ಪರ್ಧಿಸುತ್ತಿದ್ದ ವಿನೇಶ್ ಫೋಗಟ್ ಈ ಬಾರಿ 50 ಕೆ.ಜಿ ವಿಭಾಗದಲ್ಲಿ ಸ್ಪರ್ಧಿಸಿದ್ದರು.

**ಸೋತು ಗೆದ್ದ ವಿನೇಶ್:** 53 ಕೆಜಿ ವಿಭಾಗದಲ್ಲಿ ವಿನೇಶ್ ಕೇವಲ 18 ಸೆಕೆಂಡುಗಳಲ್ಲೇ ಪರಾಭವಗೊಂಡರು. ಪ್ರತಿಸ್ಪರ್ಧಿ ಅಂಜು ಆಕೆಯನ್ನ ಸೋಲಿಸಿದರು. ಬಳಿಕ ವಿನೇಶ್ 50 ಕೆಜಿ ವಿಭಾಗದಲ್ಲಿ ಎದುರಾಳಿ ಶಿವಾನಿ ಅವರನ್ನ ಸೋಲಿಸಿದರು. 53 ಕೆಜಿ ವಿಭಾಗದಲ್ಲಿ 1-4ರಲ್ಲಿ ಸೋತಿದ್ದ ವಿನೇಶ್ ಬಳಿಕ ಶಿವಾನಿ ವಿರುದ್ಧ 11-6 ಅಂಕಗಳೊಂದಿಗೆ



ಗೆದ್ದು ಕಂಬ್ಯಾಕ್ ಮಾಡಿದರು. ಒಲಿಂಪಿಕ್ಸ್‌ಗೂ ಮುನ್ನ ಕಿರ್ಗಿಸ್ತಾನದ ಬಿಷ್ಕೆಕ್‌ನಲ್ಲಿ ನಡೆಯಲಿರುವ ಏಷ್ಯನ್ ಒಲಿಂಪಿಕ್ಸ್ ಕ್ವಾಲಿಫೈಯರ್‌ನಲ್ಲಿ ಫೋಗಟ್ ಪಾಲ್ಗೊಳ್ಳಲಿದ್ದಾರೆ.

**ಎದುರು ಮಂಡಿಯೂರಿದ ದಹಿಯಾ, ಬಜರಂಗ್ :**ಇನ್ನೂ ಕಳೆದ ಬಾರಿ ಟೋಕಿಯೊ ಒಲಿಂಪಿಕ್ಸ್ ಪದಕ ವಿಜೇತ ಕುಸ್ತಿಪಟುಗಳಾದ ಬಜರಂಗ್ ಪೂನಿಯ ಮತ್ತು ರವಿ ದಹಿಯಾ ಈ ವರ್ಷದ ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಪಡೆಯುವಲ್ಲಿ ವಿಫಲರಾಗಿದ್ದಾರೆ. ರಾಷ್ಟ್ರೀಯ ತಂಡಕ್ಕಾಗಿ ನಡೆದ ಆಯ್ಕೆ ಟ್ರಯಲ್ಸ್‌ನಲ್ಲಿ ಸೋಲು ಕಂಡ ಕಾರಣ ಇಬ್ಬರಿಗೂ ಭಾರೀ ಹಿನ್ನಡೆಯಾಗಿದೆ.

ಭಾನುವಾರ ನಡೆದಿದ್ದ 65 ಕೆಜಿ ವಿಭಾಗದ ಫ್ರೀಸ್ಟೈಲ್ ಸೆಮಿಫೈನಲ್ ಕಾದಾಟದಲ್ಲಿ ಬಜರಂಗ್ ಪೂನಿಯ ಅವರು ಪ್ರತಿಸ್ಪರ್ಧಿ ರೋಹಿತ್ ಕುಮಾರ್ ಎದುರು 9-1 ಅಂತರದಿಂದ ಪರಾಭವಗೊಂಡರು. 57 ಕೆಜಿ ವಿಭಾಗದಲ್ಲಿ ಅಮಾನ್ ಸೆಹ್ರಾವತ್ ವಿರುದ್ಧ 14-13 ರಿಂದ ರವಿ ದಹಿಯಾ ಸೋಲು ಕಂಡರು.

**ಜುಲೈ 26 ರಿಂದ ಒಲಿಂಪಿಕ್ಸ್ ಶುರು:** ಮಹತ್ವದ ಕ್ರೀಡಾಕೂಡವಾದ ಪ್ಯಾರಿಸ್ ಒಲಿಂಪಿಕ್ಸ್‌ನ ಉದ್ಘಾಟನಾ ಸಮಾರಂಭಕ್ಕೆ ದಿನಾಂಕ ನಿಗದಿಯಾಗಿದೆ. ಜು.26ರಂದು ಉದ್ಘಾಟನಾ ಕಾರ್ಯಕ್ರಮ ನೆರವೇರಲಿದ್ದು, ಆಗಸ್ಟ್ 11ರವರೆಗೆ ವಿವಿಧ ಸ್ಪರ್ಧೆಗಳು ನಡೆಯಲಿದೆ. 1900, 1924ರ ಬಳಿಕ ಪ್ಯಾರಿಸ್ ಆತಿಥ್ಯದಲ್ಲಿ 3ನೇ ಬಾರಿಗೆ ನಡೆಯುತ್ತಿರುವ ಟೂರ್ನಿ ಇದಾಗಿದೆ.

### ವಾರಿಯರ್ಸ್ ಮನೆಗೆ : ಆರ್‌ಸಿಬಿಗೆ ಪ್ಲೇ ಆಫ್‌ಗೆ

# ಅಭಿಮಾನಿಗಳಿಗೆ ತುಂಬಾ ಖುಷಿ

ದೀಪ್ತಿ ಶರ್ಮಾ ಅವರ ಸ್ಫೋಟಕ ಬ್ಯಾಟಿಂಗ್ ಹೊರತಾಗಿಯೂ ಗುಜರಾತ್ ಜೈಂಟ್ಸ್ ಮಹಿಳಾ ತಂಡ, ಯುಪಿ ವಾರಿಯರ್ಸ್ ವಿರುದ್ಧ 8 ರನ್‌ಗಳ ಜಯ ಸಾಧಿಸಿದೆ. ಪ್ಲೇಆಫ್ ರೇಸ್‌ನಲ್ಲಿದ್ದ ಯುಪಿ ವಾರಿಯರ್ಸ್ ತಂಡ ಸೋತು ಟೂರ್ನಿಯಿಂದ ಹೊರಬಿದ್ದಿದೆ. ಈ ಸೋಲಿನಿಂದ ಆರ್‌ಸಿಬಿ ಪ್ಲೇ ಆಫ್ ಖಚಿತಪಡಿಸಿಕೊಂಡಿದೆ.

ಇಲ್ಲಿನ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಸೋಮವಾರ ನಡೆದ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಜೈಂಟ್ಸ್ ತಂಡವು 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 152 ರನ್ ಗಳಿಸಿತ್ತು. 153 ರನ್‌ಗಳ ಗುರಿ ಬೆನ್ನತ್ತಿದ್ದ ಯುಪಿ ವಾರಿಯರ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 144 ರನ್ ಗಳಿಸಿ ಸೋಲೊಪ್ಪಿಕೊಂಡಿತು. ಈ ಸೋಲಿನೊಂದಿಗೆ ಪ್ಲೇ ಆಫ್ ರೇಸ್‌ನಿಂದ ಹೊರಬಿದ್ದಿತು.





ಆರಂಭಿಕ ನಾಲ್ಕು ಪಂದ್ಯಗಳಲ್ಲಿ ಹೀನಾಯ ಸೋಲನುಭವಿಸಿದ್ದ ಗುಜರಾತ್ ಜೈಂಟ್ಸ್ ತಂಡ ಬಳಿಕ ಮೂರು ಪಂದ್ಯಗಳಲ್ಲಿ ಸುಧಾರಿತ ಪ್ರದರ್ಶನ ನೀಡಿತ್ತು. ಸದ್ಯ 7 ಪಂದ್ಯಗಳಲ್ಲಿ 2 ರಲ್ಲಿ ಗೆಲುವು ಸಾಧಿಸಿರುವ ಗುಜರಾತ್ ಜೈಂಟ್ಸ್ ಮಾ.13 ರಂದು ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಕೊನೆಯ ಪಂದ್ಯವನ್ನಾಡಲಿದೆ. ಈ ಪಂದ್ಯದಲ್ಲಿ ಗೆದ್ದರೂ ಸೋತರೂ ಗುಜರಾತ್ ತಂಡ ಮನೆಗೆ ತೆರಳಬೇಕಿದೆ.

ಯುಪಿ ವಾರಿಯರ್ಸ್ ತಂಡವು ತನ್ನ ಲೀಗ್ ಸುತ್ತಿನ ಎಲ್ಲಾ ಪಂದ್ಯಗಳನ್ನಾಡಿದ್ದು, ಅಂಕಪಟ್ಟಿಯಲ್ಲಿ 4ನೇ ಸ್ಥಾನದಲ್ಲಿದೆ. ಹೀಗಾಗಿ 3ನೇ ಸ್ಥಾನದಲ್ಲಿರುವ ಆರ್‌ಸಿಬಿ ಮಾ.12 ರಂದು ನಡೆಯಲಿರುವ ಕೊನೆಯ ಲೀಗ್ ಪಂದ್ಯದಲ್ಲಿ ಗೆದ್ದರೂ ಸೋತರೂ ಪ್ಲೇ ಆಫ್ ತಲುಪಲಿದೆ.

ಗುಜರಾತ್ ಜೈಂಟ್ಸ್ ಪರ ಲಾರಾ ವೊಲ್ವಾರ್ಡ್ಟ್ 43 ರನ್, ಬೆತ್ ಮೂನಿ 74 ರನ್ ಹಾಗೂ ಆಶ್ಲೀಗ್ ಗಾರ್ಡ್ನರ್ 15 ರನ್, ಕ್ಯಾಥರಿನ್ ಬ್ರೈಸ್ 11 ರನ್ ಗಳಿಸಿದ್ರೆ, ಉಳಿದವರು ಅಲ್ಪಮೊತ್ತಕ್ಕೆ ನಿರ್ಗಮಿಸಿದರು. ಚೇಸಿಂಗ್ ಆರಂಭಿಸಿದ ಯುಪಿ ವಾರಿಯರ್ಸ್ ತಂಡದ ಪರ ಕೊನೆಯವರೆಗೂ ಹೋರಾಡಿದ ದೀಪ್ತಿ ಶರ್ಮಾ 60 ಎಸೆತಗಳಲ್ಲಿ 4 ಸಿಕ್ಸರ್, 9 ಬೌಂಡರಿಗಳೊಂದಿಗೆ 88 ರನ್ ಗಳಿಸಿದ್ರೆ, ಪೂನಂ ಖೇಮ್ನಾರ್ 36 ರನ್ ಗಳಿಸಿ ಕ್ರೀಸ್‌ನಲ್ಲಿ ಉಳಿದರು.

# ಸಂವಿಧಾನ ಬದಲಾವಣೆ ಮಾಡಲು ಹೊರಟರೆ ರಕ್ತಪಾತ: ಸಿಎಂ

**ಬೆಂಗಳೂರು:** ಬಿಜೆಪಿಯವರು ಒಂದು ವೇಳೆ ಸಂವಿಧಾನ ಬದಲಾವಣೆ ಮಾಡುವ ಕೆಲಸಕ್ಕೆ ಹೊರಟರೆ ದೇಶದಲ್ಲಿ ರಕ್ತಪಾತವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಬಿಜೆಪಿ ಸಂಸದ ಅನಂತಕುಮಾರ್ ಹೆಗಡೆ ಅವರ ಸಂವಿಧಾನ ಬದಲಾವಣೆ ಹೇಳಿಕೆಗೆ ಪ್ರತಿಕ್ರಿಯಿಸಿ ಮಾತನಾಡಿದ ಅವರು, ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಹೆಗಡೆ ಈ ರೀತಿ ಹೇಳಿಕೆ ನೀಡುತ್ತಿರುವುದು ಇದೇ ಮೊದಲಲ್ಲ. ಈ ಹಿಂದೆಯೂ ಸಚಿವರಾಗಿದ್ದಾಗಲೂ ಸಂವಿಧಾನ ಬದಲಾವಣೆ ಬಗ್ಗೆ ಹೇಳಿಕೆ ನೀಡಿದ್ದರು. ನರೇಂದ್ರ ಮೋದಿ ಅವರು ಪ್ರಧಾನಿಯಾಗಿದ್ದಾಗಲೇ ಹೆಗಡೆ ಸಂವಿಧಾನ ಬದಲಾವಣೆ ಹೇಳಿಕೆ ನೀಡಿದ್ದರು. ಆದರೆ ಅವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿರಲಿಲ್ಲ ಎಂದು ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದರು.

ಸಂವಿಧಾನ ಬದಲಾವಣೆ ಮಾಡುವುದು ಬಿಜೆಪಿಯವರ ರಹಸ್ಯ ಅಜೆಂಡಾ. ಸಂವಿಧಾನಕ್ಕೆ ಅನಗತ್ಯ ತಿದ್ದುಪಡಿತರಲಾಗಿದೆ. ಅವುಗಳನ್ನು ಸರಿಪಡಿಸಬೇಕು. ಅದಕ್ಕೆ ಮೂರನೇ ಎರಡರಷ್ಟು ಬಹುಮತ ಬೇಕು ಎಂದು ಹೆಗಡೆ ಹೇಳಿದ್ದಾರೆ. ಅವರು ಜನತೆಯಲ್ಲಿ ಮೂರನೇ ಎರಡರಷ್ಟು ಬಹುಮತ ಕೇಳಿರುವುದು ದೇಶದ ಉದ್ಧಾರಕ್ಕಲ್ಲ ಎಂದು ಸಿದ್ದರಾಮಯ್ಯ ಹೇಳಿದರು.



ಮನುವಾದಿವನ್ನು ಸಮರ್ಥನೆ ಮಾಡಿಕೊಳ್ಳೋದು, ಮನುಸ್ಮೃತಿಗೆ ಅನುಗುಣವಾಗಿ ಸಂವಿಧಾನ ಇರಬೇಕು ಅನ್ನೋದು ಅವರ ಹಿಡನ್ ಅಜೆಂಡಾ. ಅದಕ್ಕೆ ಇಡೀ ದೇಶದ ಬಡವರು, ದಲಿತರು, ಅಲ್ಪಸಂಖ್ಯಾತರು ಹಿಂದುಳಿಬದವರು ಎಲ್ಲರೂ ಅವರನ್ನು ವಿರೋಧ ಮಾಡುತ್ತಾರೆ. ಒಂದು ವೇಳೆ ಸಂವಿಧಾನ ಬದಲಾವಣೆಯ ಕೆಲಸ ಆದರೆ ದೇಶದಲ್ಲಿ ರಕ್ತಪಾತವಾಗಲಿದೆ ಎಂದು ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

**ಏನು ಹೇಳಿದ್ದರು ಅನಂತಕುಮಾರ್ ಹೆಗಡೆ?:** ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ಹಲಗೇರಿ ಗ್ರಾಮದಲ್ಲಿ ಶನಿವಾರ ಮಾತನಾಡಿದ ಅನಂತ್ ಕುಮಾರ್ ಹೆಗಡೆ, ಕಾಂಗ್ರೆಸ್ ಪಕ್ಷದವರು ಆಡಳಿತದಲ್ಲಿದ್ದಾಗ ಸಂವಿಧಾನವನ್ನು ಹಲವು ಬಾರಿ ತಿರುಚಿದ್ದಾರೆ. ಬೇಡದೆ ಇರುವ ವಿಚಾರಗಳನ್ನೆಲ್ಲ ಸೇರಿಸಿ ಹಿಂದೂ ಸಮಾಜವನ್ನು ಗಮನಿಸುವ ರೀತಿ ಬದಲಾಯಿಸಿದ್ದಾರೆ. ಅವುಗಳನ್ನೆಲ್ಲ ಸರಿಪಡಿಸಬೇಕಿದೆ. ಆದರೆ, ಹಾಗೆ ಮಾಡಬೇಕಿದ್ದರೆ ಲೋಕಸಭೆಯಲ್ಲಿ ಮಾತ್ರವಲ್ಲದೆ ರಾಜ್ಯಸಭೆಯಲ್ಲಿ ಕೂಡ ನಮಗೆ ಬಹುಮತ ಬೇಕಿದೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಬಿಜೆಪಿಯು ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ 400ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಬೇಕಿದೆ ಎಂದು ಹೇಳಿದ್ದರು.

ಈ ಹಿಂದೆ ಕೂಡ ಸಂವಿಧಾನ ಬದಲಾವಣೆಗೆ ಸಂಬಂಧಿಸಿ ಅವರು ನೀಡಿದ್ದ ಹೇಳಿಕೆ, ರಾಜ್ಯದಲ್ಲಿ ರಾಜಕೀಯ ಕೋಲಾಹಲಕ್ಕೆ ಕಾರಣವಾಗಿತ್ತು. ಇದೀಗ ಹೆಗಡೆ ಮತ್ತೆ ಅಂತದ್ದೇ ಹೇಳಿಕೆ ನೀಡಿದ್ದಾರೆ. ಅವರ ಹೇಳಿಕೆಗೆ ಕಾಂಗ್ರೆಸ್ ನಾಯಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಮಧ್ಯೆ, ಅನಂತಕುಮಾರ್ ಹೆಗಡೆ ಹೇಳಿಕೆಯಿಂದ ಬಿಜೆಪಿ ಅಂತರ ಕಾಯ್ದುಕೊಂಡಿದೆ. ಅದು ಅವರ ವೈಯಕ್ತಿಕ ಹೇಳಿಕೆಯಾಗಿದ್ದು ಅದಕ್ಕೂ ಪಕ್ಷಕ್ಕೂ ಸಂಬಂಧವಿಲ್ಲ ಎಂದು ಹೇಳಿದೆ.

## ಚುನಾವಣೆಯಲ್ಲಿ ನನ್ನ ಸ್ಪರ್ಧೆ ನಿಶ್ಚಿತ ಎಂದ ಶೋಭಾ

**ಮಂಗಳೂರು:** ಬಿಜೆಪಿ ಹೈಕಮಾಂಡ್‌ಗೆ ಕರ್ನಾಟಕದಲ್ಲಿ ಕೆಲವು ಲೋಕಸಭಾ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳ ಆಯ್ಕೆ ಕಗ್ಗಂಟಾಗಿದೆ. ದಕ್ಷಿಣ ಕನ್ನಡ, ಮಂಡ್ಯದ ನಂತರ ಉಡುಪಿ ಚಿಕ್ಕಮಗಳೂರು ಕ್ಷೇತ್ರದಲ್ಲಿ ಟಿಕೆಟ್‌ಗಾಗಿ ಜಿದ್ದಾಜಿದ್ದಿ ನಡೆಯುತ್ತಿದೆ. ಒಂದೆಡೆ, ಕಾರ್ಯಕರ್ತರು ಹಾಲಿ ಸಂಸದೆ ಶೋಭಾ ಕರಂದ್ಲಾಜೆ ವಿರುದ್ಧ ಗೋ ಬ್ಯಾಕ್ ಘೋಷಣೆ ಕೂಗುತ್ತಿದ್ದು, ಇನ್ನೊಂದೆಡೆ, ತಾನು ಚುನಾವಣೆಯಲ್ಲಿ ಸ್ಪರ್ಧೆ ಮಾಡೇ ಮಾಡುತ್ತೇನೆ ಎಂದು ಶೋಭಾ ಹೇಳಿದ್ದಾರೆ. ಟಿಕೆಟ್ ಫೈಟ್ ವಿಚಾರವಾಗಿ ಮಾತನಾಡಿದ ಸಿಟಿ ರವಿ, ಯಾರೇ ಅಭ್ಯರ್ಥಿಯಾದರೂ ಮೋದಿ ಮುಖ ನೋಡಿ ವೋಟ್ ಹಾಕಿ. ಈ ಹಿಂದೆ ಎರಡು ಬಾರಿ ಮೋದಿ ಮುಖ ನೋಡಿಯೇ ಗೆಲ್ಲಿಸಿದ್ದು ಎಂದರು.



ದಕ್ಷಿಣ ಕನ್ನಡ ಜಿಲ್ಲೆಯ ಕಡಬದ ಬಿಳಿನೆಲೆಯಲ್ಲಿ ಮಾತನಾಡಿದ ಶೋಭಾ ಕರಂದ್ಲಾಜೆ, ನಾನು ಚುನಾವಣೆಯಲ್ಲಿ ಸ್ಪರ್ಧೆ ಮಾಡಿಯೇ ಮಾಡುತ್ತೇನೆ ಎಂದು ಪುನರುಚ್ಚರಿಸಿದರು. ಒಂದೆರಡು ದಿನಗಳಲ್ಲಿ ಬಿಜೆಪಿ ಟಿಕೆಟ್ ಘೋಷಣೆಯಾಗಲಿದೆ. ಭಾರತೀಯ ಜನತಾ ಪಾರ್ಟಿಯ ನಿರ್ಧಾರಕ್ಕೆ ನಾವೆಲ್ಲ ಬದ್ಧರಾಗಿದ್ದೇವೆ ಎಂದರು.

ರಾಜಕೀಯದಲ್ಲಿ ಗೆಲ್ಲುವ ಕ್ಷೇತ್ರವನ್ನು ಎಲ್ಲರೂ ಕೇಳುತ್ತಾರೆ. ಸೀಟು ಕೇಳುವಾಗ ಗೊಂದಲ ಆಗುತ್ತದೆ, ಇದಕ್ಕೂ ಚುನಾವಣೆಗೂ ಸಂಬಂಧ ಇಲ್ಲ. ನಾನು ಸ್ಪರ್ಧೆ ಮಾಡೇ ಮಾಡುತ್ತೇನೆ, ಚುನಾವಣಾ ಮಂಡಳಿ ನಿರ್ಧಾರಕ್ಕೆ ಬದ್ಧ ಎಂದು ಶೋಭಾ ಕರಂದ್ಲಾಜೆ ಹೇಳಿದರು.

ಬಹಳ ದೊಡ್ಡ ಪ್ರಮಾಣದಲ್ಲಿ ಎಲ್ಲರ ಕ್ಷೇತ್ರಗಳಲ್ಲಿ ಕೆಲಸ ಆಗಿದೆ. ರಸ್ತೆ, ರೈಲ್ವೇ, ಅಮೃತ ರೈಲ್ವೇ ಯೋಜನೆಗಳು ಜಾರಿಗೆ ಬಂದಿದೆ. ಯಾವುದೇ ಹಳ್ಳಿಗೆ ಹೋದರೂ ಜನ ಅಭಿವೃದ್ಧಿ ಕಂಡಿದ್ದಾರೆ. ಅಭಿವೃದ್ಧಿಯ ಆಧಾರದಲ್ಲಿ ನಾವು ವೋಟ್ ಕೇಳುತ್ತೇವೆ. ಕರ್ನಾಟಕದಲ್ಲಿ ಶೇಕಡಾ 100 ರಷ್ಟು ಸೀಟ್ ಬರುತ್ತದೆ ಅನ್ನೋದು ನಮ್ಮ ವಿಶ್ವಾಸವಾಗಿದೆ. ಮೋದಿಯನ್ನ ಜನ ಪ್ರೀತಿಸುತ್ತಾರೆ, ಮೋದಿಯನ್ನ ಜನ ಗೆಲ್ಲಿಸುತ್ತಾರೆ ಎಂದರು.

**ಎರಡು ಬಾರಿ ಗೆಲ್ಲಿಸಿದ್ದು ಮೋದಿ ಮುಖ ನೋಡಿ:** ಚಿಕ್ಕಮಗಳೂರಿನ ಪಾಂಚಜನ್ಯ ಕಚೇರಿಯಲ್ಲಿ ನೂತನ ಕಾರ್ಯಕರ್ತರ ಪದಗ್ರಹಣ ಕಾರ್ಯಕ್ರಮದಲ್ಲಿ ಸಿಟಿ ರವಿ ಅವರು ಕ್ಷೇತ್ರದ ಟಿಕೆಟ್ ವಿಚಾರವಾಗಿ ನಡೆಯುತ್ತಿರುವ ಜಟಾಪಟಿ ಬಗ್ಗೆ ಮಾತನಾಡಿದರು. ಯಾರು ಅಭ್ಯರ್ಥಿ ಎಂಬುದು ಮುಖ್ಯವಲ್ಲ. ಯಾರೇ ಅಭ್ಯರ್ಥಿ ಆಗಲಿ ಮೋದಿ ಮುಖ ನೋಡಿ ಗೆಲ್ಲಿಸಿ. ಹಿಂದೆ ಎರಡು ಬಾರಿ ಗೆಲ್ಲಿಸಿದ್ದೂ ಮೋದಿ ಮುಖ ನೋಡಿ. ಇದೀಗ ಯಾವುದೇ ರಾಜಿ ಇಲ್ಲದೆ ಮೂರನೇ ಬಾರಿಯೂ ಮೋದಿಯವರ ಮುಖ ನೋಡಿಯೇ ಗೆಲ್ಲಿಸಿ ಎಂದು ಮನವಿ ಮಾಡಿದರು. ಅಲ್ಲದೆ, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಲ್ಲೂ ಬಿಜೆಪಿ ಗೆಲ್ಲಿಸಿ. ಒಂದೊಂದು ವೋಟ್, ಒಂದೊಂದು ಸೀಟು ಬಹಳ ಮುಖ್ಯ ಎಂದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com